ಸಂಪುಟ: 13 Volume ಸಂಚಿಕೆ: 333 Issue ಪುಟಗಳು 08 Pages ಮಂಗಳವಾರ 24 ಫೆಬ್ರವರಿ 2026 ₹6 PRGINO.120927 (RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ
ಕನ್ನಡ ಕಿರಣ
Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ
ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಬಹಳಷ್ಟು ಜನರಿಗೆ ಸ್ವಾತಂತ್ರ್ಯ ಬೇಕಿಲ್ಲ. ಏಕೆಂದರೆ ಸ್ವಾತಂತ್ರ್ಯದ ಜತೆಗೆ ಜವಾಬ್ದಾರಿಯು ಇರುತ್ತದೆ. ಬಹಳಷ್ಟು ಜನ ಜವಾಬ್ದಾರಿಯ ಬಗ್ಗೆ ಭಯ ಹೊಂದಿದ್ದಾರೆ.

–ಸಿಗ್ಮಂಡ್ ಫ್ರಾಯ್ಡ್

# ಸಂಪುಟ ಪುನಾರಚನೆ ಸಂಕಟ

## ಮುಗಿಯದ ಕಾಂಗ್ರೆಸ್ ಕುರ್ಚಿಯ ಕದನ | ಮೊದಲ ಬಾರಿ ಗೆದ್ದ 31 ಶಾಸಕರಿಂದ ನೇರವಾಗಿ ಹೈಕಮಾಂಡ್‌ಗೆ ಪತ್ರ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ದಿನ ಬೆಳಗಾದರೆ ರಾಜ್ಯ ಕಾಂಗ್ರೆಸ್ ಪಕ್ಷದಲ್ಲಿ ಕುರ್ಚಿಯಕದನದ ನಡುವೆ ಇದೀಗ ರಾಜ್ಯ ಸಂಪುಟ ಪುನಾರಚನೆ ಕೂಗು ಕೇಳಿಬಂದಿದೆ. ಇದರಿಂದ ಹೈ ಕಮಾಂಡ್‌ಗೆ ಸಂಪುಟ ಪುನಾರಚಣೆಯ ಸಂಕಟ ಎನ್ನುವಂತಾಗಿದೆ. ಅಧಿಕಾರ ಹಂಚಿಕೆ ಗದ್ದಲ ನಡುವೆ ಕೈ ಶಾಸಕರು ಹೈಕಮಾಂಡ್‌ಗೆ ಪತ್ರ ಬರೆದಿರುವುದು ಚರ್ಚೆಗೆ ಗ್ರಾಸವಾಗಿದೆ.

**ನಮಗೂ ಅವಕಾಶ ಕೊಡಿ:** ಕಾಂಗ್ರೆಸ್ ಹೈಕಮಾಂಡ್ ನಾಯಕರಿಗೆ ಪತ್ರ ಬರೆದಿದ್ದು, ಸಂಪುಟ ವಿಸ್ತರಣೆ ಮಾಡಿ, ನಮಗೂ ಅವಕಾಶ ಕೊಡಿ ಎಂದು ಧ್ವನಿ ಎತ್ತಿದ್ದಾರೆ. ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸುರ್ಜೆವಾಲ ಕರ್ನಾಟಕ ಪ್ರವಾಸದಲ್ಲಿರುವಾಗಲೇ ಸಂಪುಟ ಪುನರ್ ರಚನೆ ಬೇಡಿಕೆ ಬಂದಿರುವುದು ಮಹತ್ವ ಪಡೆದಿದೆ. ಶಾಸಕರು ಬರೆದಿರುವ ಪತ್ರದಲ್ಲಿ ತಮ್ಮ ಬೇಡಿಕೆ ಮುಂದಿಟ್ಟಿದ್ದಾರೆ. ಕಾಂಗ್ರೆಸ್‌ನಿಂದ ಮೊದಲ ಬಾರಿ 38 ಶಾಸಕರು ಆಯ್ಕೆಯಾಗಿದ್ದಾರೆ. ಯುವಕರಿಗೆ ಅವಕಾಶ ನೀಡುವುದು ಈ ಕ್ಷಣದ ಬೇಡಿಕೆಯಾಗಿದೆ.



### ಸಚಿವ ಸ್ಥಾನದ ಬೇಡಿಕೆ

ವಿಧಾನಸಭೆ ಚುನಾವಣೆ ವೇಳೆ ಕಾಂಗ್ರೆಸ್ ಚಹ್ನೆಯಡಿಯಲ್ಲಿ ಮೊದಲ ಬಾರಿ ಗೆದ್ದಿರುವ ಐದು ಜನ ಶಾಸಕರು ಹೊಸತೊಮದು ಬೆಡಿಕೆ ಇಟ್ಟಿದ್ದಾರೆ. ಅವರ ಪ್ರಕಾರ, ನಮಗೂ ಸಚಿವ ಸ್ಥಾನ ಕೊಡಿ. ಬೇರೆ ಸರ್ಕಾರದಲ್ಲಿ ಮೊದಲ ಬಾರಿ ಶಾಸಕರು ಸಿಎಂ ಆಗಿದ್ದಾರೆ. ಹೊಸಬರಿಗೆ ಅವಕಾಶ ನೀಡಿದ–ರೆ ಮುಂದಿನ ಚುನಾವಣೆ ಗೆಲ್ಲಲು ಸಹಕಾರಿ. ಪಕ್ಷ ನಿಷ್ಠೆ, ಸೈದ್ಧಾಂತಿಕವಾಗಿ ಗಟ್ಟಿಯಾಗಿರುವವರಿಗೆ ಅವಕಾಶ ಕೊಡಿ ಎಂದು ಶಾಸಕರು ಹೈಕಮಾಂಡ್‌ಗೆ ಪತ್ರ ಬರೆದು ವಿವರಿಸಿದ್ದಾರೆ.

### ಇವರ ಹಿಂದಿರುವವರು..?

ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸುರ್ಜೆವಾಲ ಕರ್ನಾಟಕ ಪ್ರವಾಸದಲ್ಲಿರುವಾಗಲೇ ಸಂಪುಟ ಪುನಾರಚಣೆಯ ಸದ್ದು ಕೇಳಿ ಬಂದಿದೆ. ಏತನ್ಮಧ್ಯೆ ಕಾಂಗ್ರೆಸ್ ಹೈಕಮಾಂಡ್ ಮಲ್ಲಿಕಾರ್ಜುನ ಖರ್ಗೆ ಹಾಗೂ ವರಿಷ್ಠ ರಾಹುಲ್ ಗಾಂಧಿ ಅವರಿಗೆ ನೇರವಾಗಿ ಮೊದಲ ಬಾರಿಗೆ ಪತ್ರ ಬರೆದಿದ್ದು ಕುತೂಹಲ ಕೆರಳಿಸಿದೆ. ಇದರಲ್ಲಿ ಹೆಚ್ಚಾಗಿ ಮೊದಲ ಬಾರಿಗೆ ಗೆದ್ದ ಶಾಸಕರು ಈ ಧೈರ್ಯ ಮಾಡಿದ್ದು ಇವರ ಹಿಂದೆ ಯಾರಿದ್ದಾರೆ ಎನ್ನುವ ಪ್ರಶ್ನೆಗೆ ಉತ್ತರ ನಿಗೂಢವಾಗಿದೆ.

### ಪತ್ರ ಬರೆದ 31 ಶಾಸಕರು ಇವರು..

ಶಾಸಕರಾದ ಎ.ಎಸ್.ಪೊನ್ನಣ್ಣ, ಭೀಮಸೇನ ಚಿಮ್ಮನಕಟ್ಟಿ, ಪ್ರದೀಪ್ ಈಶ್ವರ್, ಇಕ್ಬಾಲ್ ಹುಸೇನ್, ಎನ್.ಟಿ.ಶ್ರೀನಿವಾಸ, ಅಶೋಕ್ ಕುಮಾರ್ ರೈ, ಎನ್.ಶ್ರೀನಿವಾಸ, ದರ್ಶನ್ ಧ್ರುವನಾರಾಯಣ, ಶಿವಗಂಗಾ ಬಸವರಾಜು, ವಿಶ್ವಾಸ್ ವೈದ್ಯ, ನಾರಾ ಭರತ್ ರೆಡ್ಡಿ, ಪ್ರಕಾಶ್ ಕೋಳಿವಾಡ, ಕೆ.ಎಸ್.ಆನಂದ, ಮಂಥರ್ ಗೌಡ, ಚನ್ನಾರೆಡ್ಡಿ ಪಾಟೀಲ್, ದೇವೇಂದ್ರಪ್ಪ. ಡಿ.ರವಿಶಂಕರ್, ನಯನಾ ಮೋಟಮ್ಮ, ರಾಜಾವೇಣುಗೋಪಾಲ ನಾಯಕ, ಮಹೇಂದ್ರ ತಮ್ಮಣ್ಣನವರ್, ಎ.ಸಿ.ಶ್ರೀನಿವಾಸ, ಅಶೋಕ್ ಮನಗೂಳಿ, ಪಿ.ರವಿಕುಮಾರ್, ಬಾಬಾಸಾಹೇಬ್ ಪಾಟೀಲ್ ಸೇರಿ 31 ಶಾಸಕರು.

### ಎಚ್ಚರಿಕೆ–ಪರಂ ಭೇಟಿ..?

ರಾಜ್ಯ ಕಾಂಗ್ರೆಸ್ ಪಕ್ಷದೊಳಗಿನ ನಾಯಕತ್ವ ವಿಚಾರ ಕುರಿತ ಚರ್ಚೆಗಳು ತೀವ್ರಗೊಳ್ಳುತ್ತಿರುವ ನಡುವೆಯೇ ಗೃಹ ಸಚಿವ ಡಾ.ಜಿ. ಪರಮೇಶ್ವರ ಅವರು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರನ್ನು ಭೇಟಿ ಮಾಡಿದ್ದು, ರಾಜಕೀಯ ವಲಯದಲ್ಲಿ ಭಾರೀ ಚರ್ಚೆಗೆ ಕಾರಣವಾಗಿದೆ. ಖಾಸಗಿ ಹೋಟೆಲ್ ನಲ್ಲಿ ಕುಮಾರಸ್ವಾಮಿಯವರುನ್ನು ಪರಮೇಶ್ವರ್ ಅವರು ಭೇಟಿ ಮಾಡಿರುವ ಬಗ್ಗೆ ಸ್ಪಷ್ಟನೆ ಕೊಟ್ಟಿರುವ ಗಣ್ಯರು, ಖಾಸಗಿ ವಿಷಯ ಎಂದಿದ್ದಾರೆ.



ಮಂತ್ರಾಲಯ ಕ್ಷೇತ್ರದ ಶ್ರೀ ಗುರು ರಾಘವೇಂದ್ರ ಸ್ವಾಮಿಗಳ ಸನ್ನಿಧಿಯಲ್ಲಿ ಭಾನುವಾರ ನಡೆದ ಶ್ರೀ ಗುರುರಾಯರ ವೈಭವೋತ್ಸವದಲ್ಲಿ ಕುಟುಂಬ ಸಮೇತ ಭಾಗಿಯಾದ ಕೇಂದ್ರ ಸಚಿವ ಶ್ರೀ ಹೆಚ್.ಡಿ. ಕುಮಾರಸ್ವಾಮಿ ಅವರು. ಈ ಸಂದರ್ಭದಲ್ಲಿ ಗುರುರಾಯರ ದರ್ಶನ ಪಡೆದರಲ್ಲದೆ, ತದನಂತರ ಪರಮಪೂಜ್ಯ ಶ್ರೀ ಶ್ರೀ ಶ್ರೀ ಸುಬುಧೇಂದ್ರ ತೀರ್ಥರ ಆಶೀರ್ವಾದವನ್ನು ಪಡೆದುಕೊಂಡರು.



ಸಿಂದಗಿ: ಮಲ್ಲಮ್ಮ ನುಡಿ ಪತ್ರಿಕೆಯ ಪ್ರಧಾನಸಂಪಾದಕರಾದ ಮಾಣಿಕರೆಡ್ಡಿ ಕೌಡಾಳೆ ರವರನ್ನು ಸಿಂದಗಿಯ ಮಲಿಕ್ ಖತಿಬ್, ರಾಜ್ಯ ಅಲ್ಪ ಸಂಖ್ಯಾತ ಹಿತ ರಕ್ಷಣಾ ಸಮಿತಿ ಅಧ್ಯಕ್ಷ, ಕಾಂಗ್ರೆಸ್ ಪಕ್ಷ ಮಾಜಿ ಬ್ಲಾಕ್ ಅದ್ಯಕ್ಷ ಹಾಗೂ ರೆಡ್ಡಿ ಸಮಾಜ ಮುಖಂಡ ಶಿವನಗೌಡ ರೆಡ್ಡಿ, ಅಬ್ಬು ಖತಿಬ್ ಕಾಂಗ್ರೇಸ್ ಮುಖಂಡ, ಅಂಬರೇಶ ಚೌಗ್ಲೆ. ಸೇರಿದಂತೆ ಇತರರಿದ್ದರು.










# ಕಾನೂನು ಸಲಹೆಗಾರರಾಗಿ ನ್ಯಾಯವಾದಿ ಗುಂಡು ರೆಡ್ಡಿ ಗುಡಾಡಿ ನೇಮಕ




• **ಮಲ್ಲಮ್ಮ ನುಡಿ ವಾರ್ತೆ ಬೀದರ**

ಕನ್ನಡ ಸೇನೆ ಕರ್ನಾಟಕ ಸಂಘಟನೆಯ ಬಲಿಷ್ಠ ಪಡಿಸುವ ನಿಟ್ಟಿನಲ್ಲಿ.ನಾಡು ನುಡಿ ನೆಲ ಜಲಕ್ಕಾಗಿ ಹೋರಾಟ ಮಾಡಲು ಬೀದರ ಜಿಲ್ಲಾ ಕಾನೂನು ಸಲಹೆಗಾರರಾಗಿ ನ್ಯಾಯವಾದಿ ಗುಂಡುರೆಡ್ಡಿ ಗುಡಾಡಿ ಅವರನ್ನು ನೇಮಕ ಮಾಡಿ ರಾಜ್ಯ ಉಪಾಧ್ಯಕ್ಷರಾದ ಡಾ.ರವಿ ಸ್ವಾಮಿ ನಿರ್ಣಾ ಅವರ ಆದೇಶದ ಮೇರೆಗೆ ಆಯ್ಕೆ ಮಾಡಲಾಗಿದೆ ಎಂದು ಕನ್ನಡ ಸೇನೆ ಕರ್ನಾಟಕ ಬೀದರ ಜಿಲ್ಲಾಧ್ಯಕ್ಷರಾದ ಸುಭಾಷ್ ಕೆನಡೆ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ,

ಇದೆ ಸಂದರ್ಭದಲ್ಲಿ ಜಿಲ್ಲಾ ಉಪಾಧ್ಯಕ್ಷರಾದ ಪ್ರಭುಶೆಟ್ಟಿ ಪಾಸರ್ಗೆ, ಬೀದರ ತಾಲೂಕಾ ಅಧ್ಯಕ್ಷರಾದ ರಾಜಶೇಖರ ಮಂಗಲಪೆಟ್, ಚನ್ನಬಸವ ಘಾಳೆ ,ರಮೇಶ ಧೂಳ, ಆನಂದ ಶಿಕೇನಪುರ, ಮಲ್ಲಿಕಾರ್ಜುನ ಮಡಿವಾಳ ಸೇರಿದಂತೆ ಅನೇಕ ಕಾರ್ಯಕರ್ತರು ವಕೀಲರು ಭಾಗವಹಿಸಿದರು,

# ಶಿವಾಜಿ ಮಹಾರಾಜರ ಆದರ್ಶಗಳು ಮಕ್ಕಳಿಗೆ ಮಾದರಿ: ಮೇತ್ರಸ್ಕರ್



• **ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ**

ಛತ್ರಪತಿ ಶಿವಾಜಿ ಮಹಾರಾಜರು ಮೊಘಲ್ ಮತ್ತು ಆದಿಲ್ ಶಾಹಿ ಆಡಳಿತದ ವಿರುದ್ಧ ಹೋರಾಡಿ ಹಿಂದವಿ ಸ್ವರಾಜ್ಯವನ್ನು ಪ್ರತಿಷ್ಟಿಪಿಸಿದರು ಗೆರಿಲ್ಲಾ ಯುದ್ಧ ತಂತ್ರ ಮತ್ತು ಬಲಿಷ್ಠ ನೌಕಾಪಡೆಯ ಮೂಲಕ ಪ್ರಸಿದ್ಧರದರು. ಬಾಲ್ಯದಲ್ಲಿಯೇ ಯುದ್ದಕಲೆ ರಾಜನೀತಿ ಮತ್ತು ಆಡಳಿತ ತರಬೇತಿ ಪಡೆದರು ತಾಯಿಯಿಂದ ಧೈರ್ಯ ಮತ್ತು ನೀತಿ ಪಾಠ ಕಲಿತು ಮರಾಠ ಸಾಮ್ರಾಜ್ಯವನ್ನು ಕಟ್ಟಿದಂತ ಧೀಮಂತ ರಾಜ, ಇವರಲ್ಲಿ ದೇಶ ಪ್ರೇಮ, ಸಮಾನತೆ, ಧಾರ್ಮಿಕ ಸಹಿಷ್ಣುತೆ, ಮಹಿಳೆಯರ ಬಗ್ಗೆ ಅಪಾರ ಗೌರವವನ್ನು ಹೊಂದಿದ್ದರು ಇವರ ಆದರ್ಶಗಳು ಮತ್ತು ಮಾರ್ಗದರ್ಶನವು ನಮ್ಮ ಮಕ್ಕಳಿಗೆ ಮಾದರಿಯಾಗಲಿದೆ ಎಂದು ತಾಲೂಕಿನ ನಿರ್ಣಾ ಗ್ರಾಮದಲ್ಲಿ ಆಯೋಜಿಸಿದ್ದ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮದಲ್ಲಿ ಶಿವಾಜಿ ಕಮಿಟಿ ಅಧ್ಯಕ್ಷ ರಾಜಕುಮಾರ್ ಮೇತ್ರಸ್ಕರ್ ಮಾತನಾಡುತ್ತ ನುಡಿದರು. ಉಪಾಧ್ಯಕ್ಷ ಸಂದೀಪ್ ರೆಡ್ಡಿ, ಸುಭಾಷ ಜಮ್ಮ, ಶರಣು ಮೈಲುರ್, ಸಿದ್ದಾರೆಡ್ಡಿ, ಅನೀಲಾರೆಡ್ಡಿ ಲಚನಗಾರ್, ಭರತರೆಡ್ಡಿ ಚಿಟನಳ್ಳಿ, ಬಸವಂತರೆಡ್ಡಿ ಗುಡಾಡಿ, ನಾಗರಾಜ ಉಪಾರ, ವೀರೇಶ ಸಾಗರ್ ಸೇರಿದಂತೆ ಇತರರು ಉಪಸ್ಥಿತರಿದ್ದರು. ನಂತರ ಅನ್ನ ದಾಸೋಹ ಏರ್ಪಡಿಸಿದ್ದರು.

# ರೋಚಕ ಕ್ರಿಕೆಟ್ ಪಂದ್ಯಾವಳಿಯಲ್ಲಿ ಮುಧೋಳ(ಬಿ) ತಂಡಕ್ಕೆ ಭರ್ಜರಿ ಜಯ



(ವರದಿ:ಪರಮೇಶ ರಾಂಪುರೆ)

• **ಮಲ್ಲಮ್ಮ ನುಡಿ ವಾರ್ತೆ ಕಮಲನಗರ**

**ದಿ.ಅನಿಲ ಸಾವಳೆ ಅವರ ಪ್ರಥಮ ಪುಣ್ಯಸ್ಮರಣೆಯ ಅಂಗವಾಗಿ ಆಯೋಜಿಸಿದ್ದ ಬೃಹತ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ಟ್ರೋಫಿ ಮತ್ತು ನಗದು ಬಹುಮಾನ ವಿತರಣೆ ಮಾಡಲಾಯಿತು:**

» **ಪ್ರಥಮ ಪ್ರಶಸ್ತಿ: ಮುಧೋಳ(ಬಿ) ತಂಡಕ್ಕೆ ಟ್ರೋಫಿ ಮತ್ತು 51,000/– ನಗದು ಬಹುಮಾನ.**

» **ದ್ವಿತೀಯ ಪ್ರಶಸ್ತಿ: ತೋರಣಾ–1 ತಂಡಕ್ಕೆ ಟ್ರೋಫಿ ಮತ್ತು 21,000/– ನಗದು ಬಹುಮಾನ.**

» **ತೃತೀಯ ಪ್ರಶಸ್ತಿ: ತೋರಣಾ–2 ತಂಡಕ್ಕೆ ಟ್ರೋಫಿ ಮತ್ತು 11,000/– ನಗದು ಬಹುಮಾನ.**

ತಾಲೂಕಿನ ತೋರಣಾ ಗ್ರಾಮದಲ್ಲಿ ಇತ್ತೀಚೆಗೆ ಹಮ್ಮಿಕೊಳ್ಳಲಾಗಿದ್ದ ದಿ.ಅನಿಲ ಸಾವಳೆ ಅವರ ಪ್ರಥಮ ಪುಣ್ಯಸ್ಮರಣೆಯ ಅಂಗವಾಗಿ ಆಯೋಜಿಸಿದ್ದ ಬೃಹತ್ ಕ್ರಿಕೆಟ್ ಪಂದ್ಯಾವಳಿಯು ಅತ್ಯಂತ ಯಶಸ್ವಿಯಾಗಿ ಮುಕ್ತಾಯಗೊಂಡಿತು. ಫೈನಲ್ ಪಂದ್ಯದಲ್ಲಿ ಅದ್ಭುತ ಪ್ರದರ್ಶನ ನೀಡಿದ ಮುಧೋಳ ತಂಡವು ಎದುರಾಳಿ ತಂಡವನ್ನು ಸೋಲಿಸಿ ಚಾಂಪಿಯನ್ ಆಗಿ ಹೊರಹೊಮ್ಮಿತು.

ಈ ಸಂದರ್ಭದಲ್ಲಿ ಬಹುಮಾನ ವಿತರಣೆ ಮತ್ತು ಸಾಮಾಜಿಕ ಜಾಗೃತಿ ಕಾರ್ಯಕ್ರಮ ಆಯೋಜನೆ ಕಾರ್ಯಕ್ರಮದಲ್ಲಿ ವಿಜೇತ ಮುಧೋಳ(ಬಿ) ತಂಡಕ್ಕೆ ಕಮಲನಗರ ಪೊಲೀಸ್ ಠಾಣೆಯ ಪಿ.ಎಸ್.ಐ ಆಶಾ ರಾಠೋಡ ಅವರು ಆಕರ್ಷಕ ಟ್ರೋಫಿಯನ್ನು ವಿತರಿಸಿ ಶುಭ ಹಾರೈಸಿದರು.

ಕೇವಲ ಕ್ರೀಡೆಯಷ್ಟೇ ಅಲ್ಲದೆ, ಈ ಕಾರ್ಯಕ್ರಮವು ಸಾಮಾಜಿಕ ಜಾಗೃತಿಗೂ ವೇದಿಕೆಯಾಯಿತು. ಕಮಲನಗರ ಪೊಲೀಸ್ ಠಾಣೆ–ಯ ಸಹಯೋಗದೊಂದಿಗೆ ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೆಟ್ ವಿತರಣೆ ಮಾಡುವ ಮೂಲಕ ರಸ್ತೆ ಸುರಕ್ಷತೆಯ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಯಿತು.

ಸದರಿ ಕಾರ್ಯಕ್ರಮದಲ್ಲಿ ಗೌರವ ನಮನ: ಕಾರ್ಯಕ್ರಮದ ಆರಂಭದಲ್ಲಿ ದಿ. ಅನಿಲ ಸಾವಳೆ (ಮಾಜಿ ಗ್ರಾ.ಪಂ. ಅಧ್ಯಕ್ಷರು, ತೋರಣಾ) ಅವರಿಗೆ ಪುಷ್ಪ ನಮನ ಸಲ್ಲಿಸಲಾಯಿತು.

ಹೆಲ್ಮೆಟ್ ವಿತರಣೆ: ರಸ್ತೆ ಅಪಘಾತಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸವಾರರಿಗೆ ಉಚಿತವಾಗಿ ಹೆಲ್ಮೆಟ್ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಪೊಲೀಸ್ ಠಾಣಾ ಪ್ರಮುಖರು, ಗ್ರಾಮ ಪಂಚಾಯತ ತೋರಣಾ ಅಧ್ಯಕ್ಷ ಸುನಿಲ ಶೀಗರೆ, ಪಿಡಿಓ ಮಲ್ಲೇಶ, ಹೊಳಸಮುದ್ರ ಗ್ರಾಮದ ಯುವ ಮುಖಂಡ ರಾಹುಲ ಪಾಟೀಲ, ಅರಹಂತ ಸಾವಳೆ. ಪಂದ್ಯಾವಳಿ ಆಯೋಜ–ಕರಾದ ನಾಮದೇವ ಪಾಂಚವಾರೆ, ಸುನಿಲ ಶೀಗರೆ, ಚಂದ್ರಕಾಂತ ಕಾಳೆ, ಪವನ ಪಾಂಚವಾರೆ, ವಿಜಯಕುಮಾರ ತೇಗಂಪುರೆ ಹಾಗೂ ಗ್ರಾಮದ ಪ್ರಮುಖರು, ಕ್ರೀಡಾಭಿಮಾನಿಗಳು ಹಾಗೂ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ಪಂದ್ಯಾವಳಿಯಲ್ಲಿ ಭಾಗವಹಿಸಿದ ಎಲ್ಲಾ ಆಟಗಾರರ ಕ್ರೀಡಾ ಸ್ಫೂರ್ತಿಯನ್ನು ಗಣ್ಯರು ಶ್ಲಾಘಿಸಿದರು. ವಿಜೇತ ತಂಡದ ಸದಸ್ಯರು ಟ್ರೋಫಿ ಹಾಗೂ ಪದಕಗಳನ್ನು ಸ್ವೀಕರಿಸಿ ಸಂಭ್ರಮಿಸಿದರು.

# ಕನ್ನಡ ಭಾಷೆ – ಸಂಸ್ಕೃತಿಗೆ ಹೊಸ ಚೈತನ್ಯ ನೀಡಿದ 3ನೇ ಕಸಾಪ ಸಮ್ಮೇಳನ

• **ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ**

ಕನ್ನಡ ಭಾಷೆ ಸಂಸ್ಕೃತಿ ಬಗ್ಗೆ ಪ್ರತಿಯೊಬ್ಬರಿಗೂ ಅಭಿಮಾನ ಇರಬೇಕೆಂದು ಶಾಸಕ ಡಾ. ಸಿದ್ದು ಪಾಟೀಲ್ ಹೇಳಿದರು. ಪಟ್ಟಣದಲ್ಲಿ ಮೂರನೇ ಸಾಹಿತ್ಯ ಸಮ್ಮೇಳನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಸರ್ಕಾರ ಕನ್ನಡ ಶಾಲೆಗಳು ಯಾವುದೇ ಖಾಸಗಿ ಆಂಗ್ಲ ಮಾಧ್ಯಮ ಶಾಲೆಗಳಿಗೆ ಕಮ್ಮಿ ಇಲ್ಲ ಕನ್ನಡ ಶಾಲೆ ಅಭಿವೃದ್ಧಿಗಾಗಿ




ಸರ್ಕಾರ ಸಾಕಷ್ಟು ಅನುದಾನ ನೀಡುತ್ತಿದೆ. ಹೀಗಾಗಿ ಎಲ್ಲಾ ಪಾಲಕರು ತಮ್ಮ ಮಕ್ಕಳನ್ನು ಸರ್ಕಾರಿ ಕನ್ನಡ ಶಾಲೆಗಳಲ್ಲಿ ಓದಿಸಬೇಕು ಎಂದರು. ಪಟ್ಟಣದಲ್ಲಿ ಕನ್ನಡ ಭವನ ನಿರ್ಮಾಣಕ್ಕೆ 10 ಲಕ್ಷ ಅನುದಾನ ನೀಡಲಾಗುವುದು ಎಂದು ಭರವಸೆ ನೀಡಿದರು. ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ್ ಪಾಟೀಲ್ ಮಾತನಾಡಿ, ಚಿಟಗುಪ್ಪ ಪಟ್ಟಣದಲ್ಲಿ ಕನ್ನಡ ಭವನ ನಿರ್ಮಾಣಕ್ಕೆ ಅನುದಾನ ನೀಡಲಾಗುವುದು ಶಿಕ್ಷಕರು ಶಾಲೆಯ ಗುಣಮಟ್ಟವನ್ನು ಕಾಪಾಡಿಕೊಂಡು ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣದ ಜೊತೆಗೆ ಸಂಸ್ಕಾರ ನೀಡಬೇಕು ಎಂದರು. ಸಾಹಿತಿ ಸಿದ್ದು ಯಾಪಲ ಪರವಿ ಮಾತನಾಡಿ, ಆಂಗ್ಲ ಭಾಷೆ ಕಲಿತರೆ ದೊಡ್ಡ ಸಾಧನೆ ಎಂಬ ಕಲ್ಪನೆ ಸರಿಯಲ್ಲ. ಮಕ್ಕಳನ್ನು ಸರ್ಕಾರಿ ಕನ್ನಡ ಶಾಲೆಗಳಲ್ಲಿ ಓದಿಸಿ. ಭಾಷಾ ದ್ವೇಷ ಬೆಳೆಸಿದರೆ ಎಲ್ಲಾ ಭಾಷೆಗಳಿಗೆ ಉಳಿಗಾಲ ಇಲ್ಲ. ಕನ್ನಡ ಭವನ ನಿರ್ಮಾಣಕ್ಕೆ ಅನುದಾನ ಭರವಸೆ.

ಕನ್ನಡ ಭಾಷೆಯ ಬಗ್ಗೆ ಅಭಿಮಾನ ಇರಬೇಕು, ಆದರೆ ಬೇರೆ ಭಾಷೆಗಳ ಬಗ್ಗೆ ದುರಾಭಿಮಾನ ಸಲ್ಲದು ಬೇರೆ ಭಾಷೆಗಳನ್ನು ನಾವು ಪ್ರೀತಿಸಿ, ಗೌರವಿಸಬೇಕು ಭಾಷಾ ದ್ವೇಷ ಬೆಳೆಸಿದರೆ ಎಲ್ಲಾ ಭಾಷೆಗಳಿಗೆ ಉಳಿಗಾಲ ಇಲ್ಲ ಎಂದರು. ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಸುರೇಶ್ ಚನಶೆಟ್ಟಿ ಮಾತನಾಡಿ, ಸಾಹಿತ್ಯ ಸಂಸ್ಕೃತಿ ಉಳಿಸಿ ಬೆಳೆಸುವ ಕೆಲಸ ನಾವೆಲ್ಲರೂ ಮಾಡಬೇಕಾಗಿದೆ. ಕನ್ನಡ ಉಳಿಸಬೇಕು ಎಂದು ಕೇಳಿಕೊಳ್ಳುವುದು ಎಂಬುದು ನೋವಿನ ಸಂಗತಿಯಾಗಿದೆ ಹೀಗಾಗಿ ಹೆಚ್ಚಾಗಿ ಕನ್ನಡ ಭಾಷೆ ಬೆಳಸಬೇಕು ಎಂದರು. ರೇಣುಕಾ ವೀರಗಂಗಾಧರ್ ಶಿವಾಚಾರ್ಯರು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಈ ಸಂದರ್ಭದಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ್, ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ್ ಗುಡಾಳ್, ಬಾಬುರಾವ್ ದಾನಿ, ರಾಜಪ್ಪ ಜಮಾದರ್, ಅಶೋಕಕುಮಾರ್ ಮಹೇಂದ್ರಕರ್, ಪ್ರೇಮಿಳಾ ರೆಡ್ಡಿ, ರಮೇಶ್ ಸಲಗರ್, ರವೀಂದ್ರ ರೆಡ್ಡಿ ಮಾಲಿ ಪಾಟೀಲ್, ಶೇಕ್ ಮೆಹಬೂಬ್ ಪಾಟೀಲ್, ಮಹಾರುದ್ರಪ್ಪ ಆಣದುರೆ, ರಾಜಶೇಖರ್ ಉಪ್ಪಿನ, ಡಾ. ರವಿ ಸ್ವಾಮಿ ನಿರ್ಣಾ, ಸುರೇಶ್ ಕುಂಬಾರ್, ದಿಲೀಪ್ ಔರಾದಕರ್, ಕಾಳಪ್ಪ ಕಟಗಿ, ಸಂಜೀವನ್ ಬೋಸ್ಲೆ, ಗುಂಡಪ್ಪ ಕೋರೆ, ಅನಿಲಕುಮಾರ್ ಸಿಂಧೆ, ಸೇರಿದಂತೆ ಇತರರು ಇದ್ದರು.

### ಸೌಲಭ್ಯಗಳು ಕಲ್ಪಿಸಿ : ನೇಳಗಿ

**“ಸಮ್ಮೇಳನಾಧ್ಯಕ್ಷ ಮಾಣಿಕ್ ನೇಳಗಿ ಮಾತನಾಡಿ, ಚಿಟಗುಪ್ಪ ತಾಲೂಕು ಎಂದು ಘೋಷಣೆಯಾಗಿ ವರ್ಷಗಳೇ ಕಳೆದಿವೆ ಆದರೆ ತಾಲೂಕು ಕೇಂದ್ರದಲ್ಲಿ ಸಿಗುವ ಸೌಲಭ್ಯಗಳು ಲಭಿಸುತ್ತಿಲ್ಲ ಹೀಗಾಗಿ ಸರ್ಕಾರ ಎತ್ತೆತ್ತುಕೊಂಡು ಚಿಟಗುಪ್ಪ ತಾಲೂಕು ಅಭಿವೃದ್ಧಿ ಮಾಡುವುದಕ್ಕೆ ಶ್ರಮಿಸಬೇಕು. ಚಿಟಗುಪ್ಪ ಪಟ್ಟಣಕ್ಕೆ ಹೊಸ ಬಸ್ ಡಿಪೋ ಕಲ್ಪಿಸಬೇಕು. ತಾಲೂಕೂ ಆಡಳಿತದ ಕಟ್ಟಡ ಶೀಘ್ರದಲ್ಲೇ ಆರಂಭಿಸುವುದು. ಪಟ್ಟಣದಲ್ಲಿಯೂ ಸಮುದಾಯ ಆರೋಗ್ಯ ಕೇಂದ್ರವನ್ನು ತಾಲೂಕು ಆಸ್ಪತ್ರೆಯಾಗಿ ಮೇಲ್ದರ್ಜೆಗೆ ಏರಿಸಬೇಕು. ಚಿಟಗುಪ್ಪ ಪಟ್ಟಣದಿಂದ ಜಿಲ್ಲಾ ಕೇಂದ್ರಕ್ಕೆ ಬಸ್ ಸೌಲಭ್ಯ ಹೆಚ್ಚಿಸಬೇಕು. ಉನ್ನತ ಶಿಕ್ಷಣಕ್ಕಾಗಿ ಸ್ನಾತಕೋತ್ತರ ಅಧ್ಯಯನ ಕೇಂದ್ರ ಸ್ಥಾಪನೆಗೆ ಮನವಿ ಮಾಡಿದರು.**

# ಮೊಬೈಲ್ ಕ್ಯಾಂಟಿನ್ ಸಹಾಯಧನಕ್ಕೆ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಬೀದರ**

2025–26ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ. ಯೋಜನೆಯಡಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು ಒಂದು ತಿಂಗಳ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ ಹಾಗೂ ತರಬೇತಿ ಪಡೆದ ಅರ್ಹ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟಿನ್ ನಡೆಸಲು ರೂ. 5 ಲಕ್ಷ ಸಹಾಯಧನ ನೀಡಲು ಉದ್ದೇಶಿಸಲಾಗಿದ್ದು, ಈ ಸಂಬಂಧ ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತರಬೇತಿ ಹಾಗೂ ಸಹಾಯಧನಕ್ಕಾಗಿ ಬೀದರ ಜಿಲ್ಲೆಯ ಪರಿಶಿಷ್ಟ ಜಾತಿಯ–07 ಮತ್ತು ಪರಿಶಿಷ್ಟ ಪಂಗಡದ–04 ಆಭ್ಯರ್ಥಿಗಳು ಸೇರಿ ಒಟ್ಟು 11 ಅಭ್ಯರ್ಥಿಗಳ ಗುರಿಯನ್ನು ಪ್ರಸ್ತುತ ಸಾಲಿನಲ್ಲಿ ನಿಗದಿಪಡಿಸಲಾಗಿದೆ. ಈ ತರಬೇತಿಯನ್ನು ವಸತಿ ಸಹಿತ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಅತಿಥ್ಯಕ್ಷೇತ್ರದ ಸಂಸ್ಥೆಗಳ ಮೂಲಕ ಕಾರ್ಯಕ್ರಮವನ್ನು ಜಾರಿಗೊಳಿಸಲು ಉದ್ದೇಶಿಸಿದೆ.

ಅರ್ಹತೆಗಳು: ಅರ್ಜಿದಾರರು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು. ಅರ್ಜಿ ದಾರರನ ವಯಸ್ಸು 20 ರಿಂದ 55 ವರ್ಷದೊಳಗಿರಬೇಕು. ಅರ್ಜಿ ದಾರರು 10ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು. (ನಿಗಧಿ ಪಡಿಸಿದ ಅಂಕದ ಮಿತಿ 45%). ಅಭ್ಯರ್ಥಿಗಳು ಲಘು ವಾಹನ ಪರವಾನಗಿ ಹೊಂದಿರತಕ್ಕದ್ದು. ನಗರ ಪ್ರದೇಶದ ಫಲಾನುಭವಿಗಳು ವಾರ್ಷಿಕ ಆದಾಯ ರೂ. 2.00 ಲಕ್ಷ ಮಿತಿಯಳಗಿರಬೇಕು. ಗ್ರಾಮಾಂತರ ಪ್ರದೇಶದ ಫಲಾನುಭವಿಗಳ ವಾರ್ಷಿಕ ಆದಾಯ ರೂ. 1.50 ಲಕ್ಷ ಮಿತಿಯೊಳಗಿರಬೇಕು. ಅರ್ಜಿದಾರರು ಯಾವ ಜಿಲ್ಲೆಯ ನಿವಾಸಿಯಾಗಿರುತ್ತಾರೋ ಅದೇ ಜಿಲ್ಲೆಯಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಜಿದಾರನು ಯಾವುದೇ ಸರ್ಕಾರಿ ಇಲಾಖೆಯಲ್ಲಿ ಅಥವಾ ನಿಗಮ ಮಂಡಳಿಗಳಲ್ಲಿ ಖಾಯಂ ನೌಕರಿಯಲ್ಲಿರಬಾರದು.

ಅರ್ಹರು ಅರ್ಜಿಯನ್ನು ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ ಕನ್ನಡ ಭವನ, ಚಿಕ್ಕಪೇಟ್, ಬೀದದಿಂದ ಪಡೆದು ಭರ್ತಿ ಮಾಡಿದ ಅರ್ಜಿಯನ್ನು 2026ನೇ ಮಾರ್ಚ.13 ರೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ ಕನ್ನಡ ಭವನ, ಚಿಕ್ಕಪೇಟ್, ಬೀದರ್ ಕಚೇರಿಗೆ ದ್ವಿಪ್ರತಿಯಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಬೀದರ ರವರ ದೂರವಾಣಿ ಸಂಖ್ಯೆ : 9900549319 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ತೋರಣಾ ಗ್ರಾಮದಲ್ಲಿ ನಾಳೆ ಸಡಗರದ ಶಿವಾಜಿ ಜಯಂತಿ ಉತ್ಸವ

**ಮಲ್ಲಮ್ಮ ನುಡಿ ವಾರ್ತೆ ಕಮಲನಗರ**



ತಾಲೂಕಿನ ತೋರಣಾ ಗ್ರಾಮದಲ್ಲಿ ಫೆ.25ರ ಬುಧವಾರ ದಂದು ಛತ್ರಪತಿ ಶಿವಾಜಿ ಮಹಾರಾಜರ ಸಾರ್ವಜನಿಕ ಜಯಂತ್ಯುತ್ಸವವನ್ನು ಅತ್ಯಂತ ಸಂಭ್ರಮದಿಂದ ಆಯೋಜಿಸಲಾಗಿದೆ. ಈ ಐತಿಹಾಸಿಕ ಕಾರ್ಯಕ್ರಮಕ್ಕೆ ಸುತ್ತಮುತ್ತಲಿನ ಗ್ರಾಮಸ್ಥರು ಹಾಗೂ ಶಿವಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಸಮಿತಿಯ ಅಧ್ಯಕ್ಷ ಅಜೀಂಕ್ಯ ದಯಾಸಾಗರ ಪಾಟೀಲ ಹಾಗೂ ಗ್ರಾಮಸ್ಥರು ಮನವಿ ಮಾಡಿದ್ದಾರೆ. ಸದರಿ ಕಾರ್ಯಕ್ರಮವು ಬುಧವಾರ ಮಧ್ಯಾಹ್ನ 3:00ಗೆ ಛತ್ರಪತಿ ಶಿವಾಜಿ ಮಹಾರಾಜರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮೆರವಣಿಗೆ ಶಿವಾಜಿ ವೃತ್ತದಿಂದ ಆರಂಭಗೊಂಡು ಸುಭಾಷ್ ಚಂದ್ರ ಬೋಸ ವೃತ್ತ, ಅಂಬೇಡ್ಕರ್ ವೃತ್ತ, ಜೀಜಾಮಾತಾ ವೃತ್ತ, ಬಸು ನಿಲ್ದಾಣ ಮಾರ್ಗವಾಗಿ ಮಹಾತ್ಮಾ ಗಾಂಧಿ ವೃತ್ತ, ಬಸವೇಶ್ವರ ವೃತ್ತ, ಹನುಮಾನ ಮಂದಿರದಿಂದ ಬಸ್ಸು ನಿಲ್ದಾಣದವರೆಗೆ ಜರಗುವುದು.

ಸಾಯಂಕಾಲ 6 ಗಂಟೆಗೆ ಬಸ್ ನಿಲ್ದಾಣ ಹತ್ತಿರ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಛತ್ರಪತಿ ಶಿವಾಜಿ ಮಹಾರಾಜರ ಜೀವನ ಚರಿತ್ರೆಯ ಬಗ್ಗೆ ಶ್ರೀರಂಗ ಪಾಟೀಲ ಶೇಂಡಗೆ ಅವರು ವ್ಯಾಖ್ಯಾಯನ ನೀಡಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಗ್ರಾಮದ ಹಿರಿಯರು, ಮುಖಂಡರು, ಸಮಾಜ ಸೇವಕರು, ಯುವಕರು ಪಾಲ್ಗೊಳ್ಳಲಿದ್ದಾರೆ. ತೋರಣಾ ಗ್ರಾಮದ ಸುತ್ತಮುತ್ತಲಿನ ಎಲ್ಲಾ ಸಮಾಜದ ಬಾಂಧವರು ಹಾಗೂ ಶಿವಾಜಿ ಮಹಾರಾಜರ ಅಭಿಮಾನಿಗಳು ಗ್ರಾಮದ ಮಹಿಳೆಯರು ಮಕ್ಕಳು ಕಾರ್ಯಕ್ರಮ ಯಶಸ್ವಿಗೊಳಿಸಲು ಪ್ರಕಟಣೆ ಮೂಲಕ ಕೋರಿದ್ದಾರೆ.

## ಸಂಪಾದಕೀಯ

ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349



# ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಬಜೆಟ್ ನಲ್ಲಿ ಹೆಚ್ಚಿನ ಅನುದಾನ ಅಗತ್ಯ

**ರಾಜ್ಯದ ಸಮಗ್ರ ಅಭಿವೃದ್ಧಿಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ ಪಾತ್ರ ಮಹತ್ತರವಾಗಿದೆ. ಈ ಭಾಗವು ಐತಿಹಾಸಿಕವಾಗಿ ಹಿಂದುಳಿದ ಪ್ರದೇಶವೆಂದು ಗುರುತಿಸಲ್ಪಟ್ಟಿದ್ದು, ಶಿಕ್ಷಣ, ಆರೋಗ್ಯ, ಕೈಗಾರಿಕೆ, ಮೂಲಸೌಕರ್ಯ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ಇನ್ನೂ ಸಮರ್ಪಕ ಅಭಿವೃದ್ಧಿಯನ್ನು ಕಾಣಬೇಕಾಗಿದೆ. ಈ ಹಿನ್ನೆಲೆಯಲ್ಲಿ ಸರ್ಕಾರವು ಪ್ರತಿವರ್ಷದ ಬಜೆಟ್‌ನಲ್ಲಿ ಕಲ್ಯಾಣ ಕರ್ನಾಟಕಕ್ಕೆ ಹೆಚ್ಚಿನ ಅನುದಾನವನ್ನು ಮೀಸಲಿಡುವುದು ಅತ್ಯಗತ್ಯವಾಗಿದೆ.**

ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ವಿಶೇಷ ಸ್ಥಾನಮಾನ ನೀಡಲಾಗಿದ್ದು, ಈ ಭಾಗದ ಅಭಿವೃದ್ಧಿಗಾಗಿ ಪ್ರತ್ಯೇಕ ಮಂಡಳಿಯೂ ಕಾರ್ಯನಿರ್ವಹಿಸುತ್ತಿದೆ. ಆದಾಗ್ಯೂ, ಅನೇಕ ಯೋಜನೆಗಳು ಕಾಗದದಲ್ಲೇ ಉಳಿದುಕೊಂಡಿರುವುದು ವಿಷಾದನೀಯ. ರಸ್ತೆ, ಕುಡಿಯುವ ನೀರು, ನೀರಾವರಿ, ಶಾಲೆಗಳು, ಆಸ್ಪತ್ರೆಗಳು, ಕೈಗಾರಿಕಾ ವಲಯಗಳು ಸೇರಿದಂತೆ ಮೂಲಭೂತ ಸೌಲಭ್ಯಗಳಿಗೆ ಸಂಬಂಧಿಸಿದ ಹಲವು ಯೋಜನೆಗಳು ನೆನಗುದಿಗೆ ಬಿದ್ದಿವೆ. ಇಂತಹ ಯೋಜನೆಗಳನ್ನು ತ್ವರಿತವಾಗಿ ಕೈಗೆತ್ತಿಕೊಂಡು ಪೂರ್ಣಗೊಳಿಸುವ ಮೂಲಕ ಜನರ ಜೀವನಮಟ್ಟವನ್ನು ಸುಧಾರಿಸಬಹುದು.

ಕೃಷಿ ಕ್ಷೇತ್ರವು ಈ ಭಾಗದ ಜನರ ಪ್ರಮುಖ ಆಧಾರವಾಗಿದೆ. ಆದರೆ ಸಮರ್ಪಕ ನೀರಾವರಿ ವ್ಯವಸ್ಥೆಯ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ. ಬಜೆಟ್‌ನಲ್ಲಿ ಹೆಚ್ಚಿನ ಅನುದಾನ ಮೀಸಲಿಟ್ಟು ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸಿದರೆ ಕೃಷಿ ಅಭಿವೃದ್ಧಿಗೆ ಉತ್ತೇಜನ ಸಿಗಲಿದೆ. ಜೊತೆಗೆ ಕೈಗಾರಿಕೆಗಳನ್ನು ಸ್ಥಾಪಿಸಲು ಉತ್ತೇಜನ ನೀಡಿದರೆ ಯುವಕರಿಗೆ ಉದ್ಯೋಗಾವಕಾಶಗಳು ಹೆಚ್ಚಾಗಲಿವೆ ಮತ್ತು ವಲಸೆ ಸಮಸ್ಯೆ ಕಡಿಮೆಯಾಗುತ್ತದೆ.

ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿಯೂ ಹೆಚ್ಚಿನ ಗಮನ ಹರಿಸಬೇಕಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಗುಣಮಟ್ಟದ ಶಾಲೆಗಳು, ಕಾಲೇಜುಗಳು, ಆಸ್ಪತ್ರೆಗಳು ನಿರ್ಮಾಣವಾದರೆ ಜನರಿಗೆ ಮೂಲಭೂತ ಸೇವೆಗಳು ಸಮೀಪದಲ್ಲೇ ಲಭ್ಯವಾಗುತ್ತವೆ. ಇದು ಪ್ರದೇಶದ ಸಮಗ್ರ ಅಭಿವೃದ್ಧಿಗೆ ಪೂರಕವಾಗಲಿದೆ.

ಸರ್ಕಾರವು ಕಲ್ಯಾಣ ಕರ್ನಾಟಕ ಅಭಿವೃದ್ಧಿಯನ್ನು ಕೇವಲ ಘೋಷಣೆಗಳಿಗೆ ಸೀಮಿತಗೊಳಿಸದೆ, ಬಜೆಟ್‌ನಲ್ಲಿ ಹೆಚ್ಚಿನ ಅನುದಾನ ಮೀಸಲಿಟ್ಟು ನೆನಗುದಿಗೆ ಬಿದ್ದ ಯೋಜನೆಗಳನ್ನು ತ್ವರಿತವಾಗಿ ಪೂರ್ಣಗೊಳಿಸುವತ್ತ ಗಂಭೀರವಾಗಿ ಮುಂದಾಗಬೇಕು. ಇದರಿಂದ ಈ ಭಾಗದ ಜನರ ದೀರ್ಘಕಾಲದ ನಿರೀಕ್ಷೆಗಳು ಈಡೇರಲಿದ್ದು, ರಾಜ್ಯದ ಸಮತೋಲನ ಅಭಿವೃದ್ಧಿಗೂ ಬಲ ಸಿಗಲಿದೆ. ಕಲ್ಯಾಣ ಕರ್ನಾಟಕದ ಅಭಿವೃದ್ಧಿ ಎಂದರೆ ರಾಜ್ಯದ ಅಭಿವೃದ್ಧಿಯೇ ಎಂಬ ಅರಿವು ಸರ್ಕಾರಕ್ಕೆ ಇರಬೇಕು.

# ಅಗ್ನಿಪಥ ನೇಮಕಾತಿಗಾಗಿ ನೋಂದಣಿ ಆರಂಭ

• **ಮಲ್ಲಮ್ಮ ನುಡಿ ವಾರ್ತೆ ಬೀದರ**

ಆರ್ಮಿ ರಿಕ್ರೂಟಿಂಗ್ ಆಫೀಸ್ ಬೆಳಗಾವಿ ಹಾಗೂ ಬೆಂಗಳೂರು ಹೆಡ್ಕ್ವಾಟರ್ಸ್ ರಿಕ್ರೂಟಿಂಗ್ ಜೋನ್ ಬೆಂಗಳೂರು ಇವರ ಸಹಯೋಗದಲ್ಲಿ ಅಗ್ನಿಪಥ ನೇಮಕಾತಿಗಾಗಿ ದಿನಾಂಕ: 13–02–2026 ರಿಂದ 01–04–2026 ರವರೆಗೆ ಆಲೈನ್ ಮೂಲಕ ನೋಂದಣಿ ಪ್ರಕ್ರಿಯೆ ನಡೆಯಲಿದೆ.

ಬೆಳಗಾವಿ, ಬೀದರ, ಕಲಬುರಗಿ, ಕೊಪ್ಪಳ, ರಾಯಚೂರು ಹಾಗೂ ಯಾದಗಿರಿ ಜಿಲ್ಲೆಯಗಳ ಪುರುಷ ಅಭ್ಯರ್ಥಿಗಳು ಜಾಯಿನ್ ಇಂಡಿಯನ್ ಆರ್ಮಿ www.joinindianarmy.nic.in ವೆಸೈನಲ್ಲಿ ನೋಂದಣಿ ಮಾಡಿಕೊಳ್ಳಬೇಕು. ಅಗ್ನಿವೀರ ಜನರಲ್ ಡ್ಯೂಟಿ, ಅಗ್ನಿವೀರ ಟೆಕ್ನಿಕಲ್, ಅಗ್ನಿವೀರ ಡ್ರೇಮೆನ್ ಹುದ್ದೆಗಳಿಗೆ 10ನೇ ತರಗತಿ ಉತ್ತೀರ್ಣರಾಗಿರಬೇಕು. ಅಗ್ನಿವೀರ ಟ್ರೇಮೆನ್ ಹುದ್ದೆಗೆ 8ನೇ ತರಗತಿ ಪಾಸ್ ಆಗಿರಬೇಕು.

ಅಗ್ನಿವೀರ್ ಕ್ಲರ್ಕ್/ಸ್ಟೋರ್ ಕೀಪರ್ ಟೆಕ್ನಿಕಲ್ ವಿಭಾಗಗಳಿಗೆ ನೇಮಕಾತಿ ನಡೆಯಲಿದೆ. ವಯೋಮಿವಿ, ಶೈಕ್ಷಣಿಕ ಅರ್ಹತೆ ಮತ್ತು ಇನ್ನಿತರ ಹೆಚ್ಚಿನ ಮಾಹಿತಿಗಾಗಿ ದಿನಾಂಕ: 13–02–2026 ರಂದು ಬೆಳಗಾವಿ ಆರ್ಮಿ ರಿಕ್ರೂಟಿಂಗ್ ಆಫೀದಿಂದ ಹೊರಡಿಸಿದ ಅಧಿಸೂಚನೆ ವೀಕ್ಷಿಸಬಹುದಾಗಿದೆ ಎಂದು ಎಂದು ಬೆಳಗಾವಿ ಆರ್ಮಿ ರಿಕ್ರೂಟಿಂಗ್ ಕಚೇರಿಯ ಡೈರೆಕ್ಟರ್ ರಿಕ್ರೂಟಿಂಗ್ ಕರ್ನಲ್ ಎ.ಕೆ.ಉಪಾಧ್ಯಾಯ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಶುದ್ಧ ಕುಡಿವ ನೀರಿನ ಘಟಕ ದುರುಸ್ತಿಗೊಳಿಸಿ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**



ಇಲ್ಲಿಯ ಜೆಎಂಎಫ್‌ಸಿ ನ್ಯಾಯಾಲಯ ಆವರಣದಲ್ಲಿನ ಶುದ್ಧ ಕುಡಿವ ನೀರಿನ ಘಟಕ ದುರುಸ್ತಿಗೊಳಿಸುವಂತೆ ನ್ಯಾಯವಾದಿ ಮಹೇಶ ರಾಚೋಟೆ ಮನವಿ ಮಾಡಿದ್ದಾರೆ. ಈ ಕುರಿತು ಅವರು ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರರಿಗೆ ಪತ್ರ ಬರೆದಿದ್ದು, ಶುದ್ಧ ಕುಡಿವ ನೀರಿನ ಘಟಕ ಉದ್ಘಾಟನೆಗೊಂಡ ದಿನದಿಂದಲೂ ಬಳಕೆ ಇಲ್ಲ. ಇದರಿಂದ ನ್ಯಾಯ ಬೇಡಿ ಬರುವ ಕಕ್ಷಿದಾರರು, ಸಾರ್ವಜನಿಕರು,

ವಕೀಲರಿಗೆ ಶುದ್ಧ ಕುಡಿವ ನೀರು ಸಿಗುತ್ತಿಲ್ಲ. ಇದೀಗ ಬೇಸಿಗೆ ಆರಂಭಗೊಂಡಿದ್ದು ಮುಂದಿನ ದಿನಗಳಲ್ಲಿ ಕುಡಿವ ನೀರಿನ ಸಮಸ್ಯೆ ಮತ್ತಷ್ಟು ತೀವ್ರವಾಗುವ ಆತಂಕವಿದೆ.

ಕೂಡಲೇ ಇರುವ ಅವ್ಯವಸ್ಥೆಯನ್ನು ಸರಿಪಡಿಸಿ ಶುದ್ಧ ಕುಡಿವ ನೀರಿನ ಘಟಕ ದುರುಸ್ತಿಗೊಳಿಸಿ ಎಲ್ಲರಿಗೂ ಶುದ್ಧ ಕುಡಿವ ನೀರು ಸಿಗುವಂತೆ ನೋಡಿಕೊಳ್ಳಬೇಕು ಎಂದು ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

# ಕೊಡೇಕಲನ ಪಿಯು ದ್ವಿತೀಯ ವಿದ್ಯಾರ್ಥಿಗಳಿಗೆ ಪ್ರವೇಶ ಪತ್ರ ವಿತರಣೆ



• **ಮಲ್ಲಮ್ಮ ನುಡಿ ಹುಣಸಗಿ**

ತಾಲೂಕಿನ ಸರಕಾರಿ ಪದವಿ ಪೂರ್ವ ಕಾಲೇಜ ಕೊಡೇಕ ಕಗಅ ದ್ವಿತೀಯ ವರ್ಷದ ವಿದ್ಯಾರ್ಥಿಗಳಿಗೆ ಪ್ರವೇಶ ಪತ್ರ ವಿತರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಈ ಸಂದರ್ಭದಲ್ಲಿ ಕನ್ನಡ ಉಪನ್ಯಾಸಕರಾದ ಸೋಮಶೇಖರ ಪಂಚಗಲ್ ಮಾತನಾಡಿ, ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಪರೀಕ್ಷೆಯನ್ನು ಎದುರಿಸಬೇಕು ಎಂದು ಸಲಹೆ ನೀಡಿದರು. ನಿಯಮಿತವಾಗಿ ಪುನರಾವರ್ತನೆ ಮಾಡಿ, ಸಮಯಪಾಲನೆ ಮಾಡಿ ಮತ್ತು ಶಾಂತ ಮನಸ್ಸಿನಿಂದ ಪರೀ–ಕ್ಷೆ ಬರೆಯುವುದರಿಂದ ಉತ್ತಮ ಫಲಿತಾಂಶ ಪಡೆಯಬಹುದು ಎಂದು ಅವರು ಹೇಳಿದರು.

ವಿದ್ಯಾರ್ಥಿಗಳು ತಮ್ಮ ಗುರಿಯನ್ನು ಸ್ಪಷ್ಟವಾಗಿ ಹೊಂದಿ, ಶಿಕ್ಷಕರ ಮಾರ್ಗದರ್ಶನವನ್ನು ಅನುಸರಿಸಿ ಯಶಸ್ಸು ಸಾಧಿಸಬೇಕು ಎಂದು ಕಿವಿಮಾತು ಹೇಳಿದರು.

ಈ ಸಂದರ್ಭದಲ್ಲಿ ಪ್ರಾಚಾರ್ಯರು ಬಸವರಾಜ ವಂದಲಿ ಉಪನ್ಯಾಸಕರಾದ ದಯಾನಂದ ಮಠ, ರಾಜು ಎರಡೋಣಿ, ಅನಮಂತಿ ಗುತ್ತೇದಾರ್, ವಿದ್ಯಾವತಿ ಶಶಿಕುಮಾರ್, ಶಿವಲೀಲಾ ಹಾದಿಮನಿ, ಚಂದ್ರಶೇಖರ ಹಿರೇಮಠ, ಲಕ್ಷ್ಮೀಬಾಯಿ ರಾಠೋಡ್ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕ್ರೀಡಾ ಹಾಗೂ ಸಾಂಸ್ಕೃತಿಕ ಉತ್ಸವ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು**

ಇಲ್ಲಿನ ಜಿಲ್ಲಾ ಪಂಚಾಯತ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಯುವ ಸಂಬಲೀಕರಣ ಮತ್ತು ಕ್ರೀಡಾ ಇಲಾಖೆಯ ರಾಯಚೂರು ಇವರುಗಳ ಸಂಯುಕ್ತಾಶ್ರಯದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳ ಕ್ರೀಡಾ ಮತ್ತು ಸಾಂಸ್ಕೃತಿಕ ಉತ್ಸವ–2026ರ ಕಾರ್ಯಕ್ರಮವನ್ನು ಫೆ.24ರ ಬೆಳಿಗ್ಗೆ 8ಗಂಟೆಗೆ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಅವರು ಉದ್ಘಾಟನೆ ನೆರವೇರಿಸುವರು.

ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್ ಅವರು ಘನ ಉಪಸ್ಥಿತಿ ವಹಿಸುವರು.

# ಗ್ರಾಮಗಳ ಕ್ರಿಯಾಯೋಜನೆ ಸಿದ್ಧಪಡಿಸಿ


• **ಮಲ್ಲಮ್ಮ ನುಡಿ ವಾರ್ತೆ ಬೀದರ**

ಮುಂಬರುವ ದಿನಗಳಲ್ಲಿ ಜಿಲ್ಲೆಯಲ್ಲಿ ಕುಡಿಯುವ ನೀರು ಹಾಗೂ ಮೇವಿನ ಸಮಸ್ಯಾತ್ಮಕ ಗ್ರಾಮಗಳ ಪಟ್ಟಿ ಹಾಗೂ ಕ್ರಿಯಾಯೋಜನೆ ಸಿದ್ಧಪಡಿಸಿ ಒಂದು ವಾರದಲ್ಲಿ ಸಲ್ಲಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿಂದು ಜರುಗಿದ ಜಿಲ್ಲಾ ವಿಪತ್ತು ನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಾ, ಸಂಬಂಧಿಸಿದ ತಾಲ್ಲೂಕಾ ತಹಸೀಲ್ದಾರ, ತಾಲ್ಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮೀಣ ನೀರು ಸರಬರಾಜು ಇಲಾಖೆಯ ಅಧಿಕಾರಿಗಳು ಕ್ರೀಯಾಶೀಲರಾಗಿ ಕುಡಿಯುವ ನೀರಿನ ಸಮಸ್ಯಾತ್ಮಕ ಗ್ರಾಮಗಳ ಪಟ್ಟಿಯನ್ನು ಸಿದ್ಧಪಡಿಸಿಕೊಳ್ಳುವಂತೆ ತಿಳಿಸಿದರು.

ಈ ವರ್ಷ ಮುಂಬರುವ ದಿನಗಳಲ್ಲಿ ತಾಪಮಾನವು ಹೆಚ್ಚಾಗುವ ಬಗ್ಗೆ ಹವಾಮಾನ ಇಲಾಖೆ ವರದಿಯಿದೆ. ಕಳೆದ ಮರ್ನ್ನಾಲ್ಕು ವರ್ಷಗಳ ಅನುಭವದ ಹಿನ್ನೆಲೆಯಲ್ಲಿ ಸಮಸ್ಯಾತ್ಮಕ ಗ್ರಾಮಗಳ ಪಟ್ಟಿ ಸಿದ್ಧಗೊಳಿಸಿ ಕುಡಿಯುವ ನೀರು ಸರಬರಾಜಿಗೆ ಕ್ರಮ ಕೈಗೊಳ್ಳುವಂತೆ ತಿಳಿಸಿದರು.

ನಗರ ಹಾಗೂ ಗ್ರಾಮೀಣ ಜನತೆಗೆ ಸ್ಥಳೀಯ ಸಂಸ್ಥೆ ತಮ್ಮ ಅನುದಾನದಲ್ಲಿ ನೀರಿನ ಸಮಸ್ಯೆ ಬಗೆಹರಿಸಬೇಕು. ಜಾನುವಾರುಗಳಿಗೂ ಸಹ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಎಲ್ಲ ತಹಸೀಲ್ದಾರರು ಕ್ರಿಯಾಯೋಜನೆಯನ್ನು ಸಿದ್ಧಗೊಳಿಸಬೇಕು. 15 ದಿನಕ್ಕೊಮ್ಮೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಸಭೆ ಸೇರಿ ಸಮಸ್ಯೆಗಳನ್ನು ಚರ್ಚಿಸಿ ಬಗೆಹರಿಸಲು ಕ್ರಮ ಕೈಗೊಳ್ಳಬೇಕೆಂದರು.



ಕಳೆದ ಬಾರಿ ಕಂಡುಬಂದ ಸಮಸ್ಯೆಗಳ ಆಧಾರದ ಮೇಲೆ ಈಗಾಗಲೇ ಸಿದ್ಧಗೊಳ್ಳಬೇಕು. ಬರ ಘೋಷಣೆಯಾದಲ್ಲಿ ತಾಲ್ಲೂಕಾ ಟಾಸ್ಕ್‌ಫೋರ್ಸ್ ಅನುದಾನದಲ್ಲಿ ಕೊಳವೆ ಬಾವಿ ಪುನರಜ್ಜೀವನ, ಪೈಪಲೈನ್, ಮೋಟಾರ್ ರಿಪೇರಿ, ಖಾಸಗಿ ಕೊಳವೆಬಾವಿ ಬಾಡಿಗೆ, ಕಾಮಗಾರಿ ಹಾಗೂ ಟ್ಯಾಂಕರ್ ಮೂಲಕ ನೀರು ಸರಬರಾಜು ಕೈಗೊಳ್ಳಬಹುದೆಂದರು.

ಔರಾದ್ ಹಾಗೂ ಕಮಲನಗರ ಅಧಿಕಾರಿಗಳು ಹೆಚ್ಚು ನಿಗಾ ವಹಿಸಬೇಕು. ಔರಾದ್‌ನಲ್ಲಿ ಕಳೆದ ಬಾರಿ 48 ಗ್ರಾಮಗಳಲ್ಲಿ ಹಾಗೂ 29 ತಾಂಡಾಗಳಲ್ಲಿ ತೀವ್ರ ನೀರಿನ ಸಮಸ್ಯೆ ಎದುರಾಗಿತ್ತು ಎಂದು ತಾಲ್ಲೂಕು ಪಂಚಾಯತ ಅಧಿಕಾರಿ ಸಭೆಗೆ ತಿಳಿಸಿದರು. ಕಮಲನಗರದ ಚಿಕಲಿ ಸುತ್ತಲಿನ 28 ತಾಂಡಾ ಹಾಗೂ ಭಾಲ್ಕಿ ತಾಲ್ಲೂಕಿನ 15 ಗ್ರಾಮಗಳಲ್ಲಿ ಸಮಸ್ಯೆ ಎದುರಾಗಿತ್ತು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಖಾಸಗಿ ಕೊಳವೆ ಬಾವಿ ಬಾಡಿಗೆಗೆ ಈಗಾಗಲೇ ಗುರುಗಿಸಿಕೊಳ್ಳಬೇಕು. ತೆರೆದ ಬಾವಿ ಹಾಗೂ ಸಣ್ಣನೀರಾವರಿ ಇಲಾಖೆಯ ಕೆರೆಗಳನ್ನು ಸಹ ಕುಡಿಯುವ ನೀರಿಗೆ ಬಳಸಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಅಧಿಕಾರಿಗಳು ಈಗಲೇ ಕ್ರಿಯಾಯೋಜನೆ ಸಿದ್ಧಪಡಿಸಿಕೊಂಡು ಜಿಲ್ಲೆಯ ಎಲ್ಲ ಗ್ರಾಮಗಳಲ್ಲಿ ಕುಡಿಯುವ ನೀರಿಗೆ ಯಾವುದೇ ಸಮಸ್ಯೆ ಆಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ಎಚ್ಚರಿಕೆ ವಹಿಸಬೇಕು. ಈಗಿರುವ ಮೇವು ಆಧ್ಯತೆ, ದಾಸ್ತಾನು ಗಮನಿಸಬೇಕು. ಜಿಲ್ಲೆಯ ಹೊರಗೆ ಮೇವು ಸಾಗಾಟ ಆಗದಂತೆ ತಹಸೀಲ್ದಾರರು ಎಚ್ಚರಿಕೆ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಈ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಬಿ.ಕರಾಳೆ, ಸಹಾಯಕ ಆಯುಕ್ತ ಮೊಹಮ್ಮದ್ ಶಕೀಲ್, ಆಯಾ ತಾಲ್ಲೂಕಿನ ತಹಸೀಲ್ದಾರರು ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಯುವ ಪೀಳಿಗೆ ತಂಬಾಕು ಸೇವನೆಯಿಂದ ದೂರವಿರಿ: ಲಿಂಗರಾಜು ಸಲಹೆ



• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ಇಂದಿನ ಯುವ ಪೀಳಿಗೆ ತಂಬಾಕು ಸೇವನೆಯಿಂದ ದೂರವಿದ್ದು, ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಟಿ.ಲಿಂಗರಾಜು ಹೇಳಿದರು. ಅವರು ಬುಧವಾರ ಕೊಪ್ಪಳ ನಗರದಲ್ಲಿನ ಹಳೇ ಜಿಲ್ಲಾಸ್ಪತ್ರೆಯ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿ ತಂಬಾಕು ಸೇವನೆಯಿಂದ ಆರೋಗ್ಯದ ಮೇಲೆ ಉಂಟಾಗುವ ದುಷ್ಪರಿಣಾಮಗಳು ಮತ್ತು ಕೋಟ್ಪಾ–2003 ಕಾಯ್ದೆ ಅನುಷ್ಠಾನ ಕುರಿತು “ರಾಷ್ಟ್ರೀಯ ಸೇವಾ ಯೋಜನೆಯ ವಿದ್ಯಾರ್ಥಿಗಳಿಗೆ” ಹಮ್ಮಿಕೊಂಡಿದ್ದ ಒಂದು ದಿನ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು. ತಂಬಾಕು ಸೇವನೆಯಿಂದ ಆರೋಗ್ಯದ ಮೇಲೆ ಹಲವಾರು ದುಷ್ಪರಿಣಾಮಗಳು ಉಂಟಾಗುತ್ತವೆ. ಸಿಗರೇಟ್, ಬೀಡಿ, ಸಿಗಾರ್, ಹುಕ್ಕಾ ತಂಬಾಕು ವಿಧಗಳಾಗಿವೆ. ತಂಬಾಕು ಸೇವನೆಯಿಂದ ಕ್ಯಾನ್ಸರ್, ಹೃದಯ ಸಂಬಂಧಿ ಕಾಯಿಲೆ, ಶ್ವಾಸಕೋಶದ ಕಾಯಿಲೆ, ಲಕ್ವಾ ಇತರೆ ಕಾಯಿಲೆಗಳು ಸಂಭವಿಸುತ್ತವೆ. ಪ್ರತಿ ಸಿಗರೇಟ್, ಬೀಡಿ ಸೇವನೆಯಿಂದ 7 ನಿಮಿಷ ಆಯಸ್ಸು ಕಡಿಮೆ ಮಾಡುತ್ತದೆ ಎಂದು ವಿಶ್ವ ಆರೋಗ್ಯ ಸಂಸ್ಥೆ ತಿಳಿಸುತ್ತದೆ. ತಂಬಾಕಿನಲ್ಲಿ ನಿಕೋಟಿನ್ ಎಂಬ ವಿಷಕಾರಕ ಪದಾರ್ಥ ಇದ್ದು, ಇದರಲ್ಲಿ 3000 ದಿಂದ 7000 ಆಪಾಯಕಾರಿ ರಾಸಾಯನಿಕ ವಿಷಾನಿಲಗಳು ಇರುತ್ತವೆ. ಮಹಿಳೆಯರಲ್ಲೂ ತಂಬಾಕು ಸೇವನೆಯಿಂದ ಗರ್ಭಪಾತ, ಗರ್ಭಕಂಠದ ಕ್ಯಾನ್ಸರ್, ಕಡಿಮೆ ತೂಕವಿರುವ ಮಗುವಿನ ಜನನ ಹಾಗೂ ಶಿಶುಮರಣ ಸಂಭವಿಸುವ ಸಾಧ್ಯತೆ ಇರುತ್ತದೆ. ಪ್ರತಿ ವರ್ಷ ವಿಶ್ವದಾದ್ಯಂತ 60 ಲಕ್ಷಕ್ಕಿಂತ ಹೆಚ್ಚು ಜನರು ತಂಬಾಕು ಸೇವನೆಯಿಂದ ಉಂಟಾಗುವ ಕಾಯಿಲೆಗಳಿಂದ ಸಾವನ್ನಪ್ಪುತ್ತಿದ್ದಾರೆ. ಇದನ್ನು ಅರಿತು–ಕೊಂಡ ಸಾರ್ವಜನಿಕರು, ವಿಶೇಷವಾಗಿ ಯುವ ಜನರು ತಂಬಾಕು ಸೇವನೆಯಿಂದ ದೂರವಿರಬೇಕು ಎಂದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಅನುಷ್ಠಾನಾಧಿಕಾರಿ ಡಾ. ರವೀಂದ್ರನಾಥ್ ಎಂ.ಹೆಚ್. ಅವರು ಮಾತನಾಡಿ, ತಂಬಾಕು ತ್ಯಜಿಸುವುದರಿಂದ ಮತ್ತು ವ್ಯಸನಿಗಳು ನಿಲ್ಲಿಸಿದ ಕ್ಷಣದಿಂದ ಶ್ವಾಸಕೋಶ ಮತ್ತು ಹೃದಯ ಉತ್ತಮವಾಗಿ ಕಾರ್ಯನಿರ್ವಹಿಸಲು ಸಹಾಯ ಮಾಡುತ್ತದೆ. ಹಾಗಾಗಿ ಪೌಷ್ಟಿಕ ಆಹಾರ ಸೇವನೆಯನ್ನು ನಮ್ಮ ಜೀವನ ಶೈಲಿಯಲ್ಲಿ ಅಳವಡಿಸಿಕೊಳ್ಳಬೇಕು. ವಿದ್ಯಾರ್ಥಿಗಳು ತಂಬಾಕು ಸೇವನೆಯಂತಹ ದುಶ್ಚಟದಿಂದ ದೂರವಿರಬೇಕು ಮತ್ತು ವಿದ್ಯಾಭ್ಯಾಸದಲ್ಲಿ ಹೆಚ್ಚಿನ ಗಮನ ಹರಿಸಿ ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಹೇಳಿದರು.

ರಾಜ್ಯ ತಂಬಾಕು ನಿಯಂತ್ರಣ ಕೋಶದ ವಿಭಾಗೀಯ ಸಂಯೋಜಕ ಮಹಾಂತೇಶ್ ಬಿ. ಉಳ್ಳಾಗಡ್ಡಿ ಅವರು ಮಾತನಾಡಿ, ಭಾರತ ಸರ್ಕಾರವು ರಾಷ್ಟ್ರೀಯ ತಂಬಾಕು ನಿಯಂತ್ರಣ ಬಗ್ಗೆ 2003ರಲ್ಲಿ ಕೋಟ್ಪಾ ಕಾಯ್ದೆಯನ್ನು ಜಾರಿಗೊಳಿಸಿದೆ. ಸೆಕ್ಷನ್–4 ಪ್ರಕಾರ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುವುದು ನಿಷೇಧ, ಸೆಕ್ಷನ್–5ರ ಪ್ರಕಾರ ತಂಬಾಕು ಉತ್ಪನ್ನಗಳ ನೇರ ಹಾಗೂ ಪರೋಕ್ಷ ಜಾಹೀರಾತು, ಉತ್ತೇಜನ ಪ್ರಯೋಜಕತೆ ನಿಷೇಧ, ಸೆಕ್ಷನ್–6(ಎ) ತಂಬಾಕು ಉತ್ಪನ್ನಗಳು ಅಪ್ರಾಪ್ತ ವಯಸ್ಕರಿಗೆ (21 ವರ್ಷದೊಳಗಿನ ಮಕ್ಕಳು) ಸಿಗದಂತೆ ನಿಯಂತ್ರಣ ಮಾಡುವುದು, ಸೆಕ್ಷನ್–6ಬಿ ಪ್ರಕಾರ ಶಿಕ್ಷಣ ಸಂಸ್ಥೆಗಳ 100 ಅಂತರ ಗಜಗಳ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವುದು ಶಿಕ್ಷಾರ್ಹ ಅಪರಾಧ, ಸೆಕ್ಷನ್–7 ಪ್ರಕಾರ ಸಿಗರೇಟ್ ಮತ್ತು ಇತರೆ ತಂಬಾಕು ಉತ್ಪನ್ನಗಳ ಮೇಲೆ ನಿರ್ಧಿಷ್ಟ ಆರೋಗ್ಯ ಎಚ್ಚರಿಕೆಗಳ ಸಂದೇಶಗಳಿಲ್ಲದೆ ಮಾರುವುದನ್ನು ನಿಷೇಧಿಸಲಾಗಿದೆ.

# ಗ್ಯಾರಂಟಿ ಯೋಜನೆಗಳ ಜಾಗೃತಿ ಮೂಡಿಸಿ: ರೆಡ್ಡಿ ಶ್ರೀನಿವಾಸ



• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ಹೆಚ್ಚಿನ ಜನರಿರುವ ಪ್ರದೇಶಗಳಲ್ಲಿ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಗಳಾದ ಶಕ್ತಿ, ಅನ್ನಭಾಗ್ಯ, ಗೃಹಜ್ಯೋತಿ, ಗೃಹಲಕ್ಷ್ಮೀ ಹಾಗೂ ಯುವನಿಧಿ ಸೇರಿ ಪಂಚ ಗ್ಯಾರಂಟಿ ಯೋಜನೆಗಳ ಪ್ರಚಾರ ಹಮ್ಮಿಕೊಳ್ಳುವ ಮೂಲಕ ಮತ್ತಷ್ಟು ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಹೇಳಿದರು.

ಅವರು ಶುಕ್ರವಾರ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಾದ ಶಕ್ತಿ, ಅನ್ನಭಾಗ್ಯ, ಗೃಹಜ್ಯೋತಿ, ಗೃಹಲಕ್ಷ್ಮೀ ಹಾಗೂ ಯುವನಿಧಿ ಯೋಜನೆ ಕುರಿತಂತೆ ಎಲ್‌ಇಡಿ ವಾಹನದ ಮೂಲಕ ಕಿರುಚಿತ್ರಗಳ ಪ್ರದರ್ಶನ, ಸಂಗೀತ, ಬೀದಿ ನಾಟಕದಿಂದ ಜನಸಾಮಾನ್ಯರಿಗೆ ಮಾಹಿತಿ ಹಾಗೂ ಪ್ರಚಾರ ನೀಡಲು ಕೊಪ್ಪಳ ಜಿಲ್ಲೆಯಲ್ಲಿ ಹಮ್ಮಿಕೊಂಡಿರುವ ಪ್ರಚಾರ ವಾಹನ ಹಾಗೂ ಕಲಾ ಜಾಥಾ ಕಾರ್ಯಕ್ರಮಕ್ಕೆ ಕೊಪ್ಪಳ ಜಿಲ್ಲಾಡಳಿತ ಭವನದ ಆವರಣದಲ್ಲಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿ, ಮಾತನಾಡಿದರು. ರಾಜ್ಯದಲ್ಲಿ ಪಂಚ ಗ್ಯಾರಂಟಿ ಯೋಜನೆಗಳು ಅಚ್ಚುಕಟ್ಟಾಗಿ ನಡೆಯುತ್ತಿದ್ದು, ಎಲ್ಲಾ ಅರ್ಹ ಫಲಾನುಭವಿಗಳಿಗೆ ನೇರವಾಗಿ ಈ ಯೋಜನೆಗಳ ಲಾಭವನ್ನು ತಲುಪಿಸುವಂತಹ ಕೆಲಸ ನಮ್ಮ ಸರ್ಕಾರದಿಂದ ಆಗುತ್ತಿದೆ. ಈ ಎಲ್ಲಾ ಐದು ಯೋಜನೆಗಳ ಬಗ್ಗೆ ಪ್ರತಿಯೊಂದು ಗ್ರಾಮ ಮತ್ತು ಪಟ್ಟಣಗಳಲ್ಲಿ ಪ್ರಚಾರ ಆಗಬೇಕೆಂದು ಸರ್ಕಾರವು ಪ್ರಚಾರ ವಾಹನಗಳ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸುತ್ತಿದೆ. ಈ ಕಾರ್ಯಕ್ರಮದ ಮೂಲಕ ಪಂಚ ಗ್ಯಾರಂಟಿ ಯೋಜನೆಗಳಿಂದ ಜನರಿಗೆ ಸಿಗುತ್ತಿರುವ ಲಾಭಗಳ ಕುರಿತು ಜನರಿಗೆ ಅರ್ಥವಾಗುವ ರೀತಿಯಲ್ಲಿ ಕಲಾವಿದರು ಮಾಹಿತಿ ನೀಡಿ, ಐದು ಗ್ಯಾರಂಟಿ ಯೋಜನೆಗಳ ಪ್ರಚಾರ ಕಾರ್ಯಕ್ರಮವು ಜಿಲ್ಲೆಯಲ್ಲಿ ಅಚ್ಚುಕಟ್ಟಾಗಿ ನಡೆಸಬೇಕೆಂದರು.

ಕೊಪ್ಪಳ ಜಿಲ್ಲೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡಲಾಗುತ್ತಿದ್ದು, ಗೃಹಲಕ್ಷ್ಮೀ ಯೋಜನೆಯಡಿ ಸುಮಾರು 3 ಲಕ್ಷ 19 ಸಾವಿರಕ್ಕೂ ಅಧಿಕ ಫಲಾನುಭವಿಗಳು ಈ ಯೋಜನೆಯ ಸೌಲಭ್ಯ ಪಡೆದುಕೊಳ್ಳುತ್ತಿದ್ದಾರೆ. ಇಲ್ಲಿಯವರೆಗೆ 1581 ಕೋಟಿ ರೂ.ಗಳನ್ನು ಗೃಹಲಕ್ಷ್ಮೀ ಫಲಾನುಭವಿಗಳಿಗೆ ನೀಡಲಾಗಿದೆ. ಶಕ್ತಿ ಯೋಜನೆಯಡಿ ಇಲ್ಲಿಯವರೆಗೆ ಜಿಲ್ಲೆಯಲ್ಲಿ ಸುಮಾರು 11 ಕೋಟಿ ಮಹಿಳಾ ಫಲಾನುಭವಿಗಳು ಉಚಿತ ಬಸ್ ಪ್ರಯಾಣದ ಸೌಲಭ್ಯವನ್ನು ಪಡೆದುಕೊಂಡಿದ್ದಾರೆ. ಅನ್ನಭಾಗ್ಯ ಯೋಜನೆಯು ಪಡಿತರ ಚೀಟಿದಾರರಿಗೆ ತುಂಬಾ ಅನುಕೂಲವಾಗಿದೆ. ಯುವನಿಧಿಯಡಿ 13 ಸಾವಿರಕ್ಕೂ ಅಧಿಕ ಫಲಾನುಭವಿಗಳಿಗೆ ನಿರುದ್ಯೋಗ ಭತ್ಯೆ ಸಿಗುತ್ತಿದೆ. ಗೃಹಜ್ಯೋತಿಯಡಿ ಜಿಲ್ಲೆಯ ಶೇ. 98.5 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಮಂಜುನಾಥ ಗೊಂಡಬಾಳ ಅವರು ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಜನರನ್ನು ವಿಶೇಷವಾಗಿ ಮಹಿಳೆಯರನ್ನು ಸಬಲೀಕರಣ ಮಾಡುವ ಮತ್ತು ಸ್ವಾವಲಂಬನೆಯತ್ತ ತೆಗೆದುಕೊಂಡು ಹೋಗುವ ಕೆಲಸವಾಗುತ್ತಿದೆ.

ಈ ಯೋಜನೆಗಳಿಗಾಗಿ ಸರ್ಕಾರವು 52 ಸಾವಿರ ಕೋಟಿ ರೂ.ಗಳನ್ನು ಪ್ರತಿವರ್ಷ ಮೀಸಲಿಟ್ಟು, ಬಡವರಿಗೆ, ಮಹಿಳೆಯರಿಗೆ ಆರ್ಥಿಕ ಧನ ಸಹಾಯವನ್ನು ಮಾಡಲಾಗುತ್ತಿದೆ. ಯಾವುದೇ ಒಂದು ಮಾನವನ ಸಬಲೀಕರಣವಾಗಬೇಕಾದರೆ, ಕನಿಷ್ಠ ಮೂಲಭೂತ ಬದುಕುವ ಹಕ್ಕನ್ನು ಕೊಡಬೇಕೆಂದು ಸಂವಿಧಾನ ಹೇಳುತ್ತದೆ. ಅಂತಹ ಹಕ್ಕನ್ನು ಗ್ಯಾರಂಟಿ ಯೋಜನೆಗಳ ಮೂಲಕ ನಮ್ಮ ಸರ್ಕಾರ ನೀಡುತ್ತಿದೆ. ಈ ಎಲ್ಲಾ ಯೋಜನೆಗಳ ಮೂಲಕ ಯುವ ಜನರಿಗೆ ಮಹಿಳೆಯರಿಗೆ ಮತ್ತು ಎಲ್ಲರಿಗೂ ಶಕ್ತಿ ಕೊಡುವ ಕೆಲಸ ಆಗುತ್ತಿದೆ. ಇಂತಹ ಯೋಜನೆಗಳನ್ನು ಮತ್ತಷ್ಟು ಜನರಿಗೆ ತಲುಪಿಸುವ ಮತ್ತು ಅವುಗಳ ಬಗ್ಗೆ ಮಾಹಿತಿ ಒದಗಿಸುವ ಕೆಲಸ ಈ ಪ್ರಚಾರ ಕಾರ್ಯಕ್ರಮದ ಮೂಲಕ ಆಗಲಿ ಎಂದರು.

ಈ ಸಂದರ್ಭದಲ್ಲಿ ಕೊಪ್ಪಳ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸದಸ್ಯರಾದ ಮಾನ್ವಿ ಪಾಶಾ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಸುರೇಶ್ ಜಿ., ಕಾರಟಗಿ ತಾ.ಪಂ ಕೆ.ಡಿ.ಪಿ ಸದಸ್ಯರಾದ ದಾವಲಸಾಬ್, ದೇಸಾಯಿ ಕ್ಯಾಂಪ್ ಗ್ರಾ.ಪಂ ಸದಸ್ಯರಾದ ಮಹೇಬೂಬ್, ಕಲಾವಿದ ಭಾಷು ಹಿರೇಮನಿ, ರಮೇಶ ಸಿಂಧನೂರು, ವಾರ್ತಾ ಇಲಾಖೆಯ ಸಿಬ್ಬಂದಿಗಳಾದ ಎನ್.ತಿಪ್ಪಯ್ಯ ನಾಯ್ಡು, ಆರೀಫ್ ಅಹ್ಮದ್, ಶಿಬಿರಾರ್ಥಿಗಳಾದ ಪ್ರಕಾಶ ಹಾಗೂ ಕಿರಣ ಸೇರಿದಂತೆ ಇತರೆ ಸಿಬ್ಬಂದಿಗಳು ಮತ್ತು ಚಿಕ್ಕಮ್ಯಾಗೇರಿಯ ರಂಗಚೇತನ ಸಾಂಸ್ಕೃತಿ ಕಲಾ ಸಂಸ್ಥೆಯ ಕಲಾವಿದರಾದ ಕಾಳೇಶ್, ಶರಣಪ್ಪ ಮೇಟಿ, ವೀರಯ್ಯ, ಸುಲೋಚನಾ, ಗೌರಮ್ಮ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು

# ಪೂರ್ವಭಾವಿ ಸಭೆ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು**

ಜಿಲ್ಲೆಯಲ್ಲಿ ಜಿಲ್ಲಾಡಳಿತದ ವತಿಯಿಂದ ಮಾರ್ಚ್ 1ರಂದು ರೇಣುಕಾಚಾರ್ಯ ಜಯಂತಿ ಹಾಗೂ ಮಾರ್ಚ್ 3ರಂದು ಯೋಗಿ ನಾರಾಯಣ ಯತೀಂದ್ರರ (ಕೈವಾರ ತಾತಯ್ಯ) ಜಯಂತಿ ನಡೆಯಲಿವೆ.

ಈ ಜಯಂತಿಗಳ ಅಂಗವಾಗಿ ಫೆ.24ರ ಬೆಳಿಗ್ಗೆ 11 ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇ–ರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದ್ದು, ವಿವಿಧ ಸಮಾಜದ ಮುಖಂಡರು, ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ ಸೂಕ್ತ ಸಲಹೆ ಸೂಚನೆ ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದರು .

# ಕ್ರೀಡೆಗಳು ದೈಹಿಕವಾಗಿ, ಮಾನಸಿಕವಾಗಿ ಗಟ್ಟಿಗೊಳಿಸುತ್ತವೆ: ಶರಣಗೌಡ ಕಂದಕೂರ



> ಇಂದಿನ ಜೀವನದ ಜಂಜಾಟದ ನಡುವೆ ಯಾವುದೇ ಲಾಭದ ಅಪೇಕ್ಷೆ ಇಲ್ಲದೆ, ಕೇವಲ ಕ್ರೀಡಾ ಪ್ರೇಮದಿಂದ ಇಂತಹ ಅಕಾಡೆಮಿ ನಡೆಸುವುದು ಸಾಮಾನ್ಯವಲ್ಲ. ಇಂತಹ ನಿಸ್ವಾರ್ಥ ಸಂಸ್ಥೆಗಳಿಂದಾಗಿ ನಮ್ಮ ಜಿಲ್ಲೆಯ ಕ್ರೀಡಾ ಪ್ರತಿಭೆಗಳಿಗೆ ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಗುರುತಿಸಿಕೊಳ್ಳಲು ಒಳ್ಳೆಯ ಅವಕಾಶ ಸಿಗುತ್ತಿದೆ.
> • **ಶರಣಗೌಡ ಕಂದಕೂರ ಶಾಸಕರು.**

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**

ಕ್ರೀಡೆಗಳು ದೈಹಿಕವಾಗಿ ಗಟ್ಟಿಗೊಳ್ಳುವುದರ ಜತೆಗೆ ಮಾನಸಿಕವಾಗಿ ದೃಢತೆ ಮೂಡಿಸುತ್ತವೆ ಎಂದು ಶಾಸಕ ಶರಣಗೌಡ ಕಂದಕೂರ ಹೇಳಿದರು.

ಮಾಜಿ ಶಾಸಕ ದಿ. ನಾಗನಗೌಡ ಕಂದಕೂರ್ ಅವರ ದ್ವಿತೀಯ ಪುಣ್ಯಸ್ಮರಣೆಯ ಅಂಗವಾಗಿ, ನಾಗನಗೌಡ ಕಂದಕೂರ್ ಫೌಂಡೇಶನ್ ವತಿಯಿಂದ ಶನಿವಾರ ನಗರದ ಹೊಸಳ್ಳಿ ರಸ್ತೆಯ ಎಸಿ ಸ್ಪೋರ್ಟ್ಸ್ ಅಕಾಡೆಮಿಯಲ್ಲಿ ಹಮ್ಮಿಕೊಂಡಿದ್ದ ಕಲ್ಯಾಣ ಕರ್ನಾಟಕ ಮಟ್ಟದ ಶಟಲ್ ಬ್ಯಾಡ್ಮಿಂಟನ್ ಟೂರ್ನಮೆಂಟ್ ಗೆ ಚಾಲನೆ ನೀಡಿ ಅವರು ಮಾತನಾಡಿದರು.

ಸಕರಾತ್ಮಕವಾಗಿ ಆಟಗಳು ಆಡಬೇಕು. ಕ್ರೀಡಾಪಟುಗಳಲ್ಲಿ ಸ್ಪರ್ಧಾ ಮನೊಭಾವನೆ ಇರಬೇಕೇ ಹೊರತು ದ್ವೇಷ ಭಾವನೆ ಹೊಂದಿರಬಾರದೆಂದರು.

ಸೋಲು, ಗೆಲುವು ಸಮಾನವಾಗಿ ಸ್ವೀಕರಿಸಬೇಕು, ಸೋಲೆ ಗೆಲುವಿನ ಮೆಟ್ಟಿಲು ಎಂಬುವುದು ಪ್ರತಿ ಆಟಗಾರರು ಅರ್ಥ ಮಾಡಿಕೊಳ್ಳಬೇಕೆಂದರು.

ತಮ್ಮ ತಂದೆ ದಿ. ನಾಗನಗೌಡ ಕಂದಕೂರ ಅವರ ಸಮಾಜಮುಖಿ ಚಿಂತನೆಗಳನ್ನು ಸ್ಮರಿಸುತ್ತಾ, ನಮ್ಮ ಅಪ್ಪಾಜಿಯವರು ಸದಾ ಜನಸೇವೆಯನ್ನೇ ಉಸಿರಾಗಿಸಿಕೊಂಡಿದ್ದರು.

ಅವರ ನೆನಪನ್ನು ಅರ್ಥಪೂರ್ಣವಾಗಿಸಲು ಈ ಫೌಂಡೇಶನ್ ಸ್ಥಾಪಿಸಲಾಗಿದೆ, ಕೊಪ್ಪಳದ ಶ್ರೀಗಳ ಪಾವನ ಸಾನಿಧ್ಯದಲ್ಲಿ ಈ ಫೌಂಡೇಶನ್ ಉದ್ಘಾಟನೆಯಾದಗಿನಿಂದ ಇಂದಿಗೂ ಹಸಿರಾಗಿದೆ. ಮೊದಲ ಪುಣ್ಯತಿಥಿ–ಯಂದು ಅಂಗವಿಕಲರಿಗೆ ತ್ರಿಚಕ್ರ ವಾಹನಗಳನ್ನು ವಿತರಿಸುವ ಮೂಲಕ ಅವರ ಜನಸೇವೆಯ ಪರಂಪರೆಯನ್ನು ಮುಂದುವರಿಸಲಾಗಿತ್ತು. ಈ ವರ್ಷ ಕ್ರೀಡಾಪಟುಗಳಿಗೆ ವೇದಿಕೆ ಕಲ್ಪಿಸುವ ಉದ್ದೇಶದಿಂದ ಈ ಟೂರ್ನಮೆಂಟ್ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಗಿರಿಜಿಲ್ಲೆಯಲ್ಲಿ ಸುಸಜ್ಜಿತ ಸ್ಪೋರ್ಟ್ಸ್ ಅಕಾಡೆಮಿ ಸ್ಥಾಪಿಸಿರುವ ಎಸಿ ಅಕಾಡೆಮಿ ಕಾರ್ಯವನ್ನು ಶಾಸಕರು ಮುಕ್ತಕಂಠದಿಂದ ಶ್ಲಾಘಿಸಿದರು. ಪೊಲೀಸ್ ಇಲಾಖೆ ಸಿಬ್ಬಂದಿ ಹಾಗೂ ವಿವಿಧ ಸರ್ಕಾರಿ ಅಧಿಕಾರಿಗಳ ಕ್ರೀಡಾಸಕ್ತಿಯನ್ನು ಕಂಡು ಶಾಸಕರು ಮೆಚ್ಚುಗೆ ವ್ಯಕ್ತಪಡಿಸಿದರು.

ಕರ್ತವ್ಯದ ಒತ್ತಡದ ನಡುವೆಯೂ ಕ್ರೀಡೆಗಳಲ್ಲಿ ಭಾಗವಹಿಸುವುದು ಮಾನಸಿಕ ಆರೋಗ್ಯ ಗಟ್ಟಿಗೊಳಿಸುತ್ತದೆ ಎಂದರು. ಯುವ ಜನತೆ ಕ್ರೀಡೆಗಳಲ್ಲಿ ಹೆಚ್ಚಿನ ಆಸಕ್ತಿ ತೋರಬೇಕೆಂದು ಅವರು ಕರೆ ನೀಡಿದರು.

ಎಸಿ ಅಕಾಡೆಮಿಯಿಂದ ಇನ್ನು ವಿವಿಧ ಕ್ರೀಡಾಕೂಟಗಳು ನಿರಂತರವಾಗಿ ನಡೆಯಲಿ ಎಂದು ಹಾರೈಸಿದ ಅವರು, ಟೂರ್ನಮೆಂಟ್ ಯಶಸ್ವಿಯಾಗಲಿ ಎಂದು ಶುಭ ಕೋರಿದರು.

ಈ ಸಂದರ್ಭದಲ್ಲಿ ನಾಗನಗೌಡ ಕಂದಕೂರ್ ಫೌಂಡೇಶನ್‌ನ ಪ್ರಮುಖ ಪದಾಧಿಕಾರಿಗಳು, ಎಸಿ ಅಕಾಡೆಮಿ ಸಂಘಟಕರು, ತರಬೇತುದಾರರು, ಕಲ್ಯಾಣ ಕರ್ನಾಟಕ ಭಾಗದ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಕ್ರೀಡಾಪಟುಗಳು ಹಾಗೂ ಕ್ರೀಡಾ ಅಭಿಮಾನಿಗಳು ಉಪಸ್ಥಿತರಿದ್ದರು.

# ಅಕ್ರಮ ಗಣಿಗಾರಿಕೆ ವಿರುದ್ಧ ಧ್ವನಿ ಎತ್ತಿದ್ದಕ್ಕೆ ಜೀವ ಬೆದರಿಕೆ: ಕ್ರಮಕ್ಕೆ ಭೀಮು ಪೂಜಾರಿ ಆಗ್ರಹ

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**




ಯಾದಗಿರಿ ತಾಲೂಕಿನ ವರ್ಕನಳ್ಳಿ, ಮಸ್ಕನಳ್ಳಿ, ಹಳಿಗೇರಾ ಅಕ್ರಮ ಕಲ್ಲು ಗಣಿಗಾರಿಕೆ ತಡೆಯಲು ಮಾಧ್ಯಮದಲ್ಲಿ ಹೇಳಿಕೆ ನೀಡಿದ್ದ ನನ್ನ ವಿರುದ್ಧ ಯಾದಗಿರಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಹಿರಿಯ ಭೂ ವಿಜ್ಞಾನಿ ವಿರೇಶ ರವರು ನನಗೆ ಕಲ್ಲು ಗಣಿಗಾರಿಕೆ ನಡೆಸುವ ಸಂಘದವರಿ0ದ ಬೆದರಿಕೆ ಹಾಕಿಸಿದ್ದು, ಇವರ ಮೇಲೆ ಸೂಕ್ತ ಕ್ರಮ ಕೈಗೊಂಡು ಅಮಾನತ್ತು ಮಾಡುವಂತೆ ಸಾಮಾಜಿಕ ಹೋರಾಟಗಾರ ಭೀಮು ಪೂಜಾರಿ ಆರೋಪಿಸಿ ಕ್ರಮಕ್ಕೆ ಆಗ್ರಹಿಸಿದ್ದಾರೆ.

ಈ ಕುರಿತು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಮಾತನಾಡಿ, ಯಾದಗಿರಿ ತಾಲೂಕಿನ ವರ್ಕನಳ್ಳಿ, ಮಸ್ಕನಳ್ಳಿ, ಹಳಿಗೇರಾ ಅಕ್ರಮ ಕಲ್ಲು ಗಣಿಗಾರಿಕೆ ನಡೆಯುತ್ತಿದ್ದು, ಇದನ್ನು ತಡೆಯಲು ಮಾಧ್ಯಮದಲ್ಲಿ ನಾನು ಹೇಳಿಕೆ ನೀಡಿದ್ದು, ಈ ಸುದ್ದಿ ಎಲ್ಲಾ ದಿನಪತ್ರಿಕೆಗಳಲ್ಲಿ ಪ್ರಕಟವಾಗಿದ್ದು, ಆದರೆ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ.

ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಹಿರಿಯ ಭೂ ವಿಜ್ಞಾನಿಗಳು ಇವರಿಗೆ ನಾನು ದಿ:21–02–2026 ರಂದು ಕರೆ ಮಾಡಿ ಯಾವ ಕ್ರಮ ಕೈಗೊಂಡಿದ್ದೀರಿ. ಈ ಕೂಡಲೇ ಬಂದ್ ಮಾಡಿ, ಗ್ರಾಮದ ವೃದ್ಧರಿಗೆ, ಜನರಿಗೆ, ಗರ್ಭಿಣಿಯರಿಗೆ ತೆ–ೂಂದರೆ ಆಗುತ್ತಿದ್ದು, ಬಂದ್ ಮಾಡಿಸಿ ಎಂದು ಅವರ ಮೊ.ಸಂ. 8660062405 ಗೆ ಕರೆ ಮಾಡಿ ಕೇಳಿದಾಗ ತನಿಖೆ ಮಾಡುತ್ತೇನೆಂದು ಹೇಳಿದರು, ಸದರಿ ಅಧಿಕಾರಿಯಾದ ವಿರೇಶ ಇವರು ನಾನು ಫೋನ್ ಮಾಡಿದ ಬಗ್ಗೆ ಕಲ್ಲು ಗಣಿಗಾರಿಕೆ ಸಂಘದವರಿಗೆ ಮಾಹಿತಿ ನೀಡಿದ್ದು, ಮತ್ತೆ 2 ಗಂಟೆಗಳ ನಂತರ ಕಲ್ಲು ಗಣಿಗಾರಿಕೆ ಸಂಘದವರು ನನಗೆ ಫೋನ್ ಮಾಡಿ, ನೀನು ಹೋರಾಟ ಮಾಡಬೇಡ, ಇಲ್ಲಂದ್ರೆ ನಿನಗೆ ಬಹಳ ತೊಂದರೆ ಆಗುತ್ತದೆ. ಇದರಲ್ಲಿ ದೊಡ್ಡ–ದೊಡ್ಡ ವ್ಯಕ್ತಿಗಳು ಇದ್ದು. ಉದಾ: ಹಳಿಗೇರಾದಲ್ಲಿ ಎಷ್ಟೋ ಜನರ ಮೇಲೆ ಕೇಸ್ ಆಗಿದೆ, ಹಲ್ಲೆ ಆಗಿದೆ, ನೋಡಪ್ಪ ನಿನಗೂ ಅದೇ ರೀತಿ ಆಗುತ್ತದೆ, ಅಂತಾ ಹೇಳಿದರು. ನಾನು ಕಾನೂನಿನ ಚೌಕಟ್ಟಿನಲ್ಲಿ ಹೋರಾಟ ಮಾಡುವನಾಗಿದ್ದು, ಎಂದು ಕಟ್ ಮಾಡಿದ್ದು, ನಂತರ ನಾನು ಅಧಿಕಾರಿಗೆ ಕರೆ ಮಾಡಿ, ಸರ್ ಯಾಕ್ ಆ ರೀತಿ ಸಂಘದವರಿಗೆ ಮಾಹಿತಿ ಹೇಳಿದ್ದೀರಿ ಅಂದಾಗ ಇಲ್ಲಾ ಸರ್ ಎಂದರು, ನೋಡಿ ಸರ್ ನಾನು ಎಸ್.ಪಿ. ಸರ್ ರವರಿಗೆ, ಡಿ.ಸಿ. ಸರ್ ರವರಿಗೆ ಕಂಪ್ಲೇಟ್ ಮಾಡುತ್ತೇನೆ ಎಂದಾಗ ನಾನೇ ಹೇಳಿದ್ದೇನೆ ಎಂದು ಒಪ್ಪಿಕೊಂಡರು, ನಾನು ನೀವೊಬ್ಬ ಜವಾಬ್ದಾರಿಯುತ ಅಧಿಕಾರಿಯಾಗಿ ಹೇಳುವುದು ತಪ್ಪು ಎಂದಾಗ ಇಲ್ಲಾ ನೀವು ಕಾಲ್ ಮಾಡಿದಾಗ ಅವರು ನನ್ನ ಪಕ್ಕ ಡಿಸಿ ಆಫೀಸ್ ನಲ್ಲಿಯೇ ಆ ಸಂಘದವರು ಇದ್ದರು. ಅವರು ಮಾತನಾಡಿದ ಕೇಳಿಸಿಕೊಂಡಿದ್ದಾರೆಂದು ಹೇಳಿದರು,

ಅದು ತಪ್ಪು ಸರ್ ಎಂದರೆ ಅದೆಲ್ಲಾ ನಿನಗೆ ಎದಕ್ಕೆ ಬೇಕಪ್ಪ ಅವರು ಆ ಸಂಘದ ಅಧ್ಯಕ್ಷರು, ಮಾಹಿತಿ ನೀಡಬೇಕಾಗುತ್ತದೆ. ಬೇಜವಾಬ್ದಾರಿ ಹೇಳಿಕೆ ನೀಡಿದ್ದು, ಇದರ ಆಡಿಯೋ ಇದೆ. ನನಗೆ ಜೀವಕ್ಕೆ ಏನಾದರೂ ಅಪಾಯವಾದರೆ ಅದಕ್ಕೆ ಗಣಿ & ಭೂ ವಿಜ್ಞಾನ ಅಧಿಕಾರಿ ಹಾಗೂ ಕಲ್ಲು ಗಣಿ ಸಂಘದವರೇ ನೇರ ಹೊಣೆಗಾರರು ಆಗಿರುತ್ತಾರೆ ಎಂದು ತಿಳಿಸಿ ಮನವಿ ಸಲ್ಲಿಸಿದರು.

ಈ ಕೂಡಲೇ ಗಣಿ ಮತ್ತು ಭೂ ವಿಜ್ಞಾನ ಅಧಿಕಾರಿಯನ್ನು ಅಮಾನತ್ತು ಮಾಡಬೇಕು. ಮತ್ತು ಕಲ್ಲು ಗಣಿಗಾರಿಕೆ ಬಂದ್ ಮಾಡಲು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ.

### ಎಪಿಡಿ ವತಿಯಿಂದ ಸಾಧನ ಸಲಕರಣೆಗಳ ಮಾಪನ ಶಿಬಿರ

# 65 ವಿಕಲಚೇತನರಿಗೆ ನೆರವು; ಎಪಿಡಿ ಸಂಸ್ಥೆ ಕಾರ್ಯಕ್ಕೆ ಸಾರ್ವಜನಿಕರಿಂದ ಮೆಚ್ಚುಗೆ



• **ಮಲ್ಲಮ್ಮ ನುಡಿ ವಾರ್ತೆ, ಗುರುಮಠಕಲ್**

ಗುರುಮಠಕಲ್: ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ದಿ ಅಸೋಸಿಯೇಷನ್ ಆಫ್ ಪೀಪಲ್ ವಿತ್ ಡಿಸೆಬಿಲಿಟಿ (ಎಪಿಡಿ) ಸಂಸ್ಥೆಯ ವತಿಯಿಂದ ವಿಕಲಚೇತನರು ಬಳಸುವ ವಿವಿಧ ಸಾಧನ ಸಲಕರಣೆಗಳ ಮಾಪನ ಶಿಬಿರವನ್ನು ಸೋಮವಾರ ಯಶಸ್ವಿಯಾಗಿ ಆಯೋಜಿಸಲಾಯಿತು.

ಶಿಬಿರದಲ್ಲಿ ಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ್ದ ವಿಕಲಚೇತನರಿಗೆ ಅವರ ಅಗತ್ಯತೆಗನುಗುಣವಾಗಿ ಸಾಧನಗಳ ಮಾಪನ ಮಾಡಲಾಯಿತು. ಕ್ಯಾಲಿಪರ್, ವೀಲ್‌ಚೇರ್, ಸಿ.ಪಿ. ಚೇರ್, ಕೇನ್, ಸ್ಟ್ಯಾಂಡಿಂಗ್ ಫ್ರೇಮ್ ಹಾಗೂ ಕೃತಕ ಕಾಲು ಜೋಡಣೆ ಸೇರಿದಂತೆ ವಿವಿಧ ಉಪಕರಣಗಳಿಗಾಗಿ ಒಟ್ಟು 65 ಮಂದಿಗೆ ಮಾಪನ ತೆಗೆದುಕೊಳ್ಳಲಾಯಿತು.

ಈ ಸಂದರ್ಭದಲ್ಲಿ ಎಪಿಡಿ ಸಂಸ್ಥೆಯ ಬೆಂಗಳೂರಿನ ಎಎಟಿ ತಂಡದ ನಾಗೇಶ್ ಮತ್ತು ಜಾನ್ ಭಾಗವಹಿಸಿದ್ದರು. ತಾಲೂಕಿನ ಸಿಬ್ಬಂದಿಗಳಾದ ವಿರೂಪಾಕ್ಷಿ ಮಾಲಿ ಪಾಟೀಲ್, ಫಿಜಿಯೋಥೆರಪಿಸ್ಟ್ ಅತೀಶ್ ಕುಮಾರ್, ಆರ್‌ಪಿಡಿ ಟಾಸ್ಕ್ ಫೋರ್ಸ್ ಅಧ್ಯಕ್ಷ ಸಿದ್ಧನಗೌಡ ನಜರಪೂರ ಸೇರಿದಂತೆ ಅಂಬಿಕಾ, ಶಿಲ್ಪಾ ಎಂ, ಶಿಲ್ಪಾ ಎಸ್, ನಾಗಮಣಿ, ರೇಷ್ಮಾ, ಸುರೇಶ್ ಹಾಗೂ ಅನಿಮೇಟರ್ಸ್‌ಗಳಾದ ಯಲ್ಲಪ್ಪ, ಸುಮಿತ್ರಾ, ಗೌರಮ್ಮ, ಪಾರ್ವತಿ, ಲಕ್ಷ್ಮೀ, ಸವಿತಾ ಮತ್ತು ಆಸ್ಪತ್ರೆಯ ಇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಶಿಬಿರಗಳ ಮೂಲಕ ವಿಕಲಚೇತನರಿಗೆ ಅಗತ್ಯ ಸಹಾಯ ಒದಗಿಸುತ್ತಿರುವ ಎಪಿಡಿ ಸಂಸ್ಥೆಯ ಕಾರ್ಯಕ್ಕೆ ಸ್ಥಳೀಯರು ಮೆಚ್ಚುಗೆ ವ್ಯಕ್ತಪಡಿಸಿದರು.

# ಕುರುಬ ಸಮುದಾಯಕ್ಕೆ ಎಸ್.ಟಿ ಸಿಂಧುತ್ವ ಪ್ರಮಾಣಪತ್ರ ನೀಡಲು ಕುರಿ ಹಿಂಡುಸಮೇತ ಪ್ರತಿಭಟನೆ



• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**

ಕರ್ನಾಟಕ ರಾಜ್ಯದ ಕುರುಬ ಸಮುದಾಯಕ್ಕೆ ಪರಿಶಿಷ್ಟ ಪಂಗಡ ಎಸ್ ಟಿ ಮಾನ್ಯತೆ ಹಾಗೂ ಸಿಂಧುತ್ವ ಪ್ರಮಾಣಪತ್ರ ನೀಡುವ ವಿಷಯದಲ್ಲಿ ನಡೆಯುತ್ತಿರುವ ತಾರತಮ್ಯ ಮತ್ತು ವಿಳಂಬವನ್ನು ಖಂಡಿಸಿ, ಕರ್ನಾಟಕ ರಾಜ್ಯ ಎಸ್.ಟಿ ಹೋರಾಟ ಸಮಿತಿ ಹಾಗೂ ಕುರುಬ ಹೋರಾಟ ಸಮಿತಿಯವರು ಕುರಿ ಹಿಂಡುಗಳೊಂದಿಗೆ ಪ್ರತಿಭಟನೆ ಮಾಡಿ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳಿಗೆ ಮನವಿ ಸಲ್ಲಿಸಿದರು.

ಕುರುಬ ಸಮುದಾಯಕ್ಕೆ ಕೊಡಗು, ಬೀದರ, ಕಲಬುರ್ಗಿ, ಯಾದಗಿರಿ ಹಾಗೂ ಕೊಳ್ಳೇಗಾಲ ಪ್ರದೇಶಗಳಲ್ಲಿ ಐತಿಹಾಸಿಕವಾಗಿ ಎಸ್.ಟಿ ಸಿಂಧುತ್ವ ನೀಡಲಾಗುತ್ತಿತ್ತು. 2016ರಲ್ಲಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದ್ದರೂ, ಪ್ರಾಯೋಗಿಕವಾಗಿ ಅರ್ಹರಿಗೆ ಸಿಂಧುತ್ವ ಪ್ರಮಾಣಪತ್ರ ನೀಡಲಾಗುತ್ತಿಲ್ಲ ಎಂದು ಸಮಿತಿ ಆರೋಪಿಸಿದೆ. ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಸಮೀಕ್ಷೆಯ ಪ್ರಕಾರ 25 ಜಿಲ್ಲೆಗಳ 50 ತಾಲ್ಲೂಕುಗಳಲ್ಲಿ 60,595 ಜನರ ಅಧ್ಯಯನ ನಡೆಸಲಾಗಿದೆ.

73% ಸಾಕ್ಷರತೆ ಮಾತ್ರ ಇರುವುದರಿಂದ ಶಿಕ್ಷಣ ಹಿಂದುಳಿತತೆ ಸ್ಪಷ್ಟವಾಗಿದೆ. 78% ಕುಟುಂಬಗಳು ಅಲ್ಪ ಪ್ರಮಾಣದ ಕೃಷಿ ಭೂಮಿಯನ್ನು ಹೊಂದಿದ್ದು, ಆರ್ಥಿಕವಾಗಿ ಹಿಂದುಳಿದ ಸ್ಥಿತಿಯಲ್ಲಿವೆ. ಸಾಂಪ್ರದಾಯಿಕವಾಗಿ ಕುರಿ–ಮೇಕೆ ಸಾಕಣೆ, ಪ್ರಕೃತಿ ಆರಾಧನೆ ಹಾಗೂ ಪಿತೃಪ್ರಧಾನ ಪದ್ಧತಿಗಳನ್ನು ಅನುಸರಿಸುತ್ತಿರುವುದು ಬುಡಕಟ್ಟು ಲಕ್ಷಣಗಳನ್ನು ತೋರಿಸುತ್ತದೆ.

2017, 2018 ಮತ್ತು 2023 ರಲ್ಲಿ ಓಆರ್‌ಜಿಐ ಕೆಲವು ಪ್ರಸ್ತಾವನೆಗಳನ್ನು ತಿರಸ್ಕರಿಸಿದ್ದರೂ, 2018ರಲ್ಲಿ ರಾಷ್ಟ್ರೀಯ ಪರಿಶಿಷ್ಟ ಪಂಗಡ ಆಯೋಗವು ಸಾಕ್ಷ್ಯಾಧಾರಗಳ ಆಧಾರದ ಮೇಲೆ ಕುರುಬ ಸಮುದಾಯವು ಪರಿಶಿಷ್ಟ ಪಂಗಡಕ್ಕೆ ಸೇರಿದ ಲಕ್ಷಣಗಳನ್ನು ಹೊಂದಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿರುವುದಾಗಿ ಸಮಿತಿ ತಿಳಿಸಿದೆ ಎಂದರು.

ಹೋರಾಟ ಸಮಿತಿಯ ಬೇಡಿಕೆಗಳು:

2016ರ ರಾಜ್ಯ ಸರ್ಕಾರದ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೆ ತರಬೇಕು. ಅರ್ಹ ಕುರುಬ ಸಮುದಾಯದವರಿಗೆ ತಕ್ಷಣ ಎಸ್.ಟಿ ಸಿಂಧುತ್ವ ಪ್ರಮಾಣಪತ್ರ ನೀಡಬೇಕು. ಓಆರ್‌ಜಿಐ ಮತ್ತು ಎಸ್.ಟಿ ಆಯೋಗದ ನಡುವೆ ಸಮನ್ವಯ ಸಭೆ ನಡೆಸಿ ತಾರತಮ್ಯ ನಿವಾರಣೆ ಮಾಡಬೇಕು.

ಕೇಂದ್ರ ಸರ್ಕಾರ ತುರ್ತು ಮಧ್ಯಸ್ಥಿಕೆ ವಹಿಸಬೇಕು.

ಸಮಿತಿ ಪ್ರತಿನಿಧಿಗಳು ಮಾತನಾಡಿ, "ನಾವು ಶಾಂತಿಯುತ ಹಾಗೂ ಕಾನೂನುಬದ್ಧ ಹೋರಾಟದ ಮೂಲಕ ನಮ್ಮ ಸಂವಿಧಾನಾತ್ಮಕ ಹಕ್ಕುಗಳನ್ನು ಪಡೆಯಲು ಒತ್ತಾಯಿಸುತ್ತಿದ್ದೇವೆ. ಸರ್ಕಾರ ತಕ್ಷಣ ಕ್ರಮ ಕೈಗೊಂಡು ನ್ಯಾಯ ಒದಗಿಸಬೇಕು" ಎಂದು ತಿಳಿಸಿದ್ದಾರೆ. ಈ ಕುರಿತು ಮುಂದಿನ ದಿನಗಳಲ್ಲಿ ರಾಜ್ಯಮಟ್ಟದ ಹೋರಾಟ, ಜಾಗೃತಿ ಮೆರವಣಿಗೆ ಹಾಗೂ ಸಮಾವೇಶಗಳನ್ನು ನಡೆಸಲಾಗುವುದು ಎಂದು ಹೋರಾಟ ಸಮಿತಿ ಎಚ್ಚರಿಕೆ ನೀಡಿದೆ.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಎಸ್. ಹೋರಾಟ ಸಮಿತಿಯ ರಾಜ್ಯಾಧ್ಯಕ್ಷ ಸಿದ್ದಣ್ಣ ತೇಜಿ, ಕುರುಬ ಹೋರಾಟ ಸಮಿತಿಯ ರಾಜ್ಯ ಸಂಘಟನಾ ಕಾರ್ಯದರ್ಶಿ ಕರಿಯಪ್ಪ ಭ ಕರಿಗಾರ, ಸಂಘಟನಾ ಕಾರ್ಯದರ್ಶಿ ವಿಠಲ ಬಿರಾದಾರ, ಯಾದಗಿರಿ ಕುರುಬ ಹೋರಾಟ ಸಮಿತಿಯ ಜಿಲ್ಲಾಧ್ಯಕ್ಷ ಶಿವಕುಮಾರ ಮುನಗಲ್, ತಾಲೂಕು ಅಧ್ಯಕ್ಷ ಸಿದ್ದು ಪೂಜಾರಿ (ಚಂಡ್ರಿಕಿ), ಬಸವನಬಾಗೇವಾಡಿ ತಾಲೂಕ ಅಧ್ಯಕ್ಷ ಸುರೇಶ ಜಾಲವಾಡಿ ಅರಿಕೇರಿ, ಯಾದಗಿರಿ ಕುರುಬ ಹೋರಾಟ ಸಮಿತಿಯ ಯುವ ಘಟಕ ಜಿಲ್ಲಾಧ್ಯಕ್ಷ ಎಸ್ ನಿಜಲಿಂಗಪ್ಪ ಪೂಜಾರಿ, ಜಿಲ್ಲಾ ಉಪಾಧ್ಯಕ್ಷ ರಾಘವಾಂಕ ಪಾಟೀಲ, ತಾಲೂಕು ಅಧ್ಯಕ್ಷ

ತಾಯಪ್ಪ ಕರಣಿಗಿ, ಯಾದಗಿರಿ ಹೋರಾಟ ಸಮಿತಿಯ ಶಹಾಪುರ ತಾಲೂಕು ಅಧ್ಯಕ್ಷ ರೇವಣ್ಣ ಸಿದ್ದಪ್ಪ ಸೇರಿದಂತೆ ಇನ್ನಿತರ ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಗವಿಮಠದ ಶ್ರೀಗಳಿಂದ ಆಶೀರ್ವಾದ: ಶಿವರಾಜ್ ಮಾನೇಗಾರ




• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**

ಕೊಪ್ಪಳದ ಗವಿಮಠದ ಶ್ರೀ ಗವಿಸಿದ್ದೇಶ್ವರ ಮಹಾಸ್ವಾಮಿಗಳು ಕಂಬಳೇಶ್ವರ ಮಠಕ್ಕೆ ಭೇಟಿ ನೀಡಿದ್ದರು. ಶ್ರೀಗಳಿಗೆ ಕಂಬಳೇಶ್ವರ ಮಠದ ಪೂಜ್ಯಶ್ರೀ ಸೋಮಶೇಖರ ಶಿವಾಚಾರ್ಯರು ಸಾನ್ನಿಧ್ಯವಹಿಸಿ ಮಠಕ್ಕೆ ಬರಮಾಡಿಕೊಂಡುರು. ತಾಯಿ ಭುವನೇಶ್ವರಿಯ ಸೇವಾ ಸಮಿತಿ ಅಧ್ಯಕ್ಷ ಶಿವರಾಜ್ ಮಾನೇಗಾರ ಗವಿ ಮಠದ

ಶ್ರೀಗಳಿಗೆ ಪುಷ್ಪ ಹೂ ಮತ್ತು ಭುವನೇಶ್ವರಿಯ ಭಾವಚಿತ್ರ ಕೊಟ್ಟು ಗೌರವಿಸಿದರು. ಈ ಸಂದರ್ಭದಲ್ಲಿ ಭುವನೇಶ್ವರಿಯ ಸೇವಾ ಸಮಿತಿಯ ಉಪಾಧ್ಯಕ್ಷ ಮಹಮ್ಮದ್ ಪಾಟಕ್ ಮಲ್ಲಿಕಾರ್ಜುನ ಹಂದಕ್ರಿ , ಹಣಮಂತ ಮಾನೇಗಾರ , ದಿನೇಶ್ ಯಾದಗಿರಿ, ವಿನೋದ್ ಬಂಕೂರ ಬಸಯ್ಯಸ್ವಾಮಿ ,ಶ್ರೀಗಳ ಭಕ್ತರು ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.


# ಪ್ರತಿಯೊಬ್ಬರೂ ಕ್ರೀಡೆಯಲ್ಲಿ ಭಾಗವಹಿಸಿ:ಮಲ್ಲೇಶಪ್ಪ ಹೊಸಮನಿ




• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**

ಪ್ರತಿಯೊಬ್ಬರು ಕ್ರೀಡೆಗಳಲ್ಲಿ ಭಾಗವಹಿಸುವುದು ಮುಖ್ಯ. ಸೋಲು ಗೆಲುವು ಸಾಮಾನ್ಯ ಎಂದು ವಡಗೇರಾ. ತಾಲ್ಲೂಕು ಸರ್ಕಾರಿ ನೌಕಕರ ಸಂಘದ ಅಧ್ಯಕ ಮಲ್ಲೇಶಪ್ಪ ಹೊಸಮನಿ ಹೇಳಿದರು.ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡ ರಾಜ್ಯ ಸರ್ಕಾರಿ ನೌಕರರ ಸಂಘದ ವಾರ್ಷಿಕ ಮಹಾಸಭೆ ಹಾಗೂ ವಿವಿಧ ಕ್ರೀಡೆಗಳಲ್ಲಿ ಪ್ರಥಮ ಸ್ಥಾನವನ್ನು ಪಡೆದ ಕ್ರೀಡಾಪಟುಗಳ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.ಜಿಲ್ಲಾ ಮಟ್ಟದ ಕ್ರೀಡೆಗಳಲ್ಲಿ ಭಾಗವಹಿಸಿ ಪ್ರಥಮ ಸ್ಥಾನವನ್ನು ಪಡೆದು ತಾಲ್ಲೂಕಿನ ಕೀರ್ತಿಯನ್ನು ಹೆಚ್ಚಿಸಿದ್ದಿರಿ. ಹಾಗೆಯೇ ಮುಂಬರುವ ರಾಜ್ಯ ಮಟ್ಟದ ಕ್ರೀಡೆಗಳಲ್ಲಿ ಪ್ರಥಮ ಸ್ಥಾನವನ್ನು ಪಡೆದು ಜಿಲ್ಲೆಯ ಹೆಸರನ್ನು ಪ್ರಜ್ವಲಿಸಬೇಕು ಎಂದರು.ಇದೇ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಕ್ರೀಡೆಯಲ್ಲಿ ಭಾಗವಹಿಸಿ ರಾಜ್ಯ ಮಟ್ಟಕ್ಕೆ ಆಯ್ಕೆಯಾದ ಕ್ರೀಡಾಪಟುಗಳಿಗೆ ಸನ್ಮಾನಿಸಿ ಪ್ರಶಂಸನಾ ಪತ್ರವನ್ನು ವಿತರಿಸುವುದರ ಜತೆಗೆ ವಿವಿಧ ಇಲಾಖೆಗಳಲ್ಲಿ ಉತ್ತಮ ಸೇವೆ ಸಲ್ಲಿಸಿದ ನೌಕರರಿಗೆ ಸನ್ಮಾನಿಸಿ ಪ್ರಮಾಣಗಳನ್ನು ವಿತರಿಸಲಾಯಿತು.ಇದೆ ವೇಳೆ 2024–25 ನೇ ಸಾಲಿನ ವಾರ್ಷಿಕ ಖರ್ಚು ವೆಚ್ಚದ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.ಈ ಸಂದರ್ಭದಲ್ಲಿ ಸಾಹೇಬರಡ್ಡಿ ಇಟಗಿ , ಶರಣು ದೊಡ್ಮನಿ,ರಾಯಪ್ಪ, ಪುತಳಿಬಾಯಿ, ಎಚ್ ಬಿ ಬಂಡಿ,ಮಲ್ಲೇಶಿ, ಬಸವರಾಜ ಸಜ್ಜನ್ ತಾಲ್ಲೂಕಿನ ವಿವಿಧ ಇಲಾಖೆಯ ವೃಂದ ಸಂಘದ ಅಧ್ಯಕ್ಷರು, ಹಾಗೂ ವಿವಿಧ ಇಲಾಖೆಯ ನೌಕರರು ಇನ್ನಿತರರು ಇದ್ದರು.ಕಾರ್ಯಕ್ರಮದಲ್ಲಿ ಶಶಿಕಾಂತ ಸ್ವಾಗತಿಸಿದರು, ನಾಗಭೂಷಣ ನಿರೂಪಿಸಿದರೆ ಮಲ್ಲೇಶಿ ಅಭಿನಂದಿಸಿದರು.

# ಬಸ್ ನಿಲ್ದಾಣಕ್ಕೆ ಕೂಲೂರ ಮಲ್ಲಪ್ಪ ಹೆಸರಿಡಿ, ಜನತೆಗೆ ಬಸ್ ಒದಗಿಸಿ: ದಿಮ್ಮೆ



• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**

ಹೊಸ ಕೇಂದ್ರ ಬಸ್ ನಿಲ್ದಾಣಕ್ಕೆ ದಿ.ಕೂಲೂರು ಮಲ್ಲಪನವರ ಹೆಸರಿಟ್ಟು, ಘಟಕಕ್ಕೆ 15 ಕಂಡಕ್ಟರ್ಗಳು, 10 . ಮೆಕ್ಯಾನಿಕ್ ಗಳು ಹಾಗೂ ಕಂಟ್ರೋಲರ್ಗಳ ನೇಮಿಸುವಂತೆ ನಮ್ಮ ಕರ್ನಾಟಕ ಸೇನೆ ಜಿಲ್ಲಾ ಘಟಕ ಒತ್ತಾಯಿಸಿದೆ. ನಗರಕ್ಕೆ ಆಗಮಿಸಿದ್ದ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರಿಗೆಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಮನವಿ ಸಲ್ಲಿಸಿದ ಜಿಲ್ಲಾದ್ಯಕ್ಷ ವಿಶ್ವಾರಾಧ್ಯ ದಿಮ್ಮೆ ಮಾತನಾಡಿ, ತಮಗೆ ಒದಗಿ ಬಂದಿದ್ದ ಮುಖ್ಯಮಂತ್ರಿಯ ಗಾದಿ ತ್ಯಾಗ ಮಾಡಿದ, ಮಾಜಿ ಸಂಸದರಾದ ದಿ॥ಕೂಲೂರು ಮಲ್ಲಪ್ಪನವರು ಹೋರಾಟಗಾರರು ಆಗಿದ್ದು, ಅವರ ಹೆಸರು ನಾಮಕರಣ ಮಾಡಬೇಕು ಎಂದು ಮನವಿ ಮಾಡಿದರು.ಬಸ್ ನಿಲ್ದಾಣದಲ್ಲಿ ಕಳ್ಳತನ, ಕ್ರಿಮಿನಲ್ ಪ್ರಕರಣಗಳು, ಜಾತ್ರೆಗಳ ಸಮಯದಲ್ಲಿ ಮಕ್ಕಳ ನಾಪತ್ತೆ ಆಗುತ್ತಿದ್ದು, ಶಾಲಾ / ಕಾಲೇಜು ಮಕ್ಕಳಿಗೆ ಇಲ್ಲಿ ಕೆಲವು ಕಿಡಿಗೇಡಿಗಳ ಹಾವಳಿ ಇದ್ದು, ಇವುಗಳ ಕಡಿವಾಣಕ್ಕೆ ರಕ್ಷಣೆಗಾಗಿ ಇಲ್ಲಿ ಒಂದು ಪೊಲೀಸ್ ಚೌಕಿ ನಿರ್ಮಾಣ ಮಾಡಬೇಕು.ಇಲ್ಲಿನ ಬಸ್ ಘಟಕದಲ್ಲಿ ಮೆಕ್ಯಾನಿಕ್‌ಗಳ ಕೊರತೆ ಇದ್ದು, ಒಂದೊಂದು ಬಸ್ ಸರ್ವಿಸ್‌ಗೆ ಹೋದರೆ ವಾರಗಟ್ಟಲೇ ಬರುವುದಿಲ್ಲ, ಇದರಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿದೆ. ಮತ್ತು ಚಾಲಕರ, ಅವಶ್ಯವಿದ್ದು, ಕಂಟ್ರೋಲರ್ ಕೂಡಾ ಇರುವುದಿಲ್ಲ, ಇದರಿಂದ ನಿರ್ವಹಣೆ ಕಷ್ಟವಾಗಿದೆ. ಇದಲ್ಲದೇ ಗ್ರಾಮೀಣ ಭಾಗದ ಜನಾನುಕೂಲಕ್ಕಾಗಿ ಹೊಸದಾಗಿ ಬಸ್‌ಗಳನ್ನು ಒದಗಿಸಬೇಕು ಎಂದು ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಮುಖಂಡರಾದ ಅಮರದೀಪ ನಾಯಕ್, ಭೀಮು ಪೂಜಾರಿ, ಚನ್ನಬಸವ ಕನಕ, ಅಬ್ದುಲ್ ರೆಹಮಾನ್ ಸೌಕಾರ್, ನರೇಂದ್ರ ಸೂರ್ಯವಂಶಿ, ರಾಜು ಶಿಂದೆ ಮದರಕಲ್, ವಿಶ್ವಜಿತ್ ಕಟ್ಟಿ ಇನ್ನಿತರರು ಭಾಗಿಯಾಗಿದ್ದರು

### ಶೈಕ್ಷಣಿಕ ಸಮಾವೇಶ ವಿದ್ಯಾರತ್ನ, ಸೇವಾಭೂಷಣ ಪ್ರಶಸ್ತಿ ಪ್ರದಾನ

# ಶಿಕ್ಷಣ ಇಲಾಖೆಯ ಸೇವೆ, ಸರ್ವರ ಸೇವೆಯಾಗಿದೆ: ಸಂಸದ ಸಾಗರ ಖಂಡ್ರೆ



> "ಉತ್ತಮ ಶಿಕ್ಷಕರು ಮತ್ತು ಉತ್ತಮ ಆಡಳಿತಗಾರರಿಗೆ ಸಂಘದ ವತಿಯಿಂದ ಪ್ರಶಸ್ತಿ ನೀಡುತ್ತಿರುವುದು ಪ್ರಶಂಶನೀಯ ಕಾರ್ಯವಾಗಿದೆ. ಪ್ರಶಸ್ತಿ ಪಡೆದವರು ತಮ್ಮ ಕಾರ್ಯಕ್ಷಮತೆ ಹೆಚ್ಚಿಸಿಕೊಳ್ಳುವ ನಿಟ್ಟಿನಲ್ಲಿ ಈ ಪ್ರಶಸ್ತಿ ನೀಡಲಾಗುತ್ತಿದೆ.
>
> ಸಾಗರ ಈಶ್ವರಖಂಡ್ರೆ, ಸಂಸದರು, ಬೀದರ.

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಶಿಕ್ಷಣ ಇಲಾಖೆಯಲ್ಲಿ ಸೇವೆ ಮಾಡುವುದು, ಸಾಮಾಜಿ ರಂಗದ ಎಲ್ಲರ ಸೇವೆಯಾಗಿದೆ ಎಂದು ಸಂಸದ ಸಾಗರ ಈಶ್ವರಖಂಡ್ರೆ ಹೇಳಿದರು.

ಪಟ್ಟಣದ ಭೀಮಣ್ಣಾ ಖಂಡ್ರೆ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಕರ್ನಾಟಕ ರಾಜ್ಯ ಶಾಲಾ ಶಿಕ್ಷಣ ಇಲಾಖೆ ನೌಕರರ ಸಂಘದ ಜಿಲ್ಲಾ ಮತ್ತು ತಾಲೂಕು ಘಟಕದ ವತಿಯಿಂದ ಆಯೋಜಿಸಿದ್ದ ಜಿಲ್ಲಾ ಮಟ್ಟದ ಶೈಕ್ಷಣಿಕ ಸಮಾವೇಶ ಹಾಗು ವಿದ್ಯಾರತ್ನ ಮತ್ತು ಸೇವಾ ಭೂಷಣ ಪ್ರಶಸ್ತಿ ಪ್ರಧಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಸಂಘದ ವತಿಯಿಂದ ಉತ್ತಮ ಶಿಕ್ಷಕರನ್ನು ಗುರುತಿಸಿ ವಿದ್ಯಾರತ್ನ ಪ್ರಶಸ್ತಿ ಮತ್ತು ಉತ್ತಮ ನೌಕರರನ್ನು ಗುರುತಿಸಿ ಸೇವಾಭೂಷಣ ಪ್ರಶಸ್ತಿ ನೀಡುತ್ತಿರುವುದು ಉತ್ತಮ ಕಾರ್ಯವಾಗಿದೆ. ಶಿಕ್ಷಣ ಇಲಾಖೆಯಲ್ಲಿ ಸೇವೆ ಸಲ್ಲಿಸುವುದು ಎಲ್ಲಾ ರಂಗದ ಕಾರ್ಯಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದಂತಾಗುವುದು. ಹೀಗಾಗಿ ಶಿಕ್ಷಣ ರಂಗದಲ್ಲಿ ಸೇವೆ ಸಲ್ಲಿಸುವ ನೌಕರರು ಮತ್ತು ಅಧಿಕಾರಿಗಳು ಯಾವುದೇ ಆಮಿಷ್ಯಗಳಿಗೆ ಒಳಗಾಗದೇ ಉತ್ತಮ ರೀತಿಯಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ಕರ್ನಾಟಕ ರಾಜ್ಯ ಶಾಲಾ ಶಿಕ್ಷಣ ಇಲಾಖೆಯ ನೌಕರರ ಸಂಘದ ಜಿಲ್ಲಾದ್ಯಕ್ಷ ಸುರೇಶ ಟಾಳೆ ಅಧ್ಯಕ್ಷತೆ ವಹಿಸಿದ್ದರು. ತಾಲೂಕು ಅಧ್ಯಕ್ಷ ಸೋಮನಾಥಪ್ಪಾ ರಾಜೇಶ್ವರೆ ಘನಉಪಸ್ಥಿತಿ ವಹಿಸಿದ್ದರು. ಜಿಲ್ಲಾ ಕಾರ್ಯದರ್ಶಿ ಹಣಮಂತ ಕಾರಾಮುಂಗೆ ಪ್ರಾಸ್ತಾವಿಕ ನುಡಿ ನುಡಿದರು. ಕಾರ್ಯಕ್ರಮದಲ್ಲಿ ಸಾಶಿಇ ಅಭಿವೃದ್ಧಿ ಉಪನಿರ್ದೇಶಕ ಗುರುಪ್ರಸಾದ, ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಸೋಮಶೇಖರ ಬಿರಾದಾರ ಚಿದ್ರಿ, ಎಂ.ಡಿ.ಇಷ್ಮಾಯಿಲ್, ರಜನಿಗಂದ ನಿಣ್ಣೇಕರ, ಮುರಳಿಧರ ಎಲ್.ಎ, ಮುಖ್ಯಗುರುಗಳ ಸಂಘದ ಅಧ್ಯಕ್ಷ ಶಿವರಾಜ ಕಪಲಾಪೂರೆ, ಪ್ರಕಾಶ ಟಾಳೆ, ಲಿಪಿಕ ನೌಕರರ ಸಂಘದ ಜಿಲ್ಲಾದ್ಯಕ್ಷ ಬಸವರಾಜ ಜಕ್ಕಾ, ಬಸವರಾಜ ಪಾಟೀಲ, ಶಿವಕುಮಾರ ಸದಾಫುಲೆ, ಗಣಪತಿ ಭಕ್ತಾ, ಮಹೆಬೂಬ ಪಟೇಲ, ಅಂಕುಶ ಢೋಲೆ, ಬಿಕೆಐಟಿ ಪ್ರಾಂಶುಪಾಲ ಉದಯಕುಮಾರ ಕಲ್ಯಾಣೆ, ಪ್ರೌಢಶಾಲಾ ಮುಖ್ಯಶಿಕ್ಷಕ ಸಂಘದ ರಾಜಕುಮಾರ ಜೊಳದಾಪಕೆ, ಸಹ ಶಿಕ್ಷಕರ ಸಂಘದ ಅಧ್ಯಕ್ಷ ದತ್ತಾತ್ರಿ ಕಾಟಕರ, ಮಲ್ಲಿನಾಥ ಸಜ್ಜನ, ಶಿವಕುಮಾರ ಫುಲಾರಿ, ಸೂರ್ಯಕಾಂತ ಪಾಟೀಲ, ಪಾಂಡುರಂಗ ಬೆಲ್ದಾರ, ರವೀಂದ್ರ ರೆಡ್ಡಿ, ಚಂದ್ರಶೇಖರ ಬನ್ನಾಳೆ, ರಾಜಕುಮಾರ ಬಿರಾದಾರ, ವೈಜಿನಾಥ ಸಾಗರ, ದೇವಿದಾಸ ಮೇತ್ರೆ, ಸೂರ್ಯಕಾಂತ ಸುಂಟೆ, ಅಶೋಕ ತಾಂಬೋಳೆ, ಭೀಮಣ್ಣಾ ಕೊಂಕಣೆ, ಉತ್ತಮ ಸಿಂಧೆ, ಸತ್ಯವಾನ ಕಾಂಬಳೆ, ಎಸ್.ಎ.ಮುನ್ನಾಫ್, ರೋಹಿದಾಸ ರಾಠೋಡ, ಗಿಪ್ಸನ್ ಕೋಟೆ, ಅಶೋಕ ಹೊಸಮನಿ ಉಪಸ್ಥಿತರಿದ್ದರು.

ಹಣಮಂತ ಕಾರಾಮುಂಗೆ ಸ್ವಾಗತಿಸಿದರು. ದೇವಿದಾಸ ಮೇತ್ರೆ ನಿರೂಪಿಸಿದರು. ಕಸ್ತೂರಿ ಪಟಪಳ್ಳಿ ವಂದಿಸಿದರು.

### ಉತ್ತಮ ಶಿಕ್ಷಕರಿಗೆ ವಿದ್ಯಾರತ್ನ, ಉತ್ತಮ ಆಡಳಿತಗಾರರಿಗೆ ಸೇವಾಭೂಷಣ ಪ್ರಶಸ್ತಿ

> "ಜಿಲ್ಲಾ ಮಟ್ಟದ ಶೈಕ್ಷಣಿಕ ಸಮಾವೇಶದ ಅಂಗವಾಗಿ ಸುಮಾರು 50 ಜನ ಉತ್ತಮ ಶಿಕ್ಷಕರಿಗೆ ವಿದ್ಯಾರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು. ಹಾಗು ಶಾಲಾ ಶಿಕ್ಷಣ ಇಲಾಖೆಯಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿದ 10 ಜನ ಲಿಪಿಕ ವರ್ಗದವರಿಗೆ ಮತ್ತು ಅಧಿಕಾರಿಗಳಿಗೆ ಸೇವಾ ಭೂಷಣ ಪ್ರಶಸ್ತಿ ಪ್ರದಾನ ಮಾಡಲಾಯಿತು. ಜೊತೆಗೆ ಭಾಲ್ಕಿ ತಾಲೂಕಿನಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿದ 30ಜನ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಹಾಗು 12ಜನ ಪ್ರೌಢಶಾಲಾ ಶಿಕ್ಷಕರಿಗೆ ಉತ್ತಮ ಶಿಕ್ಷಕ ಪ್ರಶಸ್ಥಿ ಪ್ರದಾನ ಮಾಡಲಾಯಿತು.

# ಅಗ್ನಿಪಥ ನೇಮಕಾತಿ ನೋಂದಣಿ

**ಮಲ್ಲಮ್ಮ ನುಡಿ ವಾರ್ತೆ ಬೀದರ** ಆರ್ಮಿ ರಿಕ್ರೂಟಿಂಗ್ ಆಫೀಸ್ ಬೆಳಗಾವಿ ಹಾಗೂ ಬೆಂಗಳೂರು ಹೆಡ್ಕ್ವಾಟರ್ಸ್ ರಿಕ್ರೂಟಿಂಗ್ ಜೋನ್ ಬೆಂಗಳೂರು ಇವರ ಸಹಯೋಗದಲ್ಲಿ ಅಗ್ನಿಪಥ ನೇಮಕಾತಿಗಾಗಿ ದಿನಾಂಕ: 13–02–2026 ರಿಂದ 01–04–2026 ರವರೆಗೆ ಆನ್‌ಲೈನ್ ಮೂಲಕ ನೋಂದಣಿ ಪ್ರಕ್ರಿಯೆ ನಡೆಯಲಿದೆ. ಬೆಳಗಾವಿ, ಬೀದರ, ಕಲಬುರಗಿ, ಕೊಪ್ಪಳ, ರಾಯಚೂರು ಹಾಗೂ ಯಾದಗಿರಿ ಜಿಲ್ಲೆಯಗಳ ಪುರುಷ ಅಭ್ಯರ್ಥಿಗಳು ಜಾಯಿನ್ ಇಂಡಿಯನ್ ಆರ್ಮಿ www.joinindianarmy.nic.in ವೆಬ್‌ಸೈಟ್‌ನಲ್ಲಿ ನೋಂದಣಿ ಮಾಡಿಕೊಳ್ಳಬೇಕು. ಅಗ್ನಿವೀರ ಜನರಲ್ ಡ್ಯೂಟಿ, ಅಗ್ನಿವೀರ ಟೆಕ್ನಿಕಲ್, ಅಗ್ನಿವೀರ ಟ್ರೇಡ್ಸ್‌ಮೆನ್ ಹುದ್ದೆಗಳಿಗೆ 10ನೇ ತರಗತಿ ಉತ್ತೀರ್ಣರಾಗಿರಬೇಕು. ಅಗ್ನಿವೀರ ಟ್ರೇಡ್ಸ್‌ಮೆನ್ ಹುದ್ದೆಗೆ 8ನೇ ತರಗತಿ ಪಾಸ್ ಆಗಿರಬೇಕು. ಅಗ್ನಿವೀರ್ ಕ್ಲರ್ಕ್/ಸ್ಟೋರ್ ಕೀಪರ್ ಟೆಕ್ನಿಕಲ್ ವಿಭಾಗಗಳಿಗೆ ನೇಮಕಾತಿ ನಡೆಯಲಿದೆ. ವಯೋಮಿವಿ, ಶೈಕ್ಷಣಿಕ ಅರ್ಹತೆ ಮತ್ತು ಇನ್ನಿತರ ಹೆಚ್ಚಿನ ಮಾಹಿತಿಗಾಗಿ ದಿನಾಂಕ: 13–02–2026 ರಂದು ಬೆಳಗಾವಿ ಆರ್ಮಿ ರಿಕ್ರೂಟಿಂಗ್ ಆಫೀಸ್‌ದಿಂದ ಹೊರಡಿಸಿದ ಅಧಿಸೂಚನೆ ವೀಕ್ಷಿಸಬಹುದಾಗಿದೆ ಎಂದು ಎಂದು ಬೆಳಗಾವಿ ಆರ್ಮಿ ರಿಕ್ರೂಟಿಂಗ್ ಕಚೇರಿಯ ಡೈರೆಕ್ಟರ್ ರಿಕ್ರೂಟಿಂಗ್ ಕರ್ನಲ್ ಎ.ಕೆ.ಉಪಾಧ್ಯಾಯ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫುಟ್‌ಬಾಲ್ ವಿತರಣಾ ಕಾರ್ಯಕ್ಕೆ ಸಾಗರ ಖಂಡ್ರೆ ಚಾಲನೆ

**ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ:**



ಫುಟ್‌ಬಾಲ್ ಪ್ರಪಂಚದ ಅತ್ಯಂತ ಜನಪ್ರಿಯ ಹಾಗೂ ಪ್ರೇರಣಾದಾಯಕ ಕ್ರೀಡೆಯಾಗಿದ್ದು, ಇದು ಮಕ್ಕಳಲ್ಲಿ, ಯುವಕರಲ್ಲಿ ದೈಹಿಕ ಮತ್ತು ಮಾನಸಿಕ ಸಾಮರ್ಥ್ಯವನ್ನು ವೃದ್ಧಿಸುವ ಮಹತ್ವದ ಸಾಧನವಾಗಿದೆ ಎಂದು ಬೀದರ್ ಜಿಲ್ಲಾ ಸಂಸದರು ಸಾಗರ ಈಶ್ವರ ಖಂಡ್ರೆ ಹೇಳಿದರು.

ತಾಲೂಕಿನ ನಾರಾಯಣಪುರದ ಜವಾಹರನವೋದಯ ವಿದ್ಯಾಲಯದಲ್ಲಿ ಕೇಂದ್ರ ಸರ್ಕಾರದ ಯೋಜನೆಯಡಿ ಆಯೋಜಿಸಲಾದ ಫುಟ್‌ಬಾಲ್ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ ಫುಟ್‌ಬಾಲ್ ಆಟದಿಂದ ಹೃದಯ ಆರೋಗ್ಯ ಸುಧಾರಣೆ, ದೈಹಿಕ ಶಕ್ತಿ ವೃದ್ಧಿ, ಸ್ನಾಯು ಬಲ ಹಾಗೂ ತ್ವರಿತ ಚಲನೆಯ ಸಾಮರ್ಥ್ಯ ಹೆಚ್ಚುತ್ತದೆ. ಇದರೊಂದಿಗೆ ತಂಡದ ಸಹಕಾರ, ಸಂವಹನ ಕೌಶಲ್ಯ ಮತ್ತು ನಾಯಕತ್ವ ಗುಣಗಳು ಬೆಳೆದು ಬರುತ್ತದೆ.ವಿಶ್ವಾಸ, ಸಮರ್ಪಣೆ ಹಾಗೂ ಹೊಣೆಗಾರಿಕೆಯ ಅರಿವು ಗಟ್ಟಿಯಾಗುತ್ತದೆ. ಫುಟ್‌ಬಾಲ್ ಕೇವಲ ಕ್ರೀಡೆ ಮಾತ್ರವಲ್ಲ; ಅದು ಆರೋಗ್ಯ, ತಂಡಭಾವ, ಸಾಂಸ್ಕೃತಿಕ ಏಕತೆ ಹಾಗೂ ವೈಯಕ್ತಿಕ ಬೆಳವಣಿಗೆಯ ಸಂಪೂರ್ಣ ಪಾಠವಾಗಿದೆ. ವಿದ್ಯಾರ್ಥಿಗಳು ಶಿಸ್ತಿನಿಂದ ಅಭ್ಯಾಸ ಮಾಡಿ ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿ ದೇಶದ ಕೀರ್ತಿಯನ್ನು ಹೆಚ್ಚಿಸಬೇಕು, ಎಂದು ಅವರು ಕರೆ ನೀಡಿದರು. ಜಿಲ್ಲೆಯ ಎಂಟು ತಾಲೂಕಿನ ಆಯ್ದ ಸರ್ಕಾರಿ ಪ್ರೌಢ ಶಾಲೆಗಳಿಗೆ ಫುಟಬಾಲ ವಿತರಣೆ ಮಾಡಲಾಯಿತು.

ಪ್ರಾಚಾರ್ಯರಾದ ಶ್ರೀಲತಾ ಮಾತನಾಡಿ, ಫುಟ್‌ಬಾಲ್ ತಂಡದ ಆಟವಾಗಿದ್ದು ಒಬ್ಬರ ಶ್ರಮಕ್ಕಿಂತ ಎಲ್ಲರ ಒಗ್ಗಟ್ಟಿನ ಪ್ರಯತ್ನವೇ ಜಯವನ್ನು ತರುತ್ತದೆ ಎಂದರು. ಈ ಕ್ರೀಡೆ ಜೀವನದಲ್ಲಿ ಸಹಕಾರ, ಸಹನಶೀಲತೆ ಹಾಗೂ ಸ್ನೇಹದ ಮೌಲ್ಯಗಳನ್ನು ಬೋಧಿಸುತ್ತದೆ. ವಿದ್ಯಾರ್ಥಿಗಳು ಉತ್ತಮ ತರಬೇತಿ ಪಡೆದು ರಾಷ್ಟ್ರದ ಗೌರವವನ್ನು ಹೆಚ್ಚಿಸುವ ನಾಗರಿಕರಾಗಬೇಕು ಎಂದು ಅವರು ಆಶಿಸಿದರು.ಈ ಸಂದರ್ಭದಲ್ಲಿ

ಸತೀಶ ಸ್ವಾಮಿ, ಹಣಮಂತ ಕಾರಮುಂಗೆ, ಲಾಮತುರೆ, ಸುಶೀಲ, ತಿವಾರಿ, ರಿಷಿ ಭಾವನಾ, ಚನ್ನವೀರ ಚಕ್ರಸಾಲಿ, ಚಂದ್ರಕಾಂತ ತಳವಾಡೆ, ದೇವಿದಾಸ ಮೇತ್ರೆ, ಮಲ್ಲಿಕಾರ್ಜುನ ಟಂಕಸಾಲೇ, ಮಹಾದೇವ ಚಿಟಗೆರೆ, ಕಾಶೀನಾಥ ರಾಠೋಡ್, ಗಣಪತಿ ಸೇರಿದಂತೆ ವಿವಿಧ ಶಾಲೆಗಳ ದೈಹಿಕ ಶಿಕ್ಷಣ ಶಿಕ್ಷಕರು, ಪಾಲಕರು ಹಾಗೂ ನವೋದಯ ವಿದ್ಯಾಲಯದ ಸಿಬ್ಬಂದಿ ವರ್ಗದವರು ಸೆರಿದಂತೆ ಅನೇಕರು ಉಪಸ್ಥಿತರಿದ್ದರು.

ಧರ್ಮಣ್ಣ ಚಿಟ್ಟಾ ಸ್ವಾಗತಿಸಿದರು, ಭಾವನಾ ಋಷಿ ವಂದಿಸಿದರು

# ನಾಯಿ- ಹಾವು ಕಡಿತದ ಪ್ರಥಮ ಚಿಕಿತ್ಸೆ: ಜನರಲ್ಲಿ ಜಾಗ್ರತೆ




• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ನಾಯಿ ಮತ್ತು ಹಾವು ಕಚ್ಚಿದ ತಕ್ಷಣ ಗಾಬರಿಯಾಗದೆ ಕಡಿತಕ್ಕೆ ಒಳಗಾದ ವ್ಯಕ್ತಿಯನ್ನು ಮೊದಲ ಶಾಂತವಾಗಿಸಿ ತಕ್ಷಣ ತುರ್ತು ವೈದ್ಯಕೀಯ ಚಿಕಿತ್ಸೆ ಸಹಾಯ ಪಡೆಯಬೇಕು ಎಂದು ಹೇಳಿದರು.

ಜಿಲ್ಲಾಆಡಳಿತಜಿಲ್ಲಾಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ತಾಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯ ಸಿಂಧನೂರು ಇವರ ವತಿಯಿಂದ ಭೋಗಾಪುರ ಗ್ರಾಮದಲ್ಲಿ *ನಾಯಿ* *ಕಡಿತ ಮತ್ತು ಹಾವು**ಕಡಿತದ ಪ್ರಥಮ ಚಿಕಿತ್ಸೆ*, ಕ್ರಮಗಳ ಕುರಿತು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಗೀತಾ ಹಿರೇಮಠ ಅವರು ಮಾತನಾಡಿ ನಾಯಿ ಮತ್ತು ಹಾವು ಕಚ್ಚಿದ ತಕ್ಷಣ ಗಾಬರಿಯಾಗದೆ ಕಡಿತಕ್ಕೆ ಒಳಗಾದ ವ್ಯಕ್ತಿಯನ್ನು ಶಾಂತವಾಗಿಸಿ ಗಾಯಗೊಂಡ ಭಾಗವನ್ನು ಸ್ಥಿರವಾಗಿ ಮತ್ತು ಹೃದಯಕ್ಕಿಂತ ಕೆಳಗೆ ಇರಿಸಿ ತಕ್ಷಣ ತುರ್ತು ವೈದ್ಯಕೀಯ ಚಿಕಿತ್ಸೆ ಸಹಾಯ (108 )ಪಡೆಯಬೇಕು.

ಗಾಯವನ್ನು ಸೋಪ್ ಮತ್ತು ನೀರಿನಿಂದ ಅಥವಾ ಸ್ವಚ್ಛವಾದ ಬಟ್ಟೆಯಿಂದ ಒರೆಸಿ ಕಚ್ಚಿದ ಜಾಗವನ್ನು ಕತ್ತರಿಸಬೇಡಿ, ಬಾಯಿಯಿಂದ ವಿಷ ಹೀರಬೇಡಿ ಬಟ್ಟೆಗಳನ್ನು ಕಟ್ಟಬೇಡಿ ಹಾವು ಕಡಿದ ವ್ಯಕ್ತಿಯನ್ನು ಕದಲದಂತೆ ನೋಡಿಕೊಳ್ಳಬೇಕು ಬಿಗಿಯಾದ ವಸ್ತುಗಳೆನಾದರೂ ಇದ್ದರೆ ತೆಗೆಯಬೇಕು,

ಗವಯುವನ್ನು ಆರೈಕೆಯನ್ನು ಮಾಡಬೇಕು ಐಸ್ ಹಾಕಬಾರದು, ಬೇಸಿಗೆ ಕಾಲದ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ, ಮಾಹಿತಿ ನೀಡಲಾಯಿತು,ನಂತರ ನಿಖಿಲ ತಾಲೂಕು ಜಠಿಜಜಟುಠಟಠ–ಋಣ ವಾಂತಿ ಭೇದಿ ಮತ್ತು ಇತರೆ ಸಾಂಕ್ರಾಮಿಕ ರೋಗಗಳ ಬಗ್ಗೆ ಮತ್ತು ಹಾವು ನಾಯಿ ಕಡಿತದ ಬಗ್ಗೆ ಜನರಲ್ಲಿ ಅರಿವು ಮೂಡಿಸಲಾಯಿತು.

ಮತ್ತು ಸಂಪ್ರದಾಯಿಕ ಚಿಕಿತ್ಸಕರು, ದೇವರ ಹೆಸರಲ್ಲಿ ಚಿಕಿಸ್ತೆ ನೀಡುವವರ ಹತ್ತಿರ ಹೋಗದೆ ಹತ್ತಿರದ ಸರಕಾರಿ ಅಥವಾ ಖಾಸಗಿ ಆಸ್ಪತ್ರೆಗೆ ಹೋಗುವಂತೆ ಅರಿವು ಮೂಡಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಆಂಜನೇಯ ಖ/ಓ,ಗುರುನಾಥ ಐಖಿಔ,,ಲಕ್ಷ್ಮಿದೇವಿ ಕಊಅಔ ಕಲ್ಮಂಗಿ, ರಾಧಾ ಆಶಾ ಕಾರ್ಯಕರ್ತೆ,ದುರ್ಗಮ್ಮ,ಮಲ್ಲಮ್ಮ ಅಂಗನವಾಡಿ ಕಾರ್ಯಕರ್ತೆಯರು ಮೈಭೂಬ್ ಸಬ್,ಗರ್ಭಿಣಿ ಹಾಗೂ ತಾಯಂದಿರು, ಸಾರ್ವಜನಿಕರು ಭಾಗವಹಿಸಿದ್ದರು.

# ಕಾಲುವೆ ಮೇಲೆ ವಾಸಿಸುವ ನಿವಾಸಿಗಳಿಗೆ ಹಕ್ಕುಪತ್ರ ಕೋಡಿ: ಸುರೇಶ್ ಗೊಬ್ಬರ ಕಲ್ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಇದೀಗಾ ನಾಲ್ಕು ಕುಟುಂಬಗಳು ವಿರುದ್ಧ ಉದ್ದೇಶಪೂರ್ವಕವಾಗಿ ಇಲ್ಲವೇ ದುರುದ್ದೇಶದಿಂದ ಯಾರೋ ಪತ್ರಿಕಾ ಹೇಳಿಕೆ ನೀಡಿರುವ ಮೂಲಕ ಅವರನ್ನು ಒಕ್ಕಲೆಬ್ಬಿಸಿಲು ನಿರಂತರ ಪ್ರಯತ್ನ ಮಾಡುತ್ತಿದ್ದಾರೆಂದು ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಸಮಿತಿ ವತಿಯಿಂದ ಇಲಾಖೆ ಮುಂದೆ ಪ್ರತಿಭಟನೆ ನಡೆಸಿದರು.

ನಂತರ ಪ್ರತಿಭಟನೆ ಕುರಿತು ಮಾತನಾಡಿದ ತಾಲೂಕು ಅಧ್ಯಕ್ಷ ಸುರೇಶ್ ಗೊಬ್ಬರ ಕಲ್ ಅವರು ಸುಮಾರು 40–50 ವರ್ಷಗಳಿಂದ ಗೋರೆಬಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಗೋರೆಬಾಳ ಕ್ಯಾಂಪ್ ನ ವಿತರಣೆ ಕಾಲುವೆ 36 ಪಕ್ಕದಲ್ಲಿ ಹುಸೇನ್ ಸಾಬ್ ತಂದೆ ಯಮನೂರ ಸಾಬ್. ಚಂದ್ರು ತಂದೆ ಭೀಮಪ್ಪ. ನಾಗಪ್ಪ ತಂದೆ ಹನುಮಂತಪ್ಪ ವಾಸವಾಗಿದ್ದು. ಹತ್ತಿರದಲ್ಲಿ ಯಮನಪ್ಪ ಕರೆ ಇದ್ದು. ಈ ಕೆರೆಯಿಂದ ಇಲ್ಲಿ ವಾಸವಾಗಿರುವ ಮೇಲಿನವರು ಬಳಕೆಯಾಗಿ ನೀರು ತುಂಬಿಕೊಂಡು ತರುತ್ತಾರೆ. ಅಲ್ಲಿ ಯಾವುದೇ ಕಲುಷಿತ ಮತ್ತು ತ್ಯಾಜ್ಯ ವಸ್ತುಗಳನ್ನು ಬಿಡುವುದಿಲ್ಲ. ಸುಮಾರು 40 ವರ್ಷ ಎಂದರೆ ಅವರು ಹಿರಿಯರು ಕೂಡ ಇಲ್ಲಿಯೇ



ವಾಸವಾಗಿದ್ದು. ಇಂದಿನವರೆಗೂ ಕೆರೆಯ ನೀರನ್ನು ಕಲುಷಿತ ಮಾಡುವ ಕುರಿತು ಯಾವುದೇ ದೂರು ನೀಡಿರುವುದಿಲ್ಲ ಎಂದು ಹೇಳಿದರು.

ನಂತರ ಮಾತನಾಡಿದ ನಗರ ಘಟಕದ ಅಧ್ಯಕ್ಷ ದವಲಸಾಬ ದೊಡ್ಡಮನೆ ಅವರು ಈ ಕುಟುಂಬಗಳ ಆರ್ಥಿಕವಾಗಿ ಕಡುಬಡವರು ಇದ್ದು. ಇವರಿಗೆ ಯಾವುದೇ ವಸತಿ ಇರುವುದಿಲ್ಲ. ನಿವೇಶನ ಹೊಂದಿರುವುದಿಲ್ಲ ಏನೋ ಕೂಲಿ–ನಾಲಿ ಮಾಡಿಕೊಂಡು ತಮ್ಮ ದೈನಂದಿನ ಬದುಕು ಕಟ್ಟಿಕೊಂಡಿದ್ದಾರೆ ಇದಲ್ಲದೇ ಈ ಸ್ಥಳದಲ್ಲಿ ಇನ್ನೂ ಸಾಕಷ್ಟು ಕುಟುಂಬಗಳು ವಾಸವಾಗಿದ್ದು ಅವರು ಕೂಡ ಈ ಕೆರೆಯ ನೀರನ್ನು ಬಳಕೆ ಮಾಡಿರುತ್ತಾರೆ. ಈ ಕೇವಲ ನಾಲ್ಕು ಕುಟುಂಬ ಸದಸ್ಯರು ಬಳಿಕ ಮಾಡಿರುವುದಿಲ್ಲ ಇದು ಸಾರ್ವಜನಿಕರ ಕರೆ–ಯಾಗಿರುತ್ತದೆ ಈ ಕುಟುಂಬಗಳನ್ನು ತೆರವುಗೊಳಿಸಲು ಕಾನೂನಾತ್ಮಕ ಜರುಗಿಸಿದ್ದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಇದನ್ನು ಖಂಡಿಸುತ್ತದೆ. ಒಂದು ವೇಳೆ ಈ ಕುಟುಂಬಗಳ ವಿರುದ್ಧ ಕ್ರಮ ಜರುಗಿಸದರೆ ಆ ಕುಟುಂಬದ ಸದಸ್ಯರೊಂದಿಗೆ ತಮ್ಮ ಕಾರ್ಯಾಲಯ ಮುಂದೆ ನಿರಂತರ ಧರಣಿ ಸತ್ಯಾಗ್ರಹ ನಡೆಸಲಾಗುತ್ತಿದ

ಇಲ್ಲವೇ ಅಲ್ಲಿ ವಾಸವಾಗಿರುವ ಎಲ್ಲಾ ಕುಟುಂಬಗಳನ್ನು ಸ್ಥಳಾಂತರ ಮಾಡಿ ಗ್ರಾಮ ಪಂಚಾಯತಿ ಗೋರೆಬಾಳಕ್ಕೆ ಸೂಕ್ತ ನಿರ್ದೇಶನ ನೀಡಿ ಅವರಿಗೆ ಸರ್ಕಾರಿ ಜಾಗೆಯಲ್ಲಿ ಯಾವುದಾದರು ಯೋಜನೆಯಲ್ಲಿ ಮನೆಗಳನ್ನು ನಿರ್ಮಿಸಿ ಹಕ್ಕು ಪತ್ರಗಳನ್ನು ವಿತರಿಸಲು ಸೂಚಿಸುವುದು ಇಲ್ಲವೇ ಯಥಾ ಸ್ಥಿತಿ ಅವರಿಗೆ ನೆಮ್ಮದಿಯಾಗಿ ಬದುಕಲು ಅವಕಾಶ ಮಾಡಿಕೊಡಬೇಕು,

ಒಂದು ವೇಳೆ ತೆರುವುಗೊಳಿಸಿದರೆ ಈ ಕುಟುಂಬದ ಸದಸ್ಯರು ಅಪಾಯಕಾರಿ ನಿರ್ಧಾರ ತೆಗೆದುಕೊಳ್ಳುವ ಸಾಧ್ಯತೆಯಿದ್ದು ಹಾಗೆನಾದರೂ ಆದರೆ ತಮ್ಮ ಇಲಾಖೆಯನ್ನು ಹೊಣೆ ಮಾಡಲಾಗುವುದು, ಎಂದರು ಸಹಾಯಕ ಕಾರ್ಯಪಾಲಕ ಅಭಿಯಂತರರು ತುಂಗಾ ಭದ್ರಾ ಎಡದಂಡೆ ಕಾಲುವೆ ಉಪ ವಿಭಾಗ ಅವರಿಗೆ ಕರ್ನಾಟಕ ರಕ್ಷಣಾ ವೇದಿಕೆ ವೇದಿಕೆ ಮನವಿ ಪತ್ರ ಸಲ್ಲಿಸಿ ಎಚ್ಚರಿಸಿದರು ಈ. ಸಂದರ್ಭದಲ್ಲಿ .

ಹನುಮೇಶ ತಿಪ್ಪನಹಟ್ಟಿ. ಆಂಜನೇಯ. ರಾಘವೇಂದ್ರ. ಮೈಬೂಸಾಬ ವಿಜಯ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಧ್ಯಕ್ಷ ಉಪಾಧ್ಯಕ್ಷರ ಪದಗ್ರಹಣ ಕಾರ್ಯಕ್ರಮ



• ಮಲ್ಲಮ್ಮ ನುಡಿ ವಾರ್ತೆ ಕುಕನೂರ

ಪಟ್ಟಣ ಪಂಚಾಯಿತಿ ನೂತನ ಅಧ್ಯಕ್ಷೆಯಾಗಿ ಲೀಲಾವತಿ ಮುಧೋಳ್ ಹಾಗೂ ಉಪಾಧ್ಯಕ್ಷೆ ಮಂಜುಳಾ ಕಲ್ಮನಿ ಅವರ ಅಧಿಕಾರ ಪದಗ್ರಹಣ ಸಮಾರಂಭ ಸೋಮವಾರ ಪಟ್ಟಣ ಪಂಚಾಯಿತಿ ಸಭಾಂಗಣದಲ್ಲಿ ನಡೆಯಿತು. ಪಟ್ಟಣ ಪಂಚಾಯಿತಿ ಮುಖ್ಯ ಅಧಿಕಾರಿ ನಾಗೇಶ್ ಅವರು ನೂತನ ಪದಾಧಿಕಾರಿಗಳಿಗೆ ಅಧಿಕಾರ ಸ್ವೀಕಾರದ ಪ್ರಮಾಣ ವಚನ ಬೋಧಿಸಿದರು.

ನಂತರ ಮಾತನಾಡಿದ ನೂತನ ಅಧ್ಯಕ್ಷೆ ಲೀಲಾವತಿ ಮುಧೋಳ್, ಪಟ್ಟಣದ ಮೂಲಸೌಕರ್ಯ ಅಭಿವೃದ್ಧಿ, ಸ್ವಚ್ಛತೆ, ಶುದ್ಧ ಕುಡಿಯುವ ನೀರು ಸೇರಿದಂತೆ ಜನಪರ ಯೋಜನೆಗಳಿಗೆ ಆದ್ಯತೆ ನೀಡುವುದಾಗಿ ತಿಳಿಸಿದರು.

ಉಪಾಧ್ಯಕ್ಷೆ ಮಂಜುಳಾ ಕಲ್ಮನಿ ಅವರುಮಾತನಾಡಿ , ಸದಸ್ಯರ ಸಹಕಾರದೊಂದಿಗೆ ಪಟ್ಟಣದ ಸಮಗ್ರ ಅಭಿವೃದ್ಧಿಗೆ ಬದ್ಧರಾಗಿರುವುದಾಗಿ ಹೇಳಿದರು.ಕಾರ್ಯಕ್ರಮದಲ್ಲಿ ತಾಲ್ಲೂಕು ಗ್ಯಾರಂಟಿ ಯೋಜನೆ ಅಧ್ಯಕ್ಷ ಸಂಗಮೇಶ ಗುತ್ತಿ, ಸತ್ಯನಾರಾಯಣ ಹರಪನಹಳ್ಳಿ, ಗಗನ್ ನೋಟಗಾರ, ರೈಮನ್ ಸಾಬ್ ಮಕಪ್ಪನವರ್, ಮಂಜು ಯಡಿಯಾಪುರ, ಸಿರಾಜ್ ಕರ್ಮುಡಿ , ರಾಮಣ್ಣ ಕಲ್ಮನಿ, ಪ್ರಶಾಂತ ಆರ್., ಬೆರಳಿನ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ಪ.ಪಂ. ಸದಸ್ಯರು, ಕಾಂಗ್ರೆಸ್ ಮುಖಂಡರು ಹಾಗೂ ಸಿಬ್ಬಂದಿ ಭಾಗವಹಿಸಿದ್ದರು.

# ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರ ಪ್ರವಾಸ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ರಾಮಪ್ಪ ಎಂ. ಅವರು ಫೆ.24ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಅವರು ಫೆ.23ರ ಮಧ್ಯಾಹ್ನ 2 ಗಂಟೆಗೆ ಬೆಂಗಳೂರಿನಿಂದ ನಿರ್ಗಮಿಸಿ ರೈಲು ಮಾರ್ಗವಾಗಿ ರಾತ್ರಿ 8 ಗಂಟೆಗೆ ರಾಯಚೂರು ನಗರಕ್ಕೆ ಆಗಮಿಸಿ ವಾಸ್ತವ್ಯ ಮಾಡುವರು. ಫೆ.24ರ ಬೆಳಿಗ್ಗೆ 6 ಗಂಟೆಗೆ ರಾಯಚೂರಿನಿಂದ ನಿರ್ಗಮಿಸಿ 7 ಗಂಟೆಗೆ ಮಂತ್ರಾಲಯದ ದೇವಸ್ಥಾನಕ್ಕೆ ಭೇಟಿ ನೀಡುವರು. ಬೆಳಿಗ್ಗೆ 9 ಗಂಟೆಗೆ ಮಂತ್ರಾಲಯದಿಂದ ನಿರ್ಗಮಿಸಿ 10.30ಕ್ಕೆ ರಾಯಚೂರಗೆ ಆಗಮಿಸಿ ಪಕ್ಷದ ಕಚೇರಿಗೆ ಭೇಟಿ ನೀಡುವರು. ಬೆಳಿಗ್ಗೆ 11ಕ್ಕೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಭೋವಿ ಅಭಿವೃದ್ಧಿ ನಿಗಮದ ಯೋಜನೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಸಂಜೆ 4ಕ್ಕೆ ರಾಮನಗರ ಕ್ಯಾಂಪ್ ಹಾಗೂ ಪಂಚಮುಖಿ ಗಾಣದಾಳ ಗ್ರಾಮದಲ್ಲಿನ ಭೋವಿ ಕಾಲೋನಿಗಳಲ್ಲಿ ಭೇಟಿ ನೀಡಿ ಸಮಾಜದ ಕುಂದುಕೊರತೆಗಳ ಹಾಗೂ ನಿಗಮದ ಸೌಲಭ್ಯಗಳ ಬಗ್ಗೆ ಜನರೊಂದಿಗೆ ಸಂವಾದ ನಡೆಸಲಿದ್ದಾರೆ ಎಂದು ನಿಗಮದ ಪ್ರಧಾನ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೋಂದಣಿ ಅಭಿಯಾನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಕೇಂದ್ರಸರ್ಕಾರದ ಪ್ರಧಾನ ಮಂತ್ರಿಶ್ರಮಯೋಗಿ ಮಾನ್–ಧನ್ ಯೋಜನೆ ಹಾಗೂ ವ್ಯಾಪಾರಿಗಳು ಮತ್ತು ಸ್ವಯಂ ಉದ್ಯೋಗಿ ವ್ಯಕ್ತಿಗಳಿಗೆ ರಾಷ್ಟ್ರೀಯ ಪಿಂಚಣಿ ಯೋಜನೆ (ಎನ್‌ಪಿಎಸ್–ವ್ಯಾಪಾರಿಗಳು) ಯೋಜನೆಗಳಡಿ ಅಸಂಘಟಿತ ವಲಯದ ಕಾರ್ಮಿಕರನ್ನು, ವ್ಯಾಪಾರಿಗಳು ಹಾಗೂ ಸ್ವ–ಯಂ ಉದ್ಯೋಗಿಗಳನ್ನು ನೊಂದಾಯಿಸಲು ದಿನಾಂಕ: 15–01–2026 ರಿಂದ 15–03–2026ರವರೆಗೆ ವಿಶೇಷ ನೋಂದಣಿ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. 18 ರಿಂದ 40 ವರ್ಷದೊಳಗಿನ ಅಸಂಘಟಿತ ಕಾರ್ಮಿಕರು ಈ ಯೋಜನೆಯಡಿ ನೋಂದಾಯಿಸಬಹುದಾಗಿದೆ. ವಯಸ್ಸಿಗೆ ಅನುಗುಣವಾಗಿ ಮಾಸಿಕವಾಗಿ 55 ರೂ. ರಿಂದ 200ರೂ. ವರೆಗೆ ವಂತಿಕೆ ಪಾವತಿ ಮಾಡಬೇಕಾಗುತ್ತದೆ. ಕೇಂದ್ರ ಸರ್ಕಾರದ ವತಿಯಿಂದ ಅಷ್ಟೇ ವಂತಿಕೆ ಪಾವತಿಸಿ ಬ್ಯಾಂಕ್ ಖಾತೆಯಲ್ಲಿ ಈ ಮೊತ್ತವನ್ನು ಸಂಗ್ರಹಿಸಲಾಗುತ್ತದೆ. 60 ವರ್ಷ ಪೂರ್ಣಗೊಂಡ ನಂತರ ಮಾಸಿಕ 3000ರೂ. ಪಿಂಚಣಿ ಸೌಲಭ್ಯ ಪಡೆಯಬಹುದಾಗಿದೆ.

ಈ ಯೋಜನೆಯಡಿ ನರೇಗಾಕಾರ್ಮಿಕರು, ಎಸ್‌ಹೆಚ್‌ಜಿ ಸದಸ್ಯರು, ಕೃಷಿ ಕಾರ್ಮಿಕರು, ಅಂಗನವಾಡಿ ಕಾರ್ಮಿಕರು, ಮಧ್ಯಾಹ್ನದ ಬಿಸಿ ಊಟದ ಕಾರ್ಮಿಕರು, ಆಶಾ ಕಾರ್ಯಕರ್ತೆಯರು, ಬೀದಿ ಬದಿ ವ್ಯಾಪಾರಿಗಳು, ಗೃಹ ಕಾರ್ಮಿಕರು, ಮೀನುಗಾರರು, ಇನ್ನಿತರೆ ಅಸಂಘಟಿತ ವಲಯಗಳ ಕಾರ್ಮಿಕರು ಹಾಗೂ ವ್ಯಾಪಾರಿಗಳು ತಮ್ಮ ಆಧಾರ್ ಕಾರ್ಡ್, ಬ್ಯಾಂಕ್ ಪಾಸ್‌ಬುಕ್ ಹಾಗೂ ಮೊದಲ ತಿಂಗಳ ವಂತಿಕೆಯೊಂದಿಗೆ ಸಮೀಪದ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ನೋಂದಣಿಯಾಗಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.

# ರಾಮಲಿಂಗೇಶ್ವರ ಜಾತ್ರೆ ಸಂಪನ್ನ



• ಮಲ್ಲಮ್ಮ ನುಡಿ ವಾರ್ತೆ ಮುದಗಲ್

ಕಪಟ, ಮೋಸ, ವಂಚನೆ, ಪರಸ್ಪರ ನಿಂದನೆಗಳನ್ನು ಬದಿಗೊತ್ತಿ ಪರಸ್ಪರ ಪ್ರೀತಿಸುವ ಮತ್ತು ಸದ್ಭಾವಗಳನ್ನು ಮತ್ತೊಬ್ಬರಲ್ಲಿ ಪ್ರೀತಿಯಿಂದ ಹಂಚುವ ಸತ್ಕಾರ್ಯವನ್ನು ಪರಿಶುಧ್ಧ ಮನದಿಂದ ಮಾಡಿದಾಗ ಮಾತ್ರ ದೈವತ್ವದ ಶಕ್ತಿ ನಮಗೆ ಪ್ರಾಪ್ತಿಯಾಗುವುದು ಎಂದು ಕೊಪ್ಪಳದ ಅಭಿನವ ಗವಿಶ್ರೀಗಳು ಅಭಿಪ್ರಾಯ ಪಟ್ಟರು.

ಮುದಗಲ್ ಸಮೀಪದ ಗುಡಿಹಾಳ ಗ್ರಾಮದಲ್ಲಿ ಕಳೆದ 5 ದಿನಗಳಿಂದ ನಡೆದ ಶ್ರೀ ರಾಮಲಿಂಗೇಶ್ವರ ಜಾತ್ರಾಮಹೋತ್ಸವದ ಸಮಾರೋಪ ಸಮಾರಂಭವನ್ನು ಜ್ಯೋತಿ ಬೆಳಗಿಸುವುದರ ಮೂಲಕ ಉದ್ಘಾಟಿಸಿ ನೆರೆದ ಭಕ್ತರಿಗೆ ಆಶೀರ್ವಚನ ನೀಡಿದರು. ಕಳೆದ 15 ವರ್ಷಗಳಿಂದ ಗುಡಿಹಾಳ ಗ್ರಾಮದಲ್ಲಿ ಚಿಕ್ಕ ಪ್ರಮಾಣದಲ್ಲಿ ಆರಂಭಗೊಂಡ ಈ ಜಾತ್ರಾ ಮಹೋತ್ಸವವು ಇದೀಗ ಉತ್ತರೋತ್ತರವಾಗಿ ಸಾಗಲು ನೆರೆದ ಭಕ್ತಗಣದ ಸಹಾಯ ಸಹಕಾರ ಎಂದರು. ಶರಣರ ತತ್ವಾದರ್ಶಗಳನ್ನು ಮತ್ತು ಪುರಾಣ ಪ್ರವಚನಗಳನ್ನು ಪಠಣ ಮಾಡುವುದರಿಂದ, ಜೀವನದಲ್ಲಿ ಮನಪರಿವರ್ತನೆಯಾಗುವುದರ ಜೊತೆಗೆ ಪ್ರವಚನಗಳನ್ನು ಆಲಿಸಿ ನಮ್ಮ ನಿತ್ಯದ ಬದುಕಿನುದ್ದಕ್ಕೂ ಮೈಗೂಡಿಸಿಕೊಳ್ಳುವುದರಿಂದ ಉತ್ತಮ ಸಮಾಜ ನಿರ್ಮಿಸಬಹುದು ಎಂದರು. ಯುವಕರು ಮಕ್ಕಳು ಮೊಬೈಲ್ ಟಿವಿ ಮಾಧ್ಯಮಗಳಿಂದ ಉಪಯುಕ್ತ ಮಾಹಿತಿ ಮಾತ್ರ ಪಡೆದು ದುಶ್ಚಟಗಳಿಗೆ ಬಲಿಯಾಗದೇ ಪಾಲಕರಿಗೆ ಉತ್ತಮ ಮಕ್ಕಳಾಗಿ ಸತ್ಪ್ರಜೆಗಳಾಗುವಂತೆ ಕಿವಿಮಾತು ಹೇಳಿದರು. ಕುಕನೂರಿನ ಚನ್ನಮಲ್ಲ ಶಿವಯೋಗಿಗಳು ಜಾತ್ರಾ ಮಹೋತ್ಸವ ನಡೆದು ಬಂದ ಹಾದಿಯ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ವೇದಿಕೆ ಮೇಲೆ ಸಂತೆಕೆಲ್ಲೂರಿನ ಗುರುಬಸವ ಮಹಾಸ್ವಾಮಿಗಳು, ಹುನಕುಂಟಿಯ ಶರಣಯ್ಯ ತಾತನವರು, ತಿಮ್ಮನಗೌಡ ಚಿಲ್ಕ ರಾಗಿ ಉಪಸ್ಥಿತರಿದ್ದರು.

# ವನ್ಯಜೀವಿಗಳ ಅರಣ್ಯ ಸಂರಕ್ಷಣೆ ನಮ್ಮೆಲ್ಲರ ಕರ್ತವ್ಯ: ನಾಯಕ

• ಮಲ್ಲಮ್ಮ ನುಡಿ ವಾರ್ತೆ ಮುದಗಲ್




ಪರಿಸರ ಸುಭಿಕ್ಷೆಯಾಗಿ ಇರಲು ವನ್ಯಜೀವಿಗಳ ರಕ್ಷಣೆಯ ಜತೆಗೆ ಅರಣ್ಯ ಸಂಪತ್ತು ಉಳಿಸಿಕೊಂಡು ಹೋಗುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಲಿಂಗಸುಗೂರು ತಾಲೂಕು ಅರಣ್ಯವಲಯಾಧಿಕಾರಿ ಸುಭಾಶ್ಚಂದ್ರ ನಾಯಕ ಹೇಳಿದರು.

ಪಟ್ಟಣದ ಬಾಲಕಿಯರ ಸರಕಾರಿ ಪ್ರೌಢ ಶಾಲೆ ಮುದಗಲ್ ಹಾಗೂ ನಿಸರ್ಗ ಇಕೋ ಕ್ಲಬ್ ಸಹಯೋಗದಲ್ಲಿ ಅರಣ್ಯ ಸಂರಕ್ಷಣೆ ಹಾಗೂ ಉರಗ ಸಂರಕ್ಷಣೆ ಕುರಿತು ಹಮ್ಮಿಕೊಂಡಿದ್ದ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಅರಣ್ಯಸಂರಕ್ಷಣೆಯ ಪ್ರಾಮುಖ್ಯತೆ, ವನ್ಯಜೀವಿಗಳ ಸಂರಕ್ಷಣೆ, ಅವುಗಳಿಂದ ಪರಿಸರದ ಮೇಲೆ ಉಂಟಾಗುವ ಹಾನಿಯ ಪರಿಣಾಮದ ಕುರಿತು ಹಾಗೂ ಅರಣ್ಯ ಇಲಾಖೆಯಲ್ಲಿ ಸೇವೆ ಸಲ್ಲಿಸಲು ಅರ್ಹತೆ ಬಗ್ಗೆ ತಿಳಿಸಿದರು. ಉತ್ತಮವಾಗಿ ಅಭ್ಯಾಸ ಮಾಡಿ ಒಳ್ಳೆಯ ಹುದ್ದೆ ಪಡೆಯಬಹುದು ಎಂದು ಹೇಳಿದರು.

ಉರಗ ಸಂರಕ್ಷಕ ಲಿಂಗಸುಗೂರು ಖಾಲೀದ್ ಚಾವೂಸ ಮಾತನಾಡಿ ಹಾವುಗಳು ಪರಿಸರ ಸಂರಕ್ಷಣೆಯಲ್ಲಿ ಪ್ರಮುಖವಾಗಿವೆ. ಎಲ್ಲಾ ಹಾವುಗಳು ವಿಷಕಾರಿಯಲ್ಲ. ಹಾವುಗಳಿಗೆ ಹಾಲು ಹಾಕುವುದು, ಹುತ್ತದಲ್ಲಿ ಕುಂಕುಮ, ಅರಿಷಣ ಹಾಕುವುದು ಮಾಡುವುದರಿಂದ ಹಾವುಗಳಿಗೆ ತೊಂದರೆಯಾಗುತ್ತದೆ. ಹಾವು ಕಚ್ಚಿದಾಗ ಪ್ರಥಮ ಚಿಕಿತ್ಸೆ ಹೇಗೆ ಮಾಡಬೇಕು ಎಂದು ತಿಳಿಸಿದರು. ಕೆಲ ಹಾವುಗಳ ಪ್ರಭೇದಗಳನ್ನು ತೋರಿಸಲಾಯಿತು. ಕಾರ್ಯಕ್ರಮ ಅಧ್ಯಕ್ಷತೆ ಖಆಒಅ ಅಧ್ಯಕ್ಷ ರಮೇಶ ಹಾದಿಮನಿ ವಹಿಸಿದ್ದರು. ಕಾರ್ಯಕ್ರಮದ ಸಂಚಲಕರಾದ ಮಲ್ಲಿಕಾರ್ಜುನ ಗೌಡೂರು ಪ್ರಾಸ್ತಾವಿಕ ವಾಗಿ ಮಾತನಾಡಿದರು.

ಕಾರ್ಯಕ್ರಮ ನಿರೂಪಣೆ ಕು. ಮೇಘಾ ನೆರವೇರಿಸಿದರು.

ಮುಖ್ಯಶಿಕ್ಷಕ ಬಾಲಚಂದ್ರ ದಾಸರ್, ಶಿಕ್ಷಕರಾದ ಅಮರೇಗೌಡ ಅಗಸಿಮುಂದಿನ, ಪ್ರಭುಲಿಂಗ ಗದ್ದಿ, ಶಂಕರಗೌಡ, ಸುಜಿತ ಆನಂದ, ಬಸಪ್ಪ ಮಾದರ, ಯಾಸ್ಮೀನ ಬಾನು, ಭಾಗ್ಯ ಜ್ಯೋತಿ , ಶೋಭಾ ಇಂಗಳೇಶ್ವರ, ನಂದಮ್ಮ ಹಾಗೂ ಶಿಕ್ಷಕಿಯರು, ವಿದ್ಯಾರ್ಥಿನಿಯರು ಇದ್ದರು.

# ದನದ ಶೆಡ್‌ಗೆ ಆಕಸ್ಮಿಕ ಬೆಂಕಿ ಜಾನುವಾರುಗಳು ಪಾರು



• ಆನೆಹೊಸುರು , ಲಿಂಗಸುಗೂರು

ತಾಲೂಕಿನ ನೀರಲಕೇರಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಚಿತ್ರನಾಳ ಗ್ರಾಮದಲ್ಲಿ ದನದ ಶೆಡ್ ಗೆ ಆಕಸ್ಮಿಕ ಬೆಂಕಿ ತಗುಲಿದ್ದು, ಅಗ್ನಿಶಾಮಕ ದಳದ ಕಾರ್ಯಾಚರಣೆ ಯಿಂದ, ಜಾನುವಾರುಗಳನ್ನು ಪ್ರಾಣಾಪಾಯದಿಂದ ರಕ್ಷಣೆ ಮಾಡಿದ ಘಟನೆ ನಡೆದಿದೆ.

ಶುಕ್ರವಾರ ಬೆಳಗ್ಗೆ 7 ಗಂಟೆ ಸುಮಾರಿಗೆ ಚಿತ್ರನಾಳ ಗ್ರಾಮದ ಯಲ್ಲಪ್ಪ ಎಂಬುವವರಿಗೆ ಸೇರಿದ ದನದ ಶೆಡ್ ಗೆ ಆಕಸ್ಮಿಕ ಬೆಂಕಿ ತಗುಲಿದ್ದು ಈ ವೇಳೆ ಅಗ್ನಿಶಾಮಕ ದಳ ಅಧಿಕಾರಿಗಳಿಗೆ ಮಾಹಿತಿ ತಿಳಿಸಿದ್ದಾರೆ.

ಘಟನೆ ಮಾಹಿತಿ ತಿಳಿಯುತ್ತಿದ್ದಂತೆ ಸ್ಥಳಕ್ಕೆ ದೌಡಾಯಿಸಿದ ಅಗ್ನಿಶಾಮಕ ದಳದ ಸಿಬ್ಬಂದಿಗಳು ದನದ ಶೆಡ್ ಗೆ ಹತ್ತಿದ ಬೆಂಕಿ ನಂದಿಸಿ, ಶೆಡ್ ನಲ್ಲಿದ್ದ ಎರಡು ಎತ್ತುಗಳು ಹಾಗೂ ಒಂದು ಎಮ್ಮೆ ಯ ಜೀವ ರಕ್ಷಣೆ ಮಾಡಿದ್ದು ಈ ವೇಳೆ ಬೆಂಕಿಯ ಬಿಸಿ ಗೆ ಜಾನುವಾರುಗಳಿಗೆ ಸಣ್ಣ ಪುಟ್ಟ ಸುಟ್ಟ ಗಾಯಗಳಾಗಿವೆ ಎಂದು ತಿಳಿದುಬಂದಿದೆ.

ಈ ಸಂದರ್ಭದಲ್ಲಿ ಅಗ್ನಿಶಾಮಕದಳದ ಸಿಬ್ಬಂದಿಗಳಾದ ಹುಲುಗಪ್ಪ,ಹನುಮೇಶ, ಅಮರೇಶ ಮೇಟಿ, ಅಮರೇಶ ಪವಾರ್,ಅಮರೇಶ ರಾಠೋಡ್, ದೇವಪ್ಪ ವಾಲಿಕಾರ , ಮಲ್ಲೇಶ ಸೇರಿದಂತೆ ಇತರರಿದ್ದರು.

# ಯೋಜನೆಗಳ ಪ್ರಗತಿಗೆ ವೇಗ ಕೋಡಿ: ಕುಮಾರ ನಾಯಕ ಕಟ್ಟುನಿಟ್ಟಿನ ನಿರ್ದೇಶನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ರೈಲ್ವೆ ಲೈನ್ ನಿರ್ಮಾಣ ಯೋಜನೆ, ಇಂಡಿಯಾ ಪೋಸ್ಟ್, ಬಿಎಸ್‌ಎನ್‌ಎಲ್, ಸರ್ವ ಶಿಕ್ಷಣ ಶಿಕ್ಷಣ ಅಭಿಯಾನ, ಸ್ವಚ್ಛ ಭಾರತ ಮಿಷನ್, ಜಲಜೀವನ ಮಿಷನ್, ಪ್ರಧಾನಮಂತ್ರಿ ಉಜ್ವಲ ಯೋಜನೆ, ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ, ಸೇರಿದಂತೆ ವಿವಿಧ ಕೇಂದ್ರ ಪುರಷ್ಕೃತ ಯೋಜನೆಗಳ ಪ್ರಗತಿಗೆ ವೇಗ ನೀಡಬೇಕು ಎಂದು ರಾಯಚೂರು ಲೋಕಸಭಾ ಕ್ಷೇತ್ರದ ಸದಸ್ಯರಾದ ಜಿ. ಕುಮಾರ ನಾಯಕ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಫೆ.21ರಂದು ನಡೆದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಮೊದಲಿಗೆ ಕೃಷಿ ಇಲಾಖೆಯ ಯೋಜನೆಗಳ ಪ್ರಗತಿಯ ಬಗ್ಗೆ ಸಂಸದರು ಕೇಳಿದರು. ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ರಾಯಚೂರು ಜಿಲ್ಲೆಯಲ್ಲಿ 2025ನೇ ಸಾಲಿನ ಮುಂಗಾರಿನಲ್ಲಿ 12,477 ರೈತರು ಮತ್ತು ಹಿಂಗಾರಿನಲ್ಲಿ 6909 ರೈತರು ನೋಂದಣಿ ಮಾಡಿದ್ದಾರೆ. ವಿಮಾ ಸಂಸ್ಥೆಯಿಂದ ಬೆಳೆವಿಮೆ ಪರಿಹಾರ ಇತ್ಯರ್ಥಪಡಿಸುವ ಕಾರ್ಯ ಪ್ರಗತಿಯಲ್ಲಿದೆ. ರಾಯಚೂರು ಜಿಲ್ಲೆಯಲ್ಲಿ ಒಟ್ಟು 2,34,988 ರೈತರಿಗೆ 736.14 ಕೋಟಿ ರೂ. ಪಿಎಂ ಕಿಸಾನ್ ಯೋಜನೆಯಡಿ ಕೇಂದ್ರ ಸರ್ಕಾರವು ನೆರವು ನೀಡಿದೆ ಎಂದು ಕೃಷಿ ಜಂಟಿ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು. ರಾಯಚೂರು ಫಲವತ್ತಾದ ಮಣ್ಣು ಹೊಂದಿದ ಜಿಲ್ಲೆಯಾಗಿದ್ದು, ರೈತರಿಗೆ ನ್ಯಾಯ ಸಿಗುವ ದಿಶೆಯಲ್ಲಿ ಒಂದು ಜಿಲ್ಲೆ ಒಂದು ಉತ್ಪನ್ನ ಯೋಜನೆಯ ಅನುಷ್ಠಾನಕ್ಕೆ ಹೆಚ್ಚಿನ ಒತ್ತು ಕೊಡಬೇಕು ಎಂದು ಸಂಸದರು ಕೃಷಿ ಅಧಿಕಾರಿಗಳಿಗೆ ಸೂಚನೆ ನೀಡಿದರು. ಒಂದು ಜಿಲ್ಲೆ ಒಂದು ಉತ್ಪನ್ನ ಯೋಜನೆಯಡಿ ರಾಯಚೂರು ಜಿಲ್ಲೆಯಲ್ಲಿ ಒಣಮೆಣಸಿನಕಾಯಿ ಮಾರುಕಟ್ಟೆ ನಿರ್ಮಾಣಕ್ಕಾಗಿ ಆಯ್ಕೆ ಮಾಡಲಾಗಿರುತ್ತದೆ ಎಂದು ಕೃಷಿ ಅಧಿಕಾರಿಗಳು ಸಭೆಗೆ ವಿವರಿಸಿದರು.ರಾಯಚೂರು ಜಿಲ್ಲೆಯಲ್ಲಿ ರೈಲ್ವಿ ಲೈನ್ ನಿರ್ಮಾಣ ಯೋಜನೆಯ ಪ್ರಗತಿಯ ಬಗ್ಗೆ ಸಂಸದರು ಕೇಳಿದರು. ಮುನಿರಾಬಾದ್–ಮೆಹಬೂಬನಗರ ರೈಲ್ವೆ ಲೈನ್ ನಿರ್ಮಾಣದ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ಸಿಂಧನೂರ, ರಾಯಚೂರು, ಮಾನವಿ, ಸಿರವಾರ ತಾಲೂಕಿನ ಕೆಲವು ಹಳ್ಳಿಗಳಲ್ಲಿ ನಡೆದ ಭೂಸ್ವಾಧೀನ ಪ್ರದೇಶದ ವಿಸ್ತೀರ್ಣವನ್ನು ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾಗಿದೆ. ಕೆಲವು ಕಡೆಗಳಲ್ಲಿ ಹೊಸದಾಗಿ ಪ್ರಸ್ತಾವನೆ ಸಲ್ಲಿಸಿದ್ದು ಭೂಸ್ವಾಧೀನ ಪ್ರಕ್ರಿಯೆಗೆ ಕ್ರಮ ವಹಿಸಲಾಗುತ್ತದೆ. ಗದಗ–ವಾಡಿ ರೈಲ್ವೆಯೋಜನೆಗೆ ಸಂಬಂಧಿಸಿದಂತೆ ರಾಯಚೂರು ತಾಲೂಕಿನ ಕುರುಬದೊಡ್ಡಿ, ಚಂದ್ರಬಂಡ, ಸಿಂಗನೋಡಿ ಗ್ರಾಮಗಳಲ್ಲಿ ಹೊಸದಾಗಿ ಕೈಗಾರಿಕಾ ಪ್ರದೇಶ ಮತ್ತು ಸೌರ ವಿದ್ಯುತ್ ಸ್ಥಾಪನೆಗಾಗಿ ಭೂಸ್ವಾಧಿನಪಡಿಸಿಕೊಳ್ಳುವ ಪ್ರಕ್ರಿಯೆ ನಡೆಯುತ್ತಿದೆ ಎಂದು ಎಂದು ರೈಲ್ವೆ ಇಲಾಖೆಯ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.ಬೆಂಗಳೂರು, ಕಲಬುರಗಿ, ಸೊಲ್ಲಪುರ ಸೇರಿದಂತೆ ಪ್ರಮುಖ ವಾಣಿಜ್ಯ ನಗರಗಳ ಮೂಲಕ ದಕ್ಷಿಣದ ಚೆನ್ನೈದಿಂದ ಉತ್ತರದ ಹೊಸದಿಲ್ಲಿವರೆಗೆ ಪ್ರಮುಖ ರೈಲುಗಳು ರಾಯಚೂರು ಮಾರ್ಗವಾಗಿಯೇ ಸಂಚರಿಸುತ್ತವೆ. ಇದು ನಮ್ಮ ಭಾಗ್ಯ. ಈ ರೈಲ್ವೆ ಲೈನದಲ್ಲಿ ಪ್ರತಿ ದಿನ ಸಾಕಷ್ಟು ಗೂಡ್ಸ್ ರೈಲುಗಳು ಸಂಚರಿಸುತ್ತವೆ. ಕೃಷಿ, ತೋಟಗಾರಿಕೆ, ವಾಣಿಜ್ಯ ಉತ್ಪನ್ನಗಳ ಸರಬರಾಜಿಗೆ ಇದು ಸಾಕಷ್ಟು ಅನುಕೂಲವಾಗಲಿದೆ.

## ನರೇಗಾ ಯೋಜನೆಯಿಂದ ಉದ್ಯೋಗ ಸೃಷ್ಟಿ



• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ

ತಾಲೂಕಿನ ರಾಷ್ಟ್ರೀಯ ಹೆದ್ದಾರಿ ಬೈಪಾಸ್ ಸಮೀಪ ಕಾಂಗ್ರೆಸ್ ಪಕ್ಷದ ವತಿಯಿಂದ ಹಮ್ಮಿಕೊಂಡಿರುವ ನರೇಗಾ ಬಚಾವ್ ಆಂದೋಲನಕ್ಕೆ ನಗರದ ಬಾಪೂಜಿನಗರ ಬಡಾವಣೆಯಿಂದ ನೂರಾರು ಸಂಖ್ಯೆಯಲ್ಲಿ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸುವರು ಎಂದು ಕೆಪಿಸಿಸಿ ಮಾನವ ಹಕ್ಕು ಮಾಹಿತಿ ಹಕ್ಕು ಕಾನೂನು ವಿಭಾಗದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂಎಸ್ ಸಂದೀಪ್ ಚಕ್ರವರ್ತಿ ತಿಳಿಸಿದರು.

ಅವರು ಬಾಪೂಜಿನಗರದ ಶ್ರೀ ಮಹೇಶ್ವರಮ್ಮ ದೇವಾಲಯದಲ್ಲಿ ಇಂದು ಬೆಳಗ್ಗೆ ತಮ್ಮ ಬೆಂಬಲಿಗರೊಂದಿಗೆ ದೇವಿಗೆ ಪೂಜೆ ಸಲ್ಲಿಸಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ದೇಶದಲ್ಲಿನ ಜನತೆಗೆ ಮಹಾತ್ಮ ಗಾಂಧಿ ನರೇಗಾ ಯೋಜನೆಯಿಂದ ಉದ್ಯೋಗ ಸೃಷ್ಟಿ ಆಗುತ್ತಿದ್ದು ಈ ಯೋಜನೆಯ ಹೆಸರನ್ನು ಭಾರತೀಯ ಜನತಾ ಪಕ್ಷದವರು ವಿನಾಕಾರಣ ಬದಲಾವಣೆ ಮಾಡಿರುವುದು ಸರಿ ಅಲ್ಲ ಈ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಲು ರಾಜ್ಯ ಸರ್ಕಾರದ ಮುಖ್ಯಮಂತ್ರಿಗಳ ಹಾದಿಯಾಗಿ ಅನೇಕ ಮುಖಂಡರುಗಳು ಇಂದು ಚಿಕ್ಕಬಳ್ಳಾಪುರಕ್ಕೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ನಾವು ಸಹ ನಮ್ಮ ಬಡಾವಣೆಯಿಂದ ಅಪಾರ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸಲು ತೆರಳಿದ್ದೇವೆ ಎಂದರು.

ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ್ ಎಂ ಸಿ ಸುಧಾಕರ್ ಹಾಗೂ ಇಲ್ಲಿನ ಶಾಸಕ ಪ್ರದೀಪ್ ಈಶ್ವರ್ ಒಳಗೊಂಡಂತೆ ಜಿಲ್ಲಾ ಕಾಂಗ್ರೆಸ್ಸಿನ ಮುಖಂಡರುಗಳೆಲ್ಲರೂ ಕಳೆದ ಹಲವಾರು ದಿನಗಳಿಂದ ಈ ಸಮಾವೇಶದಲ್ಲಿ ಯಶಸ್ಸಿಗೆ ಶ್ರಮಿಸಿದ್ದಾರೆ ಎಂದರು. ಈ ಸಂದರ್ಭದಲ್ಲಿ ಮಾಜಿ ಶಾಸಕಿ ಅನ್ಸುಯಮ್ಮ, ಅಣ್ಣಮ್ಮ, ಮಾದೇವಪ್ಪ, ಬಾಪೂಜಿ ನಗರದ ನೂರಾರು ಸಂಖ್ಯೆಯಲ್ಲಿ ಎಂ ಎಸ್ ಸಂದೀಪ್ ಚಕ್ರವರ್ತಿ ರವರ ಬೆಂಬಲಿಗರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದು ಕಂಡುಬಂದಿತು.

## 457.59 ಲಕ್ಷ ಅನುದಾನದ ಬಜೆಟ್ ಮಂಡಿಸಿದ ಮೇಯರ್

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಪಾಲಿಕೆಯ ಬಜೆಟ್ ನಲ್ಲಿ ವಿವಿಧ ಮಹನೀಯರ ಜಯಂತಿಗಳಿಗೆ ಸಹಾಯಧನ ತಲಾ ರೂ 50,000/– ಗಳಂತೆ ಒಟ್ಟು ರೂ. 12.00 ಲಕ್ಷಗಳ ಅನುದಾನ, ಮಕ್ಕಳ ಪ್ರತಿಭಾ ಕಾರಂಜಿಗೆ ಸರ್ಕಾರಿ ಶಾಲೆಗಳಲ್ಲಿ ಆಯೋಜಿಸಲಾಗುವ ಪ್ರತಿಭಾ ಕಾರಂಜಿ ಕಾರ್ಯಕ್ರಮಗಳಿಗೆ ರೂ. 5.00 ಲಕ್ಷಗಳ ಅನುದಾನ, ಮಾಧ್ಯಮ ಪ್ರತಿನಿಧಿಗಳಿಗೆ ಯೋಗಕ್ಷೇಮ ನಿಧಿಯಡಿ ಪಾಲಿಕೆಯ ವ್ಯಾಪ್ತಿಯಡಿ ಸಮಾಜದ ಅಭಿವೃದ್ಧಿಗೆ ಶ್ರಮಿಸುತ್ತಿರುವ ಮಾಧ್ಯಮಗಳಲ್ಲಿ ಕೆಲಸ ಮಾಡುತ್ತಿರುವ ನೋಂದಾಯಿತ ಮಾಧ್ಯಮ ಪ್ರತಿನಿಧಿಗಳ ಆರೋಗ್ಯದ ಚಿಕಿತ್ಸೆಗೆ ಅಗತ್ಯ ನೆರವು ಕಲ್ಪಿಸುವುದಕ್ಕೆ ರೂ. 25.00 ಲಕ್ಷಗಳ ಅನುದಾನ, ಮಹಾನಗರ ಪಾಲಿಕೆಯ ಚುನಾಯಿತ ಸದಸ್ಯರ ಪ್ರದೇಶಾಭಿವೃದ್ಧಿ ನಿಧಿಯಡಿ, ಪಾಲಿಕೆಯ ವ್ಯಾಪ್ತಿಯಲ್ಲಿರುವ 39 ವಾರ್ಡ್‌ಗಳ ಸದಸ್ಯರಿಗೆ ಕುಡಿಯುವ ನೀರಿನ ತುರ್ತು ಸಂದರ್ಭಗಳಿಗೆ ರೂ. 3.00 ಲಕ್ಷಗಳಂತೆ ಒಟ್ಟು ರೂ. 20.00 ಲಕ್ಷಗಳ ಅನುದಾನ, ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ವಂತಿಕೆಯ ರೂಪದಲ್ಲಿ ಬಳ್ಳಾರಿ ನಗರದಲ್ಲಿ ಜರಗಲಿರುವ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಪಾಲಿಕೆ ವಂತಿಕೆಯಾಗಿ ರೂ. 100.00 ಲಕ್ಷಗಳ ಅನುದಾನ, ಬಳ್ಳಾರಿ ನಗರದಲ್ಲಿ ಜರಗಲಿರುವ ಉತ್ಸವ ಕಾರ್ಯಕ್ರಮಕ್ಕೆ ಪಾಲಿಕೆ ವಂತಿಕೆಯಾಗಿ ರೂ. 200.00 ಲಕ್ಷಗಳ ಅನುದಾನ, ಪಾಲಿಕೆಯ ನೌಕರರ ಸಂಘದ ಭವನ ನಿರ್ವಹಣೆಕ್ಕೆ ರೂ. 25.00 ಲಕ್ಷಗಳ ಅನುದಾನ, ಬೀದಿ ನಾಯಿಗಳ ಆಶ್ರಯತಾಣ ನಿರ್ಮಾಣಕ್ಕೆ ಪಾಲಿಕೆಯ ವ್ಯಾಪ್ತಿಯ ಆಲದಹಳ್ಳಿ

ಗ್ರಾಮದಲ್ಲಿ ಬೀದಿ ನಾಯಿಗಳ ಆಶ್ರಯ ತಾಣ ನಿರ್ಮಾಣಕ್ಕಾಗಿ 15ನೇ ಹಣಕಾಸು ಯೋಜನೆಯಡಿಯಲ್ಲಿ ರೂ. 155.00 ಲಕ್ಷಗಳ ಅನುದಾನ, ಬಿಡಾಡಿ ದನಗಳನ್ನು ಸ್ಥಳಾಂತರಿಸಲು ಮಹಾನಗರ ಪಾಲಿಕೆಯ ವಿವಿಧ ವಾರ್ಡ್‌ಗಳಲ್ಲಿರುವ ಬಿಡಾಡಿ ದನಗಳನ್ನು ಗೋಶಾಲೆಗಳಿಗೆ ಸ್ಥಳಾಂತರಿಸಲು ರೂ. 15.00 ಲಕ್ಷಗಳ ಅನುದಾನ,

ಉದ್ಯಾನವನಗಳ ನಿರ್ಮಾಣ ಮತ್ತು ಅಭಿವೃದ್ಧಿಗೆ ರೂ. 25.00 ಲಕ್ಷಗಳ ಅನುದಾನ,

ಯು.ಜಿ.ಡಿ ಬಳಕೆದಾರರ ಶುಲ್ಕದ ಸಂಗ್ರಹಣೆ ಹೆಚ್ಚಿಸಲು ಹಾಗೂ ಪಾಲಿಕೆಯ ಆದಾಯದ ಮೂಲವನ್ನು ದ್ವಿಗುಣಗೊಳಿಸಲು ಅಮೃತ ಮಿತ್ರ ಯೋಜನೆಯಡಿ ಸ್ವಸಹಾಯ ಗುರಿ ಆಧಾರದ ಮೇಲೆ ನೇಮಿಸಿಕೊಂಡು ರೂ. 358.00 ಲಕ್ಷಗಳ ಗುರಿಯನ್ನು ಮುಟ್ಟಲು ಯೋಜಿಸಲಾಗಿದೆ. ಡ್ರೋನ್‌ಗಳ ಮೂಲಕ ಆಸ್ತಿ ಸರ್ವೇ:



ಪ್ರಾಥಮಿಕ ಹಂತವಾಗಿ ಮಹಾನಗರ ಪಾಲಿಕೆಯ ವಲಯ–01ರಡಿ ಬರುವ ಎಲ್ಲಾ ಆಸ್ತಿಗಳ ನಿಖರವಾದ ಮಾಹಿತಿ ಪಡೆಯಲು, ಕೆ.ಎಂ.ಎಫ್–24 ತಂತ್ರಾಂಶದಲ್ಲಿ ಮಾಹಿತಿಯನ್ನು ಜಿ.ಪಿ.ಎಸ್ ಛಾಯಾ ಚಿತ್ರದೊಂದಿಗೆ ಇಂದೀಕರಿಸಲು, ಭೌತಿಕ ಆಸ್ತಿಗಳ ನಿಖರವಾದ ಮಾಹಿತಿ ಪಡೆಯಲು ಡ್ರೋನ್ ಸರ್ವೇ ಕೈಗೊಳ್ಳಲು ರೂ. 150.00 ಲಕ್ಷಗಳ ಅನುದಾನ,

ರಸ್ತೆ ಮತ್ತು ಚರಂಡಿಗಳ ಅಭಿವೃದ್ಧಿ ಕಾಮಗಾರಿಗಳ ನಿರ್ವಹಣೆ ಹಾಗೂ ದುರಸ್ಥಿಗಾಗಿ:

> ಮಹಾನಗರ ಪಾಲಿಕೆಯ ವ್ಯಾಪ್ತಿಯ ರಸ್ತೆಗಳನ್ನು ಗುಂಡಿ ಮುಕ್ತವಾಗಿರಿಸಲು ತುರ್ತಾಗಿ ಬಳಸಿಕೊಳ್ಳಲು ಒಟ್ಟು ರೂ.50.00 ಲಕ್ಷಗಳನ್ನು ಸಾಮಾನ್ಯ ನಿಧಿಯಲ್ಲಿ ಕಾಯ್ದಿರಿಸಲಾಗಿದೆ. ಈ ಯೋಜನೆಯಿಂದ ಬಳ್ಳಾರಿ ಜನತೆಗೆ ಗುಂಡಿ ಮುಕ್ತ ರಸ್ತೆಗಳನ್ನು ಅಭಿವೃದ್ಧಿಪಡಿಸುವುದರಿಂದ ಸುಗಮ ಸಂಚಾರಕ್ಕೆ ಅನುಕೂಲವಾಗುವುದು.

> ನಗರದಲ್ಲಿ ರಸ್ತೆ ನಿರ್ಮಾಣ, ಪಾದಚಾರಿ ರಸ್ತೆ ಅಭಿವೃದ್ಧಿಗಾಗಿ ರೂ. 75.00 ಲಕ್ಷಗಳ ಕಾಯ್ದಿರಿಸಲಾಗಿದೆ. ಮುಂದುವರೆದು, ಈಗಾಗಲೇ ಅನುಮೋದನೆಗೊಂಡ ರಸ್ತೆ ಕಾಮಗಾರಿಗಳನ್ನು ಸಹ ಆದ್ಯತೆಯಲ್ಲಿ ಮುಕ್ತಾಯಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

> ಮಹಾನಗರ ಪಾಲಿಕೆ ವ್ಯಾಪ್ತಿಯ ರಸ್ತೆ ಬದಿ ಚರಂಡಿಗಳ ದುರಸ್ಥಿ, ನಿರ್ವಹಣೆಗೆ ಮತ್ತು ಅಭಿವೃದ್ಧಿಪಡಿಸಲು ಒಟ್ಟು ರೂ. 50.00 ಲಕ್ಷಗಳನ್ನು ಕಾಯ್ದಿರಿಸಲಾಗಿದೆ.

ಪೌರಕಾರ್ಮಿಕರಿಗೆ ಉದ್ದೇಶಿಸಲಾಗಿರುವ ಕಾರ್ಯಕ್ರಮಗಳು:

> ಪಾಲಿಕೆಯ ಪೌರ ಕಾರ್ಮಿಕರು ಡ್ರೈವರ್ಸ್ ಮತ್ತು ಕ್ಲೀನರ್, ನೀರು ಸರಬರಾಜು ಹಾಗೂ ಗಲು ಆ ಸಿಬ್ಬಂದಿಗಳಿಗೆ ಬೆಳಗಿನ ಉಪಹಾರಕ್ಕಾಗಿ ರೂ.150.00 ಲಕ್ಷಗಳನ್ನು ಕಾಯ್ದಿರಿಸಲಾಗಿದೆ. ಇದರಿಂದ ಸ್ವಚ್ಛತೆ ಕಾರ್ಯದಲ್ಲಿ ತೊಡಗಿರುವ ಸಿಬ್ಬಂದಿಗೆ ಹೆಚ್ಚಿನ ಅನುಕೂಲವಾಗುತ್ತದೆ.

> ಪಾಲಿಕೆಯ ಪೌರ ಕಾರ್ಮಿಕರ ಸುರಕ್ಷಾ ಸಾಧನಗಳ, ಆರೋಗ್ಯತಪಾಸಣೆ ಇತರೆ ಸಲಕರಣೆಗಳಿಗಾಗಿ ರೂ. 80.00 ಲಕ್ಷಗಳನ್ನು ಕಾಯ್ದಿರಿಸಲಾಗಿದೆ. ಇದರಿಂದ ಪೌರ ಕಾರ್ಮಿಕರ ಆರೋಗ್ಯ ಭದ್ರತೆಯನ್ನು ಕಾಪಾಡಿಕೊಳ್ಳಲು ಸಹಕಾರಿಯಾಗಲಿದೆ.

> ರಜಾ ದಿನಗಳಲ್ಲಿಯೂ ಸಹ ಕಾರ್ಯನಿರ್ವಹಿಸುವಂತಹ ಪೌರ ಕಾರ್ಮಿಕರಿಗೆ 21 ದಿನಗಳ ವಿಶೇಷ ರಜಾ ವೇತನಕ್ಕೆ ಒಟ್ಟು ರೂ.150.00 ಲಕ್ಷಗಳನ್ನು ಕಾಯ್ದಿರಿಸಲಾಗಿದೆ. ಇದರಿಂದ ಪೌರ ಕಾರ್ಮಿಕರಿಗೆ ಹೆಚ್ಚುವರಿಯಾಗಿ ಆರ್ಥಿಕವಾಗಿ ಲಾಭವಾಗುತ್ತದೆ. ತುರ್ತು ಸಂಧರ್ಭಗಳಿಗಾಗಿ ಮೀಸಲಿಟ್ಟ ಅನುದಾನ:

> ಪಾಲಿಕೆಯ ವ್ಯಾಪ್ತಿಯಲ್ಲಿ ಯಾವುದೇ ಪ್ರಕೃತಿ ವಿಕೋಪಗಳಾದ ಅಗ್ನಿ ಮತ್ತು ಮಳೆ ಹಾನಿ ಸಂಧರ್ಭಗಳಲ್ಲಿ ಭಾಧಿತರಿಗೆ ಪರಿಹಾರವನ್ನು ನೀಡಲು ಒಟ್ಟು ರೂ. 25.00 ಲಕ್ಷಗಳನ್ನು ಕಾಯ್ದಿರಿಸಲಾಗಿದೆ. ಇದರಿಂದ ಭಾಧಿತರಿಗೆ ಪಾಲಿಕೆ ವತಿಯಿಂದ ತಕ್ಷಣ ಸಹಾಯವನ್ನು ನೀಡುವುದರಿಂದ ಭಾಧಿತರಿಗೆ ಸಹಕಾರಿಯಾಗಲಿದೆ.

> ಅತಿವೃಷ್ಟಿ ಸಂಧರ್ಭಗಳಲ್ಲಿ ತುರ್ತಾಗಿ ಕೈಗೊಳ್ಳಬಹುದಾದಂತಹ ಪಾದಚಾರಿ ರಸ್ತೆಗಳ ಹಾಗೂ ಇತರೆ ರಸ್ತೆಗಳ ದುರಸ್ಥಿಗಳ ಕಾಮಗಾರಿಗಳಿಗೆ ಒಟ್ಟು ರೂ. 25.00 ಲಕ್ಷಗಳನ್ನು ಕಾಯ್ದಿರಿಸಲಾಗಿದೆ.

ನೀರು ಸರಬರಾಜು ಮತ್ತು ಒಳಚರಂಡಿ ಸಂಪರ್ಕಗಳ ವ್ಯವಸ್ಥೆ:

ಪಾಲಿಕೆಯ ವತಿಯಿಂದ ನೀರು ಸರಬರಾಜಿಗೆ ಬಳಕೆ ಮಾಡುತ್ತಿರುವ ಓ.ಹೆಚ್.ಟಿ ಟ್ಯಾಂಕ್‌ಗಳ ನಿರ್ವಹಣೆಗಾಗಿ ರೂ. 25.00 ಲಕ್ಷಗಳನ್ನು ಕಾಯ್ದಿರಿಸಲಾಗಿದೆ. ಇದರಿಂದ ಸುಗಮ ನೀರು ಸರಬರಾಜನ್ನು ಅಡಚಣೆಯಿಲ್ಲದೇ ಮಾಡುವುದಕ್ಕೆ ಸಾಧ್ಯವಾಗಲಿದೆ.

> ಜನರಿಗೆ ಕುಡಿಯುವ ನೀರು ಸರಬರಾಜು ಮಾಡುವ ನೀರಿನ ಶುದ್ದೀಕರಣ ಹಾಗೂ ಗುಣಮಟ್ಟವನ್ನು ಕಾಯ್ದಿರಿಸಿಕೊಳ್ಳಲು ಅವಶ್ಯಕತೆಯಿರುವ ಕೆಮಿಕಲ್ಸ್‌ಗಾಗಿ ರೂ. 100.00 ಲಕ್ಷಗಳನ್ನು ಕಾಯ್ದಿರಿಸಲಾಗಿದೆ. ಇದರಿಂದ ನಗರದ ಜನತೆಗೆ ಗುಣಮಟ್ಟ ನೀರು ಸರಬರಾಜು ಮಾಡಲು ಸಾಧ್ಯವಾಗಲಿದೆ.

> ನಗರದಲ್ಲಿ ಇರುವ ಬೋರ್‌ವೆಲ್‌ಗಳನ್ನು ಪುನಶ್ಚತನ ಮಾಡಲು ಮತ್ತು ದುರಸ್ಥಿಗಾಗಿ ರೂ. 28.00 ಲಕ್ಷಗಳನ್ನು ಕಾಯ್ದಿರಿಸಲಾಗಿದೆ. ಈ ಯೋಜನೆಯಿಂದ ಮುಂದಿನ ದಿನಗಳಲ್ಲಿ ಜನತೆಗೆ ನೀರಿನ ಲಭ್ಯತೆಯನ್ನು ಹೆಚ್ಚಿಸಲು ಸಾಧ್ಯವಾಗಲಿದೆ.

ಕುಡಿಯುವ ನೀರಿನ ಸರಬರಾಜಿಗಾಗಿ ನೂತನ ಪೈಪ್‌ಲೈನ್ ಅಳವಡಿಕೆಗೆ ರೂ. 50.00 ಲಕ್ಷಗಳನ್ನು ನಿಗದಿಪಡಿಸಲಾಗಿದೆ ಹಾಗೂ ಪ್ರಸ್ತುತ ಇರುವ ಆರ್.ಓ ಪ್ಲಾಂಟ್‌ಗಳ ನಿರ್ವಹಣೆ ಮತ್ತು ದುರಸ್ಥಿಗಾಗಿ ರೂ. 20.00 ಲಕ್ಷಗಳನ್ನು ಕಾಯ್ದಿರಿಸಲಾಗಿದೆ. ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಪ್ರೋತ್ಸಾಹ: ಮಹಾನಗರ ಪಾಲಿಕೆಯ ಸಿಬ್ಬಂದಿ / ನೌಕರರ / ಚುನಾಯಿತ ಪ್ರತಿನಿಧಿಗಳಿಗೆ ಕ್ರೀಡೆ ಸಾಹಿತ್ಯ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳ ಪ್ರೋತ್ಸಾಹಕ್ಕಾಗಿ ರೂ.25.00 ಲಕ್ಷಗಳನ್ನು ಮೀಸಲಿಡಲಾಗಿದೆ. ಈ ಅನುದಾನದಡಿ ಬೇಸಿಗೆ ಕ್ರೀಡಾಕೂಟವನ್ನು ಆಯೋಜಿಸಲಾಗುವುದು. ಶೌಚಾಲಯಗಳ ನಿರ್ವಹಣೆ:

ನಗರದಲ್ಲಿ ಸಾರ್ವಜನಿಕರ ಬಳಕೆಗಾಗಿ ಇರುವ ಶೌಚಾಲಯಗಳ ದುರಸ್ಥಿ ಕೈಗೊಂಡು ಮತ್ತು ನಿರ್ವಹಣೆಗೆ ಸ್ವ–ಸಹಾಯ ಗುಂಪುಗಳೊಂದಿಗೆ ಒಡಂಬಡಿಕೆ ಮಾಡಿಕೊಂಡು ಸದಲ ನಿರ್ವಹಣೆಗೆ ಒಟ್ಟು ರೂ.50.00 ಲಕ್ಷಗಳ ಅನುದಾನವನ್ನು ಕಾಯ್ದಿರಿಸಲಾಗಿದೆ.

ಸ್ಮಶಾನಗಳ ಅಭಿವೃದ್ಧಿ:

ಸ್ಮಶಾನಗಳ ಅಭಿವೃದ್ಧಿಗಾಗಿ ಕಾಯ್ದಿರಿಸಿದ ಜಾಗದಲ್ಲಿ ಮೂಲ–ಸೌಕರ್ಯಗಳೊಂದಿಗೆ ಅಭಿವೃದ್ಧಿ ಪಡಿಸಲು ಪ್ರಸ್ತುತ ಸಾಲಿನಲ್ಲಿ ಸುಮಾರು ರೂ.100.00 ಲಕ್ಷಗಳ ಅನುದಾನವನ್ನು ಕಾಯ್ದಿರಿಸಲಾಗಿದೆ.

ಸಾರ್ವಜನಿಕರಿಗೆ ಅನುಕೂಲವಾಗುವಂತೆ ಶವಗಳ ಅಂತ್ಯಕ್ರಿಯೆ ಮಾಡಲು ಅನಿಲ ಚಿತಾಗಾರವನ್ನು ನಿರ್ಮಿಸಲು ಸುಮಾರು ರೂ. 400.00 ಲಕ್ಷಗಳ ಯು.ಐ.ಡಿ.ಎಫ್.ಸಿ. ಅನುದಾನದಲ್ಲಿ ಕಾಯ್ದಿರಿಸಲಾಗಿದೆ. ಪುನರ್ವಸತಿ ಕೇಂದ್ರಗಳ ನಿರ್ವಹಣೆ: 2025–26ನೇ ಸಾಲಿಗೆ ಪುನರ್ವಸತಿ ಕೇಂದ್ರಗಳ ನಿರ್ವಹಣೆಗೆ ರೂ. 38.00 ಲಕ್ಷಗಳ ಅನುದಾನವನ್ನು ಮೀಸಲಿಟ್ಟಿದೆ.

## ಮನರೇಗಾ: ಕಾಂಗ್ರೆಸ್ ಹೋರಾಟವನ್ನು ಬೆಂಬಲಿಸಿ: ಸಿಎಂ ಸಿದ್ದರಾಮಯ್ಯ ಕರೆ

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ

ಗ್ರಾಮೀಣ ಜನರ ಉದ್ಯೋಗದ ಹಕ್ಕನ್ನು ಕಸಿಯುತ್ತಿರುವ ವಿಬಿಜಿರಾಮ್ ಜಿ ಕಾಯ್ದೆಯನ್ನು ರದ್ದುಪಡಿಸಿ, ಮನರೇಗಾ ಮರುಸ್ಥಾಪಿಸುವವರೆಗೆ ದೇಶಾದ್ಯಂತ ಕಾಂಗ್ರೆಸ್ ನಡೆಸುತ್ತಿರುವ ಹೋರಾಟವನ್ನು ಬೆಂಬಲಿಸಬೇಕೆಂದು ರಾಜ್ಯದ ಜನರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು. ಅವರು ಇಂದು ಚಿಕ್ಕಬಳ್ಳಾಪುರದಲ್ಲಿ ನಡೆದ ನರೇಗಾ ಬಚಾವ್ ಆಂದೋಲನದಲ್ಲಿ ಭಾಗವಹಿಸಿ ಮಾತನಾಡಿದರು. ಇಂದು ದೇಶಾದ್ಯಂತ 'ಮನರೇಗಾ ವನ್ನು ಉಳಿ'ಅಭಿಯಾನ ಪ್ರಾರಂಭಿಸಲಾಗಿದೆ. ಚಳಿಗಾಲದ ಅಧಿವೇಶನ್ನದಲಿ ಕೇಂದ್ರ ಭಾಜಪ ಸರ್ಕಾರ ಮನರೇಗಾ ವನ್ನು ರದ್ದುಪಡಿಸಿ, ವಿಬಿಜಿರಾಮ್ ಜಿ ಕಾಯ್ದೆಯನ್ನು ಜಾರಿ ಮಾಡಿದೆ. ಮನರೇಗಾದ ರದ್ದು ಅಗತ್ಯವಿರಲಿಲ್ಲ. ಕೂಲಿಕಾರರು, ಆದಿವಾಸಿಗಳು, ಸಣ್ಣರೈತರಿಗೆ, ಮಹಿಳೆಯರಿಗೆ ಉದ್ಯೋಗದ ಅನುಕೂಲ ಕಲ್ಪಿಸುವ ದಿಸೆಯಲ್ಲಿ 2005 ರಲ್ಲಿ ಮನಮೋಹನ್ ಸಿಂಗ್ ಅವರು ಪ್ರಧಾನಿಯಾಗಿದ್ದಾಗ, ನಾಯಕಿ ಸೋನಿಯಾಗಾಂಧಿ ಅವರ ನೇತೃತ್ವದಲ್ಲಿ ಈ ಕಾಯ್ದೆ ಜಾರಿಯಾಯಿತು. ಇದೇ ಕಾಯ್ದೆಯಲ್ಲದೇ, ಶಿಕ್ಷಣ, ಆಹಾರ, ಮಾಹಿತಿ ಹಕ್ಕು ಸೇರಿದಂತೆ ಹಲವು ಜನಪರ ಕಾಯ್ದೆಗಳನ್ನು ಜಾರಿಗೆ ತಂದಿದ್ದರು. ಆದರೆ ಈ ಎಲ್ಲ ಜನಪರ ಕಾಯ್ದೆಗಳನ್ನು ದುರ್ಬಲಗೊಳಿಸುವ ಕೆಲಸವನ್ನು ಮೋದಿಯವರ ನೇತೃತ್ವದ ಸರ್ಕಾರ ಮಾಡುತ್ತಿದೆ ಎಂದರು.




ಮನರೇಗಾ ಅಡಿ 12.16 ಕೋಟಿ ಜನರಿಗೆ ಉದ್ಯೋಗ:

ಸದನದಲ್ಲಿ ಕೇವಲ 8 ಗಂಟೆಗಳ ಕಾಲ ಚರ್ಚೆ ಮಾಡಿದ ಕೇಂದ್ರ ಸರ್ಕಾರ, ನಂತರ ಹೊಸ ಕಾಯ್ದೆಯನ್ನು ಜಾರಿಗೆ ತಂದರು. ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಅಜೀವಿಕ ಮಿಷನ್ ಗ್ರಾಮೀಣ ಕಾಯ್ದೆ , 12.16 ಕೋಟಿ ಜನರು ಕೆಲಸ ಪಡೆಯುತ್ತಿದ್ದರು. ಇದರಲ್ಲಿ ಸುಮಾರು 53 % ಉದ್ಯೋಗ ಪಡೆ–ಯುತ್ತಿದ್ದರು. ಅಲ್ಲದೇ ಪರಿಶಿಷ್ಟ ಜಾತಿಯ 17% ಮತ್ತು ಪರಿಶಿಷ್ಟ ವರ್ಗದ 11 % ಜನರು ಉದ್ಯೋಗ ಪಡೆಯುತ್ತಿದ್ದರು. ಈ ಎಲ್ಲ ಜನರ ಹಕ್ಕುಗಳನ್ನು ಕಸಿದುಕೊಳ್ಳಲಾಗಿದೆ ಎಂದರು.

**ಗ್ರಾಮಸ್ವರಾಜ್ಯ ಪರಿಕಲ್ಪನೆಗೆ ಶಕ್ತಿ ತುಂಬಿದ್ದ ಮನರೇಗಾ**

ಮನರೇಗಾ ಕಾಯ್ದೆಗೆ ಗ್ರಾಮೀಣಾಭಿವೃದ್ಧಿಯ ಕನಸು ಕಂಡಿದ್ದ ಮಹಾತ್ಮಾಗಾಂಧಿಯವರ ಹೆಸರನ್ನು ಇಡಲಾಗಿತ್ತು. ಅವರ ಗ್ರಾಮ ಸ್ವರಾಜ್ಯದ ಕಲ್ಪನೆಗೆ ಮನರೇಗಾ ಶಕ್ತಿ ತುಂಬಿತ್ತು. 100 ದಿನಗಳ ಉದ್ಯೋಗದ ಖಾತ್ರಿ ನೀಡುತ್ತಿದ್ದ ಮನರೇಗಾ ಕಾಯ್ದೆಯಡಿ, ಕೂಲಿಕಾರರು ತಮ್ಮ ಸ್ಥಳೀಯ ಮಟ್ಟದಲ್ಲಿಯೇ ಕೆಲಸ ಮಾಡಬಹುದಿತ್ತು. ಗ್ರಾಮಪಂಚಾಯತಿ ಮತ್ತು ಗ್ರಾಮಸಭೆಗಳು ನಿರ್ಧರಿಸುವ ಅಧಿಕಾರವಿತ್ತು. ಆದರೀಗ ಈ ನಿರ್ಧಾರವನ್ನು ಕೇಂದ್ರ ಸರ್ಕಾರವೇ ಕೈಗೊಳ್ಳಲಿದೆ. ಕೇಂದ್ರದ ಅನುದಾನ, ಅನುಮತಿ ಇಲ್ಲದೇ , ಇಲ್ಲಿನ ಗ್ರಾಮ ಪಂಚಾಯತಿಯಲ್ಲಿ ಕೆಲಸವಾಗಲು ಸಾಧ್ಯ. ಆದ್ದರಿಂದ ಮನರೇಗಾ ವನ್ನು ಮುಂದುವರೆಸಬೇಕೆಂಬುದು ಕಾಂಗ್ರೆಸ್ ಸರ್ಕಾರದ ಒತ್ತಾಯವಾಗಿದೆ. ಮನರೇಗಾದಲ್ಲಿ 100 ದಿನ ಭತ್ಯೆಯನ್ನು ತಪ್ಪದೇ ಕೊಡಲಾಗುತ್ತಿತ್ತು. ಹೊಸ ಕಾಯ್ದೆಯಂತೆ ಕೇಂದ್ರ 60% ಅನುದಾನ ಮತ್ತು ರಾಜ್ಯಗಳು 40% ಅನುದಾನ ಕೊಡಬೇಕಾಗಿದೆ. ರಾಜ್ಯದ ಹಿತವನ್ನು ಕಾಪಾಡುವಲ್ಲಿ ಕೇಂದ್ರ ಸೋತಿದೆ. ಅದ್ದರಿಂದ ವಿಬಿಜಿರಾಮ್ ಜಿ ರದ್ದುಪಡಿಸಿ, ಮನರೇಗಾ ವನ್ನು ಮರುಸ್ಥಾಪಿಸಲು ದೇಶಾದ್ಯಂತ ಕಾಂಗ್ರೆಸ್ ಪಕ್ಷ ಹೋರಾಟ ಮಾಡುತ್ತಿದೆ ಎಂದರು.

**ಬೇಡಿಕೆ ಈಡೇರುವವರೆಗೂ ಹೋರಾಟ**

ನಮ್ಮ ಬೇಡಿಕೆಗಳು: ವಿಬಿಜಿರಾಮ್ ಜಿ ಯೋಜನೆಯನ್ನು ಸಂಪೂರ್ಣವಾಗಿ ರದ್ದುಪಡಿಸಿ, ಮನರೇಗಾ ವನ್ನು ಮರು ಜಾರಿಗೊಳಿಸಬೇಕು. ಜನರ ಉದ್ಯೋಗದ ಹಕ್ಕನ್ನು ಮರುಸ್ಥಾಪಿಸಬೇಕು. ಪಂಚಾಯತ್ ಸ್ವಯಂ ಆಡಳಿತದ ಹಕ್ಕು ಮರುಸ್ಥಾಪನೆ, ದಿನಕ್ಕೆ 400 ರೂ.ಗಳ ಕನಿಷ್ಠ ವೇತನವನ್ನು ದೇಶಾದ್ಯಂತ ನೀಡಬೇಕು. ಈ ಬೇಡಿಕೆಗಳು ಈಡೇರುವವರೆಗೆ ನಮ್ಮ ಆಂದೋಲನ ನಿಲ್ಲುವುದಿಲ್ಲ ಎಂದರು. ರೈತವಿರೋಧಿ ಕಾಯ್ದೆಗಳನ್ನು ಹೋರಾಟದ ಫಲವಾಗಿ ರದ್ದುಗೊಳಿಸಲಾಯಿತು. ಅದೇ ರೀತಿಯಲ್ಲಿ ಈ ಹೋರಾಟ ನಿಲ್ಲುವುದಿಲ್ಲ. ಈ ಹೋರಾಟಕ್ಕೆ ರಾಜ್ಯದ ಜನರೆಲ್ಲರೂ ನಮ್ಮ ಜೊತೆಯಾಗಬೇಕು. ಹಳ್ಳಿಗಾಡಿನ ಜನರಿಗೆ ಅನುಕೂಲ ಕಲ್ಪಿಸುವ ಮನರೇಗಾ ಯೋಜನೆಯ ಮರುಸ್ಥಾಪಿಸುವ ಕಾಂಗ್ರೆಸ್ ನ ಸಾರ್ಥಕ ಉದ್ದೇಶಕ್ಕೆ ಜನರು ಬೆಂಬಲಿಸಬೇಕು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ ಮನರೇಗಾ ಉಳಿಸಿ, ದೇಶ ಉಳಿಸಿ ಎಂಬ ಘೋಷಣೆಯೊಂದಿಗೆ ಗ್ರಾಮ, ರೈತ ಮತ್ತು ಕಾರ್ಮಿಕರನ್ನು ಉಳಿಸುವ ನಿಟ್ಟಿನಲ್ಲಿ ಹಾಗೂ ಮಹಾತ್ಮ ಗಾಂಧಿ ಅವರ ಹೆಸರಿನ ಗೌರವ ಕಾಪಾಡುವ ಉದ್ದೇಶದಿಂದ ಕಾಂಗ್ರೆಸ್ ವತಿಯಿಂದ ಬೃಹತ್ ಮನರೇಗಾ ಬಚಾವ್ ಆಂದೋಲನವನ್ನು ಏರ್ಪಡಿಸಲಾಗಿದೆ ಮನರೇಗಾ ಕ್ರಾಂತಿ–ಕಾರಿ ಕಾರ್ಯಕ್ರಮವಾಗಿದ್ದು, ಹಸಿದ ಹೊಟ್ಟೆಗೆ ಕೆಲಸ ನೀಡಿ ಬದುಕು ಕಟ್ಟಿಕೊಡುವ ಮಹತ್ವದ ಯೋಜನೆ ಆದರೆ ಕೇಂದ್ರ ಬಿಜೆಪಿ ಸರಕಾರ ಮನರೇಗಾ ಯೋಜನೆ ಬದಲಾಗಿ ವಿಬಿಜಿ ರಾಮ್‌ಜಿ ಕಾಯ್ದೆ ತಂದಿರುವುದು ಬಡವರ ಉದ್ಯೋಗ ಹಕ್ಕು ಕಸೆಯುವಂತೆ ಎಂದರು. ದೀಪ ಆರಿಸುವ ಮುನ್ನ ಜೋರಾಗಿ ಹೊತ್ತಿ ಉರಿಯುವಂತೆ ಬಿಜೆಪಿ ತನ್ನ ಅಂತಿಮ ದಿನಗಳನ್ನು ಎದುರಿಸುತ್ತಿದೆ ಎಂದು ಟೀಕಿಸಿದ ಅವರು ಒಂದು ಕಡೆ ಬಿಜೆಪಿ ಮಹಾತ್ಮ ಗಾಂಧಿ ಅವರ ಹೆಸರನ್ನು ತೆಗೆದುಹಾಕಲು ಪ್ರಯತ್ನಿಸುತ್ತಿದ್ದು,

ಕಾಂಗ್ರೆಸ್ ಪಕ್ಷವು ಅವರ ಹೆಸರನ್ನು ಶಾಶ್ವತವಾಗಿ ಉಳಿಸುವ ನಿಟ್ಟಿನಲ್ಲಿ ಪ್ರತಿ ಗ್ರಾಮ ಪಂಚಾಯಿತಿಗೂ ಮಹಾತ್ಮ ಗಾಂಧಿ ಅವರ ಹೆಸರನ್ನು ಸೇರಿಸುವ ತೀರ್ಮಾನ ಕೈಗೊಂಡಿದೆ ಎಂದು ಹೇಳಿದರು. ಹೊಸ ವಿಬಿಜಿ ರಾಮ್‌ಜಿ ಕಾಯ್ದೆ ಕುರಿತು ಮಾತನಾಡಿದ ಅವರು, ರಾಜ್ಯ ಸರಕಾರಗಳು 40 ಶೇಕಡಾ ಪಾಲು ನೀಡಬೇಕು ಎಂಬ ನಿಯಮವಿದೆ ಬಿಜೆಪಿ ಆಡಳಿತವಿರುವ ಕೆಲವು ರಾಜ್ಯಗಳಲ್ಲಿ ಇದು ಸಾಧ್ಯವಾಗುವುದಿಲ್ಲ ಎಂದು ಹೇಳಲಾಗುತ್ತಿದೆ ಎಂದರು. ಮನರೇಗಾ ಯೋಜನೆಯನ್ನು ಮರುಸ್ಥಾಪಿಸಲು ಕಾಂಗ್ರೆಸ್ ನಿರಂತರವಾಗಿ ಹೋರಾಟ ಮಾಡಲಿದೆ ಗ್ರಾಮೀಣ ಭಾಗದ ಬಡಜನರ ಉದ್ಯೋಗ ಕಿತ್ತುಕೊಳ್ಳಲು ಅವಕಾಶ ನೀಡುವುದಿಲ್ಲ ಎಂದು ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದರು.

ಎಐಸಿಸಿ ಕಾರ್ಯದರ್ಶಿ ಅಭಿಷೇಕ್ ದತ್, ಸಚಿವರಾದ ಕೃಷ್ಣ ಬೈರೇಗೌಡ, ಡಾ.ಎಂ.ಸಿ ಸುಧಾಕರ್, ಕೆ.ಹೆಚ್ ಮುನಿಯಪ್ಪ, ಬೈರತಿ ಸುರೇಶ್, ಬೋಸರಾಜು, ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಮಾಜಿ ಸಚಿವರಾದ ತನ್ವೀರ್ ಸೇತ್, ಶಿವಶಂಕರ ರೆಡ್ಡಿ, ವಿನಯ್ ಕುಮಾರ್, ವಿಧಾನ ಪರಿಷತ್ ಸದಸ್ಯ ಸಲೀಂ ಅಹಮದ್, ಅನಿಲ್ ಕುಮಾರ್, ಕೆ ಪಿ ಸಿ ಸಿ ಉಪಾಧ್ಯಕ್ಷ ವಿ.ಸುದರ್ಶನ್, ಪ್ರದೇಶ ಕಾಂಗ್ರೆಸ್ ಮುಖ್ಯಸ್ಥರಾದ ಚಂದ್ರಶೇಖರ್, ಎಐಸಿಸಿ ಸದಸ್ಯ ರಕ್ಷಾ ರಾಮಯ್ಯ, ಶಾಸಕರಾದ ಪ್ರದೀಪ್ ಈಶ್ವರ್, ಪುಟ್ಟಸ್ವಾಮಿಗೌಡ, ರೂಪಕಲಾ ಶಶಿಧರ್, ಕೊತ್ತೂರು ಮಂಜುನಾಥ್, ನಂಜೇಗೌಡ, ನಾರಾಯಣಸ್ವಾಮಿ, ಶರತ್ ಬಚ್ಚೇಗೌಡ, ಯುವ ಕಾಂಗ್ರೆಸ್ ಮಾಜಿ ರಾಜ್ಯಾಧ್ಯಕ್ಷ ಶ್ರೀನಿವಾಸ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕೇಶವ ರೆಡ್ಡಿ, ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕುಬೇರ್ ಅಚ್ಚು, ಮಾಜಿ ಶಾಸಕ ವೆಂಕಟರೋಣಪ್ಪ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಗಂಗ–ರೇ ಕಾಲವೇ ನಾರಾಯಣಸ್ವಾಮಿ ಇತರರು ಉಪಸ್ಥಿತರಿದ್ದರು.

## ರಸ್ತೆ ಮೇಲೆ ಕಲ್ಲು ಮರಳು ಜನಸಾಮಾನ್ಯರಿಗೆ ಉರುಳು



• ಸುರೇಶ ಕೆ. ವಿ, ಮಲ್ಲಮ್ಮ ನುಡಿ ವಾರ್ತೆ ಮುದಗಲ್

ರಾಯಚೂರು ಬಾಗಲಕೋಟ ರಾಜ್ಯ ಹೆದ್ದಾರಿಯ ಮುದಗಲ್ ಪಟ್ಟಣದಲ್ಲಿ ರಸ್ತೆ ಮೇಲೆ ಕಲ್ಲು ಮರಳು ಹಾಕಿರುವದರಿಂದ ವಾಹನ ಸವಾರಿಗೆ ಸಂಚಾರ ಮಾಡಲು ತುಂಬಾ ತೊಂದರೆಯಾಗಿದೆ.

ಲೋಕೋಪಯೋಗಿ ಇಲಾಖೆ ರಾಯಚೂರು ಉಪ ವಿಭಾಗ ಲಿಂಗಸುಗೂರು ವತಿಯಿಂದ ಸುಮಾರು 35ಲಕ್ಷ ರೂಗಳ ಮೊತ್ತದಲ್ಲಿ ಐತಿಹಾಸಿಕ ಮುದಗಲ್ ಕೋಟೆಯ ಮುಂಭಾಗದಲ್ಲಿ ತಡೆಗೋಡೆ ನಿರ್ಮಾಣ ಕಾಮಗಾರಿ ಮಾಡುವ ಸಲುವಾಗಿ ರಾಯಚೂರು ಬಾಗಲಕೋಟ ರಾಜ್ಯ ಹೆದ್ದಾರಿಯ ರಸ್ತೆ ಮೇಲೆ ಕಲ್ಲು ಮರಳು ಹಾಕಿದ್ದಾರೆ ಆದರೆ ಈ ರಸ್ತೆಯಲ್ಲಿ ಪ್ರತಿನಿತ್ಯ ಸಾವಿರಾರು ವಾಹನಗಳು ಸಂಚಾರ ಮಾಡುತ್ತಿರುವ ಹಿನ್ನಲೆ ರಸ್ತೆ ಚಿಕ್ಕದಾಗಿರುವುದರಿಂದ ಸಂಚಾರ–ಕ್ಕೆ ಅಡಚಣೆಯಾಗಿದೆಯೆಂದು ಆರೋಪ ಕೇಳಿಬರುತ್ತದೆ.

ಈ ಚಿಕ್ಕ ರಸ್ತೆಯಲ್ಲಿ ವಾಹನ ಸವಾರರಿಗೆ ಯಾವುದಾದರೂ ಜೀವಹಾನಿಯಾಗುವ ಮುಂಚೆ ಸಂಬಂಧಪಟ್ಟ ಪಿಡಬ್ಲ್ಯೂಡಿ ಅಧಿಕಾರಿಗಳು ಕಲ್ಲು ಮರಮ ತೆರವುಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಒತ್ತಾಯಿಸಿದ್ದಾರೆ.

ಈ ತಡೆಗೋಡೆ ಕಾಮಗಾರಿ ನಡೆಯುವ ಸ್ಥಳಕ್ಕೆ ಲಿಂಗಸುಗೂರು ಶಾಸಕ ಮಾನಪ್ಪ, ಡಿ, ವಜ್ಜಲ್ ಭೇಟಿ ನೀಡಿ ಪರಿಶೀಲನೆ ಮಾಡಿ ಸರ್ಕಾರದ ನಿಯಮಾನುಸಾರ ಗುತ್ತಿಗೆದಾರ ಕಾಮಗಾರಿ ಮಾಡಿಲ್ಲ ಈ ಕೂಡಲೆ ಬಿಲ್ ತಡೆಹಿಡಿಯಬೇಕೆಂದು ಸೂಚನೆ ನೀಡಿ ಪಿಡಬ್ಲ್ಯೂಡಿ ಅಧಿಕಾರಿಯನ್ನು ತರಾಟೆಗೆ ತೆಗೆದುಕೊಂಡಿದ್ದರು ಹಾಗೂ ಸಾರ್ವಜನಿಕರಿಗೆ ಅನೂಕೂಲವಾಗುವಂತೆ ತಡೆಗೋಡೆ ನಿರ್ಮಿಸಬೇಕು ಎಂದು ಹಜರತ್ ಹುಸೇನಿ ಆಲಂ ಆಶುರ್ ಖಾನಾ (ಸುನ್ನಿ) ಸಮಿತಿ ಪದಾಧಿಕಾರಿಗಳು ಒತ್ತಾಯ ಕೂಡ ಮಾಡಿದ್ದರು ಇದರಿಂದ ಕಾಮಗಾರಿ ಅರ್ಧಕ್ಕೆ ನಿಂತಿದೆ " ರಸ್ತೆಯ ಮೇಲೆ ಇರುವ ಮರಳು ಹಾಗೂ ಕಲ್ಲು ತೆರವುಗೊಳಿಸಿ ಸಂಚಾರ–ಕ್ಕೆ ಅನುವು ಮಾಡಿಕೊಡಬೇಕು – ಬಸವರಾಜ ಬಂಕದಮನಿ ಅಧ್ಯಕ್ಷರು ಕರ್ನಾಟಕ ದಲಿತ ಸಂಘರ್ಷ ಸಮಿತಿ ಮುದಗಲ್ ಘಟಕ

ಇಲಾಖೆಯ ಮೇಲಾಧಿಕಾರಿಗಳಿಗೆ ಮಾಹಿತಿ ನೀಡಲಾಗಿದೆ ಶಾಸಕರ ಜೊತೆ ಚರ್ಚೆ ಮಾಡಿ ಸಮಸ್ಯೆ ಬಗೆಹರಿಸಲಾಗುವುದು –ಗಜಾನನ ಇಂಜಿನಿಯರ್ ಪಿಡಬ್ಲ್ಯೂಡಿ ಇಲಾಖೆ

## ರವಿಶಂಕರ್ ಗುರೂಜಿ ಭೇಟಿ: ಪಟ್ಟದ್ದೇವರ ಅಮೃತ ಮಹೋತ್ಸವಕ್ಕೆ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಪಟ್ಟಣದಲ್ಲಿ ಮುಂದಿನ ತಿಂಗಳು ಏಪ್ರಿಲ್‌ನಲ್ಲಿ ನಡೆಯಲಿರುವ ವಚನ ಜಾತ್ರೆ–2026 ಮತ್ತು ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಸಮಾರಂಭಕ್ಕೆ ಆರ್ಟ್ ಆಫ್ ಲಿವಿಂಗ್ ಫೌಂಡೇಶನ್ ಸಂಸ್ಥಾಪಕ ರವಿಶಂಕರ್ ಗುರೂಜಿ ಅವರನ್ನು ಆಹ್ವಾನಿಸಲಾಗಿದೆ.

ಬೆಂಗಳೂರಿನ ಕನಕಪುರ ರಸ್ತೆಯ ಆರ್ಟ್ ಆಫ್ ಲಿವಿಂಗ್ ಸಂಸ್ಥೆಗೆ ಈಚೆಗೆ ಭಾಲ್ಕಿಯ ಹಿರೇಮಠ ಸಂಸ್ಥಾನದ

ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಭೇಟಿ ನೀಡಿ ರವಿಶಂಕರ್ ಗುರೂಜಿ ಅವರನ್ನು ಭೇಟಿಯಾಗಿ ಆಹ್ವಾನ ಪತ್ರಿಕೆ ನೀಡಿ ಗಡಿ ಭಾಗದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಶೈಕ್ಷಣಿಕ,

ಸಾಮಾಜಿಕ, ಧಾರ್ಮಿಕ ಮತ್ತು ಅಧ್ಯಾತ್ಮಿಕ ಕ್ಷೇತ್ರದಲ್ಲಿ ಕಳೆದ ನಾಲ್ಕೈದು ದಶಕಗಳಿಂದ ಯಾವುದೇ ಫಲಾಪೇಕ್ಷೆ ಇಲ್ಲದೇ ದಣಿವರಿಯದ ಸೇವೆ ಸಲ್ಲಿಸುತ್ತಿದ್ದಾರೆ.



> “ನಾಡಿನ ಪ್ರಗತಿಯಲ್ಲಿ ಮಠ ಮಾನ್ಯಗಳ ಕೊಡುಗೆ ದೊಡ್ಡದಿದೆ. ಅದರಲ್ಲೂ ಗಡಿಭಾಗದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಸಲ್ಲಿಸುತ್ತಿರುವ ಸೇವೆ ಅನುಪಮವಾಗಿದೆ. ಎಲ್ಲ ಭಕ್ತರು ಸೇರಿ ಅಂತಹ ಪೂಜ್ಯರ ಅಮೃತ ಮಹೋತ್ಸವ ಸಮಾರಂಭ ಆಚರಿಸುತ್ತಿರುವುದು ಸಂತಸದ ಸಂಗತಿ.
>
> **ರವಿಶಂಕರ್ ಗುರೂಜಿ ಸಂಸ್ಥಾಪಕರು ಆರ್ಟ್ ಆಫ್ ಲಿವಿಂಗ್ ಫೌಂಡೇಶನ್ ಬೆಂಗಳೂರು**

ಅಂತಹ ಪೂಜ್ಯರು 75 ವಸಂತಗಳನ್ನು ಪೂರೈಸಿದ್ದು, ಅವರ ಅಮೃತ ಮಹೋತ್ಸವ ಆಚರಿಸಲು ಅಸಂಖ್ಯಾತ ಭಕ್ತವಲಯ ನಿರ್ಧರಿಸಿದೆ.

ಹಾಗಾಗಿ ತಾವುಗಳು ಕೂಡ ಪೂಜ್ಯರ ಈ ಐತಿಹಾಸಿಕ ಸಮಾರಂಭದಲ್ಲಿ ಭಾಗವಹಿಸಿ ನಮ್ಮ ಭಾಗದ ಭಕ್ತರನ್ನು ಆಶೀರ್ವದಿಸುವಂತೆ ಕೋರಿದರು. ಈ ಸಂದರ್ಭದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ, ಪ್ರಥಮ ದರ್ಜೆ ಗುತ್ತಿಗೆದಾರ ಸಂಗಮೇಶ ಹುಣಜೆ ಮದಕಟ್ಟಿ ಸೇರಿದಂತೆ ಹಲವರು ಇದ್ದರು.

# ರಸ್ತೆ ಕಾಮಗಾರಿಗೆ ಭೂಮಿ ಪೂಜೆ



• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಜಿಲ್ಲೆಯ ಹುನಗುಂದ ತಾಲೂಕಿನ ಬಿಸಲದಿನ್ನಿ ಗ್ರಾಮದಲ್ಲಿ ಮುಖ್ಯಮಂತ್ರಿ ಮೂಲಸೌಕರ್ಯ ಅಭಿವೃದ್ಧಿ (ಸಿ.ಎಡಿಪಿ) ಯೋಜನೆ ಅಡಿಯಲ್ಲಿ 80 ಲಕ್ಷ ರೂ. ಗಳ ಅನುದಾನದಲ್ಲಿ ಗ್ರಾಮದ ಮುಖ್ಯ ರಸ್ತೆಯಿಂದ ತಿಪ್ಪವ್ವ ಭರಮಗೌಡರ ಹೊಲದವರೆಗಿನ ಸಿಸಿ ರಸ್ತೆ ಕಾಮಗಾರಿಗೆ ಶಾಸಕ ವಿಜಯಾನಂದ ಕಾಶಪ್ಪನವರ ಭೂಮಿ ಪೂಜೆ ನೆರವೇರಿಸಿದರು.

ಈ ವೇಳೆ ಮಾತನಾಡಿದ ಅವರು, ಸರ್ಕಾರ ಗ್ರಾಮೀಣ ಪ್ರದೇಶದ ರಸ್ತೆ ಸುಧಾರಣೆಗೆ ಹೆಚ್ಚಿನ ಆದ್ಯತೆಯನ್ನು ನೀಡಿದ್ದು ರೈತರು ತಮ್ಮ ಹೊಲಗಳಿಗೆ ಸುರಳಿತವಾಗಿ ಹೋಗಿ ಬರಲು ಅನುಕೂಲವಾಗಲಿ ಎಂದು ಈ ಸಿಸಿ ರಸ್ತೆಯನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಎಂದರು. ಕಾಮಗಾರಿ ನಿಗದಿತ ಅವಧಿಯಲ್ಲಿ ಮುಗಿಯಬೇಕು, ಕೆಲಸ ಉತ್ತಮ ಗುಣಮಟ್ಟದಿಂದ ಕೂಡಿರಬೇಕು ಎಂದು ಗುತ್ತಿಗೆದಾರರಿಗೆ ಶಾಸಕ ಕಾಶಪ್ಪನವರ ಸೂಚಿಸಿದರು. ಈ ಸಂದರ್ಭದಲ್ಲಿ ಗಂಗಣ್ಣ ಬಾಗೇವಾಡಿ, ಭೀಮಪ್ಪ ಯರಝುರಿ, ಮಹಾಂತೇಶ ಲಗ್ಮನ್ನವರ, ಚಂದ್ರಾಮಪ್ಪಗೌಡ ಭರಮಗೌಡರ, ಶ್ರೀಕಾಂತ ಹಿರೇಮಠ, ಎಸ್.ಎಸ್ ಪುರೋಹಿತ, ಮುತ್ತಣ್ಣ ಬರಮಗೌಡ, ಮಾನನಗೌಡ ಪಾಟೀಲ, ಸಂಗಪ್ಪ ಶಿರೂರ, ದ್ಯಾಮಣ್ಣ ವಡ್ಡರ, ಪಂಚಾಯತ್ ರಾಜ್ ಇಲಾಖೆಯ ಎಇಇ ಕೆ.ಡಿ.ನಾಯಕ, ಜೆಇ ಸೌಮ್ಯ ಭಾವಿಕಟ್ಟಿ, ಪಿಡಿಓ ಹನಮಂತ ವಕ್ರ, ಗುತ್ತಿಗೆದಾರ ಶಂಕರ್ ಜಗ್ಗಲ ಸೇರಿದಂತೆ ಅನೇಕರು ಇದ್ದರು.

# ಸಾಧನೆಗೆ ಪರಿಶ್ರಮ ಅಗತ್ಯ: ಅಂಗಡಿ





• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳ ಸಾಧನೆಗೆ ಪರಿಶ್ರಮ ಅಗತ್ಯ ಎಂದು ಕೃಷಿ ಅಧಿಕಾರಿ ಡಾ. ಸಿದ್ದಪ್ಪ ಅಂಗಡಿ ಹೇಳಿದರು.

ತಾಲ್ಲೂಕಿನ ಕಲಾದಗಿ ಗ್ರಾಮದ ಸರ್ಕಾರಿ ಕನ್ನಡ ಗಂಡು ಮಕ್ಕಳ ಹಿರಿಯ ಪ್ರಾಥಮಿಕ ಶಾಲೆಯ 7ನೇ ವರ್ಗದ ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭ ಹಾಗೂ ವಾರ್ಷಿಕ ಸ್ನೇಹ ಸಮ್ಮೇಳನ ಕಾರ್ಯಕ್ರಮದಲ್ಲಿ ಮಾತನಾಡಿದ ಆವರು, ಜನ್ಮ ನೀಡಿದ ತಂದೆ– ತಾಯಿ, ವಿದ್ಯೆ ನೀಡಿದ ಶಿಕ್ಷಕರನ್ನು ಎಂದಿಗೂ ಮರೆಯಬಾರದು ಎಂದರು. ಬಿ.ಬಿ.ಮೆಳ್ಳಿಗೇರಿ ಮಾತನಾಡಿ, ಇಂದಿನ ಶ್ರಮ ನಾಳೆಯ ಸುಂದರ ಭವಿಷ್ಯ ರೂಪಿಸುತ್ತದೆ. ನಾನು ಸಾಧಿಸುತ್ತೇನೆ ಎಂಬ ದೃಢ ನಿರ್ಧಾರ ನಿಮ್ಮದಾಗಿರಬೇಕು ಎಂದರು. ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸಾಂಸ್ಕೃತಿಕ ಮನೋರಂಜನ ಕಾರ್ಯಕ್ರಮಗಳು ನಡೆದವು. ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಖಾತುನಬಿ ರೋಣ, ಉಪಾಧ್ಯಕ್ಷ ಫಕೀರಪ್ಪ ಮಾದರ, ಶಾಲಾ ಮೇಲುಸ್ತುವಾರಿ ಸಮಿತಿ ಅಧ್ಯಕ್ಷ ಸುಭಾಷ್ ದುರ್ವೆ, ಉಪಾಧ್ಯಕ್ಷೆ ಲಕ್ಷ್ಮಿ ಮಾದರ, ಶಿಕ್ಷಣ ಸಂಯೋಜಕ ಬಿ.ಎನ್. ಲಚ್ಚಾನ, ಮುಖ್ಯ ಶಿಕ್ಷಕ ಶರಣಪ್ಪ ಬೇವೂರ, ವೈ.ಎಚ್. ವಗ್ಯಾನವರ, ಮುಖಂಡರಾದ ಸಂಗಪ್ಪ ಭಬ್ಬಿ, ಮಲ್ಲಪ್ಪ ಜಮಖಂಡಿ, ದಯಾನಂದ ವಾಘ, ನಾರಾಯಣ ಭೋಜಗಾರ, ಹನಮಂತ ತಳವಾರ, ಶಾಲಾ ಮುಖ್ಯ ಶಿಕ್ಷಕ ಸಿ.ಎಲ್. ಹೂಗಾರ ಇದ್ದರು. ಸಹ ಶಿಕ್ಷಕಿ ಎನ್. ಬಿ.ಮೈಸೂರ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

# ಬಸವಣ್ಣನವರ ಪರಿಕಲ್ಪನೆ ಎತ್ತಿ ಹಿಡಿದವರು ಬೀದರ್ ಮಂದಿ: ಬಸವರಾಜ ಹೊರಟ್ಟಿ



• ಮಲ್ಲಮ್ಮ ನುಡಿ ವಾರ್ತೆ ಬೀದರ್

ಬಸವಣ್ಣನವರ ಪರಿಕಲ್ಪನೆ ಎತ್ತಿ ಹಿಡಿದವರು ಕೇವಲ ಬಿದರ್ ಜನರು ಮಾತ್ರ. ಇವರ ಮುಗ್ದ ಸ್ವಭಾವ, ಸಹಕಾರ ಮನೋಭಾವ, ಇತರರ ಬಗ್ಗೆ ಇವರಿಗಿರುವ ಕಾಳಜಿ ಇಡೀ ನಾಡಿಗೆ ಮಾದರಿ ಪ್ರಾಯವಾಗಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಸೋಮವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬೀದರ್ ಜಿಲ್ಲಾ ಘಟಕದಿಂದ 40ನೇ ಪತ್ರಕರ್ತರ ರಾಜ್ಯ ಸಮ್ಮೇಳನದ ಕಚೇರಿ ಉದ್ಘಾಟನೆ ಮಾಡಿ ಮಾತನಾಡಿರುವ ಅವರು, ಬಸವಣ್ಣನವರ ಕರ್ಮಭೂಮಿ ಬೀದರ್‌ನಲ್ಲಿ 40ನೇ ಪತ್ರಕರ್ತರ ರಾಜ್ಯ ಸಮ್ಮೇಳನ ಮಾಡಲು ಮುಂದಾಗಿರುವುದು ಬಹಳ ಸಂತೋಷದ ಸಂಗತಿ. ಹೊರ ದೇಶಗಳಿಂದ ಪತ್ರಕರ್ತರನ್ನು ಸಮ್ಮೇಳನಕ್ಕೆ ಅವ್ಹಾನ ಮಾಡಲು ಮುಂದಾಗಿರುವುದು ಸ್ವಾಗತಾರ್ಹ ಕ್ರಮ. ಅವರು ಬೀದರ್‌ಗೆ ಬಂದು ಬಸವಣ್ಣನವರ ಬಗ್ಗೆ ಅರಿತುಕೊಳ್ಳಲು ಬಹಳಷ್ಟು ಅನುಕುಲ ಆಗಲಿದೆ ಎಂದರು.

ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗಗಳನ್ನು ಸರಿ ದಾರಿಗೆ ತರುವ, ಅವುಗಳ ಯೋಜನೆ ಹಾಗೂ ಕಾರ್ಯಶೈಲಿ ಬಿತ್ತರಿಸುವ ಕಾರ್ಯ ಮಾಧ್ಯಮಗಳು ಮಾಡುತ್ತವೆ. ಇಂದು ನನ್ನಂತಹ ಒಬ್ಬ ಪರಿಪೂರ್ಣ ರಾಜಕೀಯ ಧುರಿಣರನ್ನು ತಯ್ಯಾರು ಮಾಡುವ ಹಾಗೂ ಅಂಥವರಿಗೆ ಮಾರ್ಗದರ್ಶನ ಮಾಡುವ ಕಾರ್ಯ ಸಹ ಮಾಧ್ಯಮಗಳು ಮಾಡುತ್ತವೆ. ಇವತ್ತು ನಿಸ್ವಾರ್ಥಿ ರಾಜಕಾರಣಿಗಳು ಸಮಾಜದ ಮುಖ್ಯ ವಾಹಿನಿಗೆ ಬರಲು ಮಾಧ್ಯಮಗಳ ಪಾತ್ರ ಬಹಳಷ್ಟಿದೆ ಎಂದರು.

ಮಾಧ್ಯಮಗಳಲ್ಲಿ ಇನ್ನು ಸಾಕಷ್ಟು ಮಹಿಳೆಯರು ತಮ್ಮನ್ನು ತಾವು ತೊಡಗಿಕೊಳ್ಳಬೇಕು. ಎಲ್ಲ ಕ್ಷೇತ್ರಗಳಲ್ಲಿ ತೋರಿದ ಅಭಿಲಾಷೆ ಈ ಕ್ಷೇತ್ರದಲ್ಲೂ ತೋರಬೇಕು. ಇತ್ತಿಚೀಗೆ ತಗಡೂರು ಅವರ ನೇತೃತ್ವದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಮಾಡುತ್ತಿರುವ ಸಮಾಜಮುಖಿ ಕಾರ್ಯ

ಮೆಚ್ಚುವಂಥದ್ದು. ಮುಂಬರುವ ದಿನಗಳಲ್ಲಿ ತಾವು ನಿರ್ಧರಿಸಿದ ರಾಜ್ಯ ಸಮ್ಮೇಳನಕ್ಕೆ ಖಂಡಿತ ಆಗಮಿಸುವುದಾಗಿ ಹೊರಟ್ಟಿ ಭರವಸೆ ನೀಡಿದರು.

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ ಪ್ರಭಾಕರ ಸಮ್ಮೇಳನದ ವೆಬಸೈಟ್ ಅನಾವರಣಗೊಳಿಸಿದರು. ಜಿಲ್ಲಾ ಉಸ್ತುವಾರಿ ಮಂತ್ರಿಗಳು ಹಾಗೂ ಸ್ವಾಗತ ಸಮಿತಿಯ ಅಧ್ಯಕ್ಷರಾದ ಈಶ್ವರ ಖಂಡ್ರೆ, ಪೌರಾಡಳಿತ ಸಚಿವ ರಹಿಮ್ ಖಾನ್ ಮಾತನಾಡಿದರು. ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅಧ್ಯಕ್ಷತೆ ವಹಿಸಿದರು. ಸಂಘದ ಜಿಲ್ಲಾಧ್ಯಕ್ಷ ಅನಂದ ದೇವಪ್ಪ ಪ್ರಾಸ್ತಾವಿಕ ಮಾತನಾಡಿದರು. ರಾಜ್ಯ ಸಂಘದ ಉಪಾಧ್ಯಕ್ಷರಾದ ಹೆಚ್.ಬಿ ಮದನಗೌಡ, ಮತ್ತಿಕೆರೆ ಜಯರಾಮ, ಅಜ್ಜಮಾಡ ರಮೇಶ ಕುಟ್ಟಪ್ಪ, ಕಾರ್ಯದರ್ಶಿಗಳಾದ ಪುಂಡಲಿಕ ಬಾಳೊಜಿ, ಸೋಮಶೇಖರ ಕೆರೆಗುಡು,

ಖಜಾಂಚಿ ವಾಸುದೇವ ಹೊಳ್ಳ, ಮಾಜಿ ಉಪಾಧ್ಯಕ್ಷ ವೇದಿಕೆಯಲ್ಲಿದ್ದರು. ಸಂಘದ ಮಾಜಿ ರಾಜ್ಯ ಉಪಾಧ್ಯಕ್ಷ ಭವಾನಿಸಿಂಗ ಠಾಕೂರ್, ಅಡಾಕ ಸಮಿತಿ ಸದಸ್ಯರಾದ ಶಿವಕುಮಾರ ಸ್ವಾಮಿ, ಅಪ್ಪಾರಾವ ಸೌದಿ, ಮಾಜಿ ಜಿಲ್ಲಾಧ್ಯಕ್ಷರಾದ ಗಂಧರ್ವ ಸೇನಾ, ಮಲ್ಲಿಕಾರ್ಜುನ ಬಿರಾದಾರ, ಬಸವರಾಜ ಕಾಮಶೆಟ್ಟಿ, ಅಶೋಕಕುಮಾರ ಕರಂಜಿ, ಡಿ.ಕೆ ಗಣಪತಿ,

ದೀಪಕ ವಾಲಿ, ಡಾ.ರಜನೀಶ ವಾಲಿ ಹಾಗೂ ಇತರರಿದ್ದರು. ಮಾಜಿ ಜಿಲ್ಲಾಧ್ಯಕ್ಷ ಬಾಬುವಾಲಿ ಕಾರ್ಯಕ್ರಮ ನಿರೂಪಿಸಿ, ಪ್ರಥ್ವಿ–ರಾಜ.ಎಸ್ ವಂದಿಸಿದರು.

# ಕಳ್ಳಬಟ್ಟಿ ನಿರ್ಮೂಲನೆಗೆ ಕಟ್ಟುನಿಟ್ಟಿನ ಕ್ರಮ: ಡಿಸ್ಸಿ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ




ಕಳ್ಳಬಟ್ಟಿ ತಯಾರಿ, ಸಾಗಾಟ ಮತ್ತು ಮಾರಾಟವನ್ನು ಸಂಪೂರ್ಣವಾಗಿ ತಡೆಗಟ್ಟಲು ಪರಿಣಾಮಕಾರಿಯಾಗಿ ಜಾರಿ ಮತ್ತು ತನಿಖಾ ಕಾರ್ಯಗಳನ್ನು ನಡೆಸುವಂತೆ ಜಿಲ್ಲಾಧಿಕಾರಿ ಸಂಗಪ್ಪ ಅಬಕಾರಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸೋಮವಾರ ಕಳ್ಳಬಟ್ಟಿ ನಿರ್ಮೂಲನೆ ಕುರಿತು ರಚಿಸಲಾದ ಜಿಲ್ಲಾ ಮಟ್ಟದ ಸ್ಥಾಯಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಕಳ್ಳಬಟ್ಟಿ ನಿರ್ಮೂಲನೆಗೆ ಸಂಬಂಧಪಟ್ಟ ಇಲಾಖೆಗಳ ಜಂಟಿ ಸಹಭಾಗಿತ್ವದಲ್ಲಿ ಕಾರ್ಯಾಚರಣೆ, ಅರಿವು ಕಾರ್ಯಕ್ರಮಗಳನ್ನು ಕೈಗೊಳ್ಳಬೇಕು. ಗ್ರಾಮ ಮಟ್ಟದಲ್ಲಿ ಅನುಮಾನಾಸ್ಪದ ಕಳ್ಳಿಬಟ್ಟಿ ಚಟುವಟಿಕೆಗಳ ಬಗ್ಗೆ ತಕ್ಷಣ ಮಾಹಿತಿ ಸಂಗ್ರಹಿಸುವ ಕೆಲಸವಾಗಬೇಕೆಂದು ತಿಳಿಸಿದರು.

ಕಳ್ಳಬಟ್ಟಿ ಸೇವನೆಯಿಂದ ಜನರ ಆರೋಗ್ಯದ ಬಗ್ಗೆ ಗಂಭೀರವಾದ ಹಾನಿಯಾಗುತ್ತಿದ್ದು, ಇಂತಹ ಅಕ್ರಮ ಚಟುವಟಿಕೆಗಳಲ್ಲಿ ತೊಡಗಿರುವ ವಿರುದ್ದ ಕಠಿಣ ಕಾನೂನು ಕ್ರಮಕೈಗೊಳ್ಳಬೇಕು. ಸಾರ್ವಜನಿಕರೂ ಸಹ ಸಹಕರಿಸುವ ಮೂಲಕ ಮಾಹಿತಿ ನೀಡಲು ಮುಂದಾಗಬೇಕಿದೆ. ಅಕ್ರಮ ಚಟುವಟಿಕೆಗಳ ಬಗ್ಗೆ ನಿರಂತರ ಪರಿಶೀಲನೆ ನಡೆಸುವ ಕೆಲಸವಾಗಬೇಕು ಅಂದಾಗ ಮಾತ್ರ ಕಳ್ಳಬಟ್ಟಿ ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಜಿ.ಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ಗ್ರಾಮ ಪಂಚಾಯತ ಮಟ್ಟದಲ್ಲಿ ಗ್ರಾಮ ಪಂಚಾಯತಿ ಮತ್ತು ಸ್ವಸಹಾಯ ಸಂಘಗಳ ಸಹಯೋಗದೊಂದಿಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಿ ಕಳ್ಳಬಟ್ಟಿ ಸೇವನೆಯ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಬೇಕು. ಇದರ ಜೊತೆಗೆ ಇಂತಹ ಚಟುವಟಿಕೆಗಳನ್ನು ನಡೆಸುವವರಿಗೆ ಕಾನೂನಿನಡಿ ಇರುವ ಶಿಕ್ಷೆ ಹಾಗೂ ದಂಡದ ಬಗ್ಗೆ ತಿಳಿಸುವ ಕಾರ್ಯವಾಗಬೇಕು. ಗ್ರಾಮ ಸಭೆಗಳಲ್ಲಿ ಇದರ ಬಗ್ಗೆ ಹೆಚ್ಚಿನ ಅರಿವು ಮೂಡಿಸುವ ಕೆಲಸ ಮಾಡಲು ತಿಳಿಸಿದರು.

ಅಬಕಾರಿ ಉಪ ಆಯುಕ್ತ ತಿಪ್ಪೆಸ್ವಾಮಿ ಡಿ.ಎನ್. ಮಾತನಾಡಿ ಪ್ರಸಕ್ತ ಆರ್ಥಿಕ ವರ್ಷದಲ್ಲಿ ಎಪ್ರೀಲ್–2025 ರಿಂದ ಜನವರಿ–2026 ವರೆಗೆ ಒಟ್ಟು 1341 ಕಳ್ಳಬಟ್ಟಿಗಳ ಮೇಲೆ ದಾಳಿ ನಡೆಸಿದ್ದು, 110 ಪ್ರಕರಣಗಳನ್ನು ದಾಖಲಿಸುವ ಮೂಲಕ 110 ಜನ ಆರೋಪಿಗಳನ್ನು ಬಂಧಿಸಲಾಗಿದೆ. 799 ಲೀಟರ್ ಕಳ್ಳಬಟ್ಟಿ ಸಾರಾಯಿ, 1086 ಕೆಜಿ ಬೆಲ್ಲದ ಕೊಳೆ ಜೊತೆಗೆ 1 ಆಟೋ, 33 ಟಿಡಬ್ಲೂ, ಒಂದು ಬೈಸಿಕಲ್ ವಶಕ್ಕೆಪಡೆಯಲಾಗಿದೆ. 6 ಪ್ರಕಟಣಗಳಿಗೆ 11 ಜನ ಆರೋಪಿಗಳಿಗೆ ಪ್ರತಿಯೊಬ್ಬರಿಗೂ 1 ವರ್ಷ ಕಠಿಣ ಶಿಕ್ಷೆ, 10 ಸಾವಿರ ರೂ.ಗಳ ದಂಡವನ್ನು ನ್ಯಾಯಾಲಯ ವಿಧಿಸಿದೆ. ಅಲ್ಲದೇ ಎನ್.ಡಿ.ಪಿ.ಎಸ್ ಪ್ರಕರಣಗಳಲ್ಲಿ ಇಲ್ಲಿಯವರೆಗೆ 2.199 ಕೆಜಿ ಗಾಂಜಾ, 11 ಹಸಿ ಗಾಂಜಾ ಗಿಡಗಳು, 1 ದ್ವಿಚಕ್ರ ವಾಹನ, 1 ಮೊಬೈಲ್ ಜೊತೆಗೆ 7 ಜನ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಲಯ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಸ್ವಪ್ನಿಲ್ ಅಹಿರೆ, ಅಬಕಾರಿ ಅಧೀಕ್ಷಕ ಹನಮಪ್ಪ ಭಜಂತ್ರಿ, ಆರೋಗ್ಯ ಇಲಾಖೆಯ ಶಿವನಗೌಡ ಪಾಟೀಲ ಸೇರಿದಂತೆ ಜಿಲ್ಲೆಯ ಎಲ್ಲ ವಲಯದ ಅಬಕಾರಿ ನಿರೀಕ್ಷಕರು ಉಪಸ್ಥಿತರಿದ್ದರು.

# ಎಸ್,ಡಿ.ಎಂ.ಸಿಗಳಿಗೆ ಪ್ರಶಸ್ತಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

2025 –26 ನೇ ಸಾಲಿನಲ್ಲಿ' ಪುಷ್ಠಿ' ಕಾರ್ಯಕ್ರಮದಡಿ ಅತ್ಯುತ್ತಮ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ಪ್ರಶಸ್ತಿಗೆ ತಾಲೂಕಿನ ಮೂರು ಶಾಲೆಗಳನ್ನು ಆಯ್ಕೆ ಮಾಡಲಾಗಿದೆ. ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಸಂಗಮ ಕ್ರಾಸ್ (ಕಿರಿಯ ಪ್ರಾಥಮಿಕ ವಿಭಾಗ ), ಕುವೆಂಪು ಶತಮಾನೋತ್ಸವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ತುಳಸಿಗೇರಿ (ಹಿರಿಯ ಪ್ರಾಥಮಿಕ ವಿಭಾಗ ) ಹಾಗೂ ಎಮ್.ಆಯ್. ಹುರಕಡ್ಲಿ ಸರ್ಕಾರಿ ಪ್ರೌಢಶಾಲೆ ಚಿಕ್ಕಶೆಲ್ಲಿಕೇರಿ (ಪ್ರೌಢ ವಿಭಾಗ )ಇವು ಪ್ರಶಸ್ತಿಗೆ ಆಯ್ಕೆಯಾದ ಶಾಲೆಗಳ ಸಮಿತಿಗಳು. ಶಾಲೆಯ ಸರ್ವತೋಮುಖ ಅಭಿವೃದ್ಧಿಗೆ ಸಮಿತಿ ಸಕ್ರಿಯ ಪಾಲ್ಗೊಳ್ಳುವಿಕೆ, ಶಾಲಾ ಭೌತಿಕ ಸೌಲಭ್ಯಗಳ ಅಭಿವೃದ್ಧಿ, ದಾನಿಗಳ ಕೊಡುಗೆ ಸಂಗ್ರಹ ಮತ್ತು ಸಂಪನ್ಮೂಲಗಳ ಸದ್ಬಳಕೆ, ವಿದ್ಯಾರ್ಥಿಗಳ ಸಾಧನೆ, ಶೈಕ್ಷಣಿಕ ಪರಿಸರ, ಮೂಲಭೂತ ಸೌಕರ್ಯ ಇವು ಪ್ರಶಸ್ತಿಯ ಮಾನದಂಡಗಳು.

# ಸಮಗ್ರ ಕೃಷಿ ಪದ್ಧತಿ ರೈತರಿಗೆ ಪ್ರಶಸ್ತಿಗೆ ಅರ್ಜಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಕರ್ನಾಟಕದಲ್ಲಿ ಸ್ಥಿರ ಕೃಷಿ ಅಭಿವೃದ್ಧಿಗಾಗಿ ಪ್ರೊಫೆಸರ್ ಜಿ.ಕೆ.ವೀರೇಶ, ಮಾಜಿ ಕುಲಪತಿ, ಕೃಷಿ ವಿಶ್ವವಿದ್ಯಾಲಯ, ಜಿಕೆವಿಕೆ ಬೆಂಗಳೂರು ಹಾಗೂ ಸ್ಥಾಪಕ ಅಧ್ಯಕ್ಷರು, ಹಳೆ ವಿದ್ಯಾರ್ಥಿ ಸಂಘ, ಯುಎಎಸ್ (ಬಿ) ಅವರ ದತ್ತಿ ನಿಧಿಯಡಿ ಸಮಗ್ರ ಕೃಷಿ ಪದ್ದತಿ ಅನುಷ್ಠಾನಗೊಳಿಸುತ್ತಿರುವ ರೈತರಿಗೆ ವಾರ್ಷಿಕ ಪ್ರಶಸ್ತಿ ನೀಡಲಾಗುತ್ತಿದೆ. ಅರ್ಹ ರೈತರಿಗೆ ಅರ್ಜಿ ಆಹ್ವಾನಿಸಲಾಗಿದೆ.

ದಕ್ಷಿಣ, ಉತ್ತರ ಹಾಗೂ ಕರಾವಳಿ, ಮಲೆನಾಡು ಪ್ರದೇಶಗಳಿಂದ ತಲಾ ಒಬ್ಬರಂತೆ ಒಟ್ಟು ಮೂರು ರೈತರಿಗೆ ಪ್ರಶಸ್ತಿ ಪ್ರಧಾನ ಮಾಡಲಾಗುತ್ತದೆ. ಪ್ರತಿ ಪ್ರಶಸ್ತಿಯಲ್ಲಿ 25 ಸಾವಿರ ರೂ. ನಗದು ಮತ್ತು ಪ್ರಶಸ್ತಿ ಪತ್ರ ನೀಡಲಾಗುತ್ತದೆ. ಆಯ್ಕೆಯಾಗುವ ರೈತರು ಇತರರಿಗೆ ಮಾರ್ಗದರ್ಶನ ನೀಡಿದ ಅನುಭವನ ಹೊಂದಿರಬೇಕು. ಅರ್ಜಿಯನ್ನು ಮಾರ್ಚ 16 ರೊಳಗಾಗಿ ಕಾರ್ಯದರ್ಶಿಗಳು ಹಳೆ ವಿದ್ಯಾರ್ಥಿ ಸಂಘ, ಯುಎಎಸ್ ಕನ್ವೆನ್ಷನ್ ಸೆಂಟರ್, ಹೆಬ್ಬಾಳ, ಬೆಂಗಳೂರು ಇವರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹಾಗೂ ಅರ್ಜಿ ನಮೂನೆಗಾಗಿ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸುವಂತೆ ಜಂಟಿ ಕೃಷಿ ನಿರ್ದೇಶಕ ಟಿ.ಎಸ್.ರುದ್ರೇಶ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಂದುಕೊರತೆ ಸಭೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಭವಿಷ್ಯನಿಧಿ, ಪಿಂಚಣಿ ಇತ್ಯಾದಿಗಳಿಗೆ ಸಂಬಂಧಿಸಿದ ಕುಂದುಕೊರತೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಫೆಬ್ರುವರಿ 27 ರಂದು ಬಸವ ಸೇವಾ ಸಮಿತಿ ಹತ್ತಿರ ವಿ.ಎಂ.ಗದ್ದಿಗೆ ಗವಿ ರೋಡ, ಇಲಕಲ್ಲನಲ್ಲಿ ಸಭೆ ಕರೆಯಲಾಗಿದೆ. ಅಂದು ಬೆಳಿಗ್ಗೆ 9.30 ರಿಂದ ಸಂಜೆ 4 ಗಂಟೆವರೆಗೆ ಪಿಂಚಣಿದಾರರು ಇಪಿಎಫ್ ಚಂದಾದಾರರು ಮತ್ತು ಉದ್ಯೋಗದಾತರು ಇದರ ಸದುಪಯೋಗ ಪಡೆದುಕೊಳ್ಳುವಂತೆ ರಾಯಚೂರು ಪ್ರಾದೇಶಿಕ ಕಚೇರಿಯ ಪಿಎಫ್ ಕಮೀಷನರ್–2 ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ sro.raichur@epfindia.gov.in, do.bagalkot@epfindia-gov.in ಇ–ಮೇಲಗೆ ಸಂಪರ್ಕಿಸಬಹುದಾಗಿದೆ.

# 24 ಕ್ಕೆ ಈರುಳ್ಳಿ ಬೀಜೋತ್ಪಾದನೆ ಕಾರ್ಯಾಗಾರ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವು ಫೆಬ್ರವರಿ 24 ರಂದು ಬೆಳಿಗ್ಗೆ 10 ಗಂಟೆಗೆ ಈರುಳ್ಳಿ ಬೀಜೋತ್ಪಾದನಾ ತಾಂತ್ರಿಕತೆಗಳ ಕುರಿತು ಕ್ಷೇತ್ರೋತ್ಸವವನ್ನು ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಈರುಳ್ಳಿ ಬೀಜೋತ್ಪಾದನೆಯಲ್ಲಿ ಅನುಸರಿಸಬೇಕಾದ ಆಧುನಿಕ ತಾಂತ್ರಿಕ ವಿಧಾನಗಳು, ಗುಣಮಟ್ಟದ ಬೀಜ ಉತ್ಪಾದನೆ, ರೋಗ ಮತ್ತು ಕೀಟ ನಿರ್ವಹಣೆ ಕುರಿತು ತಜ್ಞರಿಂದ ಪ್ರಾಯೋಗಿಕ ಮಾರ್ಗದರ್ಶನ ನೀಡಲಾಗುತ್ತದೆ. ಸದರಿ ವಿಷಯದ ಹೆಚ್ಚಿನ ಮಾಹಿತಿಗಾಗಿ ಡಾ. ರುದ್ರೇಶ್ ಡಿ.ಎಲ್ (8660801363) ಇವರನ್ನು ಸಂಪರ್ಕಸುವಂತೆ ತೋವಿವಿಯ ವಿಸ್ತರಣಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಹಕಾರಿ ಸಂಸ್ಥೆಗಳಲ್ಲಿ ಪಾರದರ್ಶಕತೆ ಅಗತ್ಯ: ಗುರುನಾಥ ಜಾಂತಿಕರ್



• ಮಲ್ಲಮ್ಮ ನುಡಿ ವಾರ್ತೆ, ಬೀದರ್

ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ.,ಕಲಬುರಗಿ ಪ್ರಾಂತ, ಬೀದರ್ ಜಿಲ್ಲಾ ಸಂಪರ್ಕ ಕಛೇರಿ ವತಿಯಿಂದ ಬೀದರ್ ಜಿಲ್ಲೆಯ ನಷ್ಟದಲ್ಲಿರುವ ಸೌಹಾರ್ದ ಸಹಕಾರಿಗಳಿಗಾಗಿ ದಿನಾಂಕ 21–02–2026 ರಂದು ಕಲ್ಯಾಣ ಪತ್ತಿನ ಸೌಹಾರ್ದ ಸಹಕಾರಿಯ, ಸಾಮರ್ಥ್ಯ ತರಬೇತಿ ಕೇಂದ್ರದಲ್ಲಿ, ಜಿಲ್ಲೆಯ ಆಯ್ದ ಸೌಹಾರ್ದ ಸಹಕಾರಿಗಳಿಗಾಗಿ " ವ್ಯವಹಾರ ಅಭಿವೃದ್ಧಿ ತರಬೇತಿ "ಯನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಉದ್ಘಾಟನೆಯನ್ನು ಸಂಯುಕ್ತ ಸಹಕಾರಿಯ ಮಾನ್ಯ ನಿರ್ದೇಶಕರಾದ ಶ್ರೀ ಗುರುನಾಥ ಜ್ಯಾಂತಿಕರ್ ರವರು ನೇರವೇರಿಸಿ, ಸಹಕಾರಿಯು ಲಾಭದಾಯಕವಾಗಬೇಕಾದರೆ, ದುಂದು ವೆಚ್ಚಕ್ಕೆ ಕಡಿವಾಣ, ಪಾರದರ್ಶಕತೆ ಹಾಗೂ ಆಡಳಿತ ಮಂಡಳಿಯು ದಿನನಿತ್ಯದ ವ್ಯವಹಾರದ ಕುರಿತು ಗಮನ ಹರಿಸಬೇಕು. ಈ ಕುರಿತು ಹಲವು ನಿದರ್ಶನಗಳ ಸಹಿತ ಮಾಹಿತಿ ನೀಡುವ ಮೂಲಕ, ಸಮಸ್ಯೆಗಳಿಗೆ ಬಲಿಯಾಗಬೇಡಿ ಎಂದು ಮುನ್ನೆಚ್ಚರಿಕೆ ನೀಡಿದರು. ಗುಣಾತ್ಮಕ ಸಹಕಾರಿಗಳಿಂದ ಮಾತ್ರ ಸದೃಢ ಮತ್ತು ಸಮರ್ಥ ಭಾರತದ ಅಭಿವೃದ್ಧಿ ಸಾಧ್ಯ ಹಾಗೂ ಗುಣಾತ್ಮಕ ಸಹಕಾರಿಗಳು ದೇಶದ ಆರ್ಥಿಕತೆ–ಯ ಮೆಟ್ಟಿಲು ಎಂದು ಸಂದೇಶ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ನಾಗಶೆಟ್ಟಿ ಪಾಟೀಲ್, ನಿರ್ದೇಶಕರು, ಬೀದರ್ ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟ ನಿ., ಬೀದರ್ ವಹಿಸಿದ್ದರು. ಇವರು ಸಹಕಾರಿಗಳ ವ್ಯವಹಾರ ಅಭಿವೃದ್ಧಿಗೆ ಅನುಕೂಲವಾಗಲಿ ಎನ್ನುವ ಉದ್ದೇಶದಿಂದ ತರಬೇತಿ ಆಯೋಜಿಸಲಾಗಿದೆ. ಎಲ್ಲರೂ ತರಬೇತಿಯ ಸದುಪಯೋಗ ಪಡೆಯಬೇಕು ಎಂದರು. ಕಾರ್ಯಕ್ರಮದ ಸ್ವಾಗತವನ್ನು ಶ್ರೀ ಶ್ರೀಕಾಂತ ಸ್ವಾಮಿ, ನೇರವೇರಿಸಿದರು. ಬೀದರ್ ಜಿಲ್ಲಾ ಸೌಹಾರ್ದ ಅಭಿವೃದ್ಧಿ ಅಧಿಕಾರಿಗಳಾದ ಶ್ರೀ ರಾಜೇಶ್ ಕೆ.ಎಮ್. ಕಾರ್ಯಕ್ರಮದ ಉಸ್ತುವಾರಿ ಹಾಗೂ ನಿರ್ವಹಣೆ ಮಾಡಿದರು. ಮುಖ್ಯ ಅಥಿತಿಗಳಾಗಿ ಶ್ರೀ ಸಂಜಯ್ ಕ್ಯಾಸಾ, ನಿರ್ದೇಶಕರು, ಬೀದರ್ ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟ ನಿ., ಇವರು ಉಪಸ್ಥಿತರಿದ್ದರು. 30 ಸೌಹಾರ್ದ ಸಹಕಾರಿಗಳಿಂದ 60 ಸಹಕಾರಿಗಳ ಪ್ರತಿನಿಧಿಗಳು ಹಾಗೂ ಸಿಬ್ಬಂದಿಗಳು ಭಾಗವಹಿಸಿ ಕಾರ್ಯಕ್ರಮದ ಪ್ರಯೋಜನ ಪಡೆದರು.

ಉಪನ್ಯಾಸ : ಶ್ರೀ ಶಶಿಧರ್ ಎಲೆ, ಮಾನ್ಯ ನಿವೃತ ಸಹಕಾರ ಸಂಘಗಳ ಅಪರ ನಿಬಂಧಕರು, ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ ನಷ್ಟದಲ್ಲಿರುವ ಸಹಕಾರಿಗಳ ಪ್ರಗತಿಗೆ ಅವಶ್ಯಕವಿರುವ ಅಂಶಗಳ ಕುರಿತು ಲಾಭಗಳಿಕೆಗೆ ಮಾರ್ಗೋಪಾಯ, ಆದಾಯದ ಮೂಲಗಳು, ಸಂಪನ್ಮೂಲಗಳ ಸದ್ಭಳಕೆ , ವ್ಯವಹಾರ ಗಾತ್ರ ಹೆಚ್ಚಳ ಮತ್ತು ತಂತ್ರಜ್ಞಾನ ಬಳಕೆ ಬಗ್ಗೆ ಸಹಕಾರಿಗಳಿಗೆ ಉಪನ್ಯಾಸ ನೀಡಿದರು. ಡಾ. ಪೃಥ್ವೀರಾಜ್ ಲಕ್ಕಿ, ರಾಷ್ಟ್ರೀಯ ತರಬೇತುದಾರರು, ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ, ಸಹಕಾರಿಗಳಲ್ಲಿ ಪ್ರೇರಣಾತ್ಮಕ ವಾತಾವರಣ ಅಗತ್ಯ ಕುರಿತು ಉಪನ್ಯಾಸ ನೀಡಿದರು.

# ಹೆಣ್ಣುಮಕ್ಕಳ ಆತ್ಮ ರಕ್ಷಣೆ ಜೊತೆ ದೈಹಿಕ ಮಾನಸಿಕವಾಗಿ ಸದೃಢರಾಗಲು ಕರಾಟೆ ಸಹಕಾರ



ಬಳ್ಳಾರಿ . ವರ್ಲ್ಡ್ ಟ್ರೇಡಿಷನಲ್ ಶೊಟೊಕಾನ್ ಕರಾಟೆ ಪೆಡೆರೇಷನ್ ಅಪ್ ಇಂಡಿಯಾ ಹಾಗೂ ಟ್ರಡಿಷನಲ್ ಕರಾಟೆ ಅಕಾಡೆಮಿ ಕರ್ನಾಟಕ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ ಕರಾಟೆ ಬೆಲ್ಟ್ ಪರೀಕ್ಷೆಯನ್ನು ಬಳ್ಳಾರಿಯ ನಗರದ ನಂದಿ ಶಾಲೆಯ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದು .

ಟ್ರೇಡಿಷನಲ್ ಶೊಟೊಕಾನ್ ಕರಾಟೆ ಅಕಾಡೆಮಿಯ ಬಳ್ಳಾರಿ ನಗರದ ವಿವಿಧ ಶಾಲೆಗಳಲ್ಲಿ ತರಬೇತಿ ಪಡೆಯುತ್ತಿರುವ ಸುಮಾರು 200 ಕ್ಕೂ ಹೆಚ್ಚು ಕರಾಟೆ ವಿದ್ಯಾರ್ಥಿ / ವಿದ್ಯಾರ್ಥಿನಿಯರು ಭಾಗವಹಿಸಿದರು, ಕರಾಟೆಯ ಬೆಲ್ಟ್ ಪರೀಕ್ಷೆಯಲ್ಲಿ ದೈಹಿಕ ವ್ಯಾಯಾಮ ಹಾಗೂ ದೈಹಿಕ ಸಾಮರ್ಥ್ಯ ಕಿಹಾನ್ ಮತ್ತು ಕಟಾ ಕೌಶಲ್ಯಗಳನ್ನು ಪ್ರದರ್ಶಿಸಿದರು ಬೆಲ್ಟ್ ಮುಖ್ಯ ಪರೀಕ್ಷರಾಗಿ ಘಖಿಖಏಈ ನ ಸೆನ್ಸಾಯಿ ಕಟ್ಟೆಸ್ವಾಮಿ ಹಾಗೂ ಸೆನ್ಸಾಯ್ ಸುಭಾಷ್ ಚಂದ್ರ, ನಡೆಸಿಕೊಟ್ಟರು.

ನಂತರ ಬೆಲ್ಟ್ ವಿತರಣಾ ಮಾಡಿ ಮಾತನಾಡಿದ ಹಿರಿಯ ಕರಾಟೆ ತರಬೇತುದಾರರಾದ ಕಟ್ಟೇಸ್ವಾಮಿ ಕರಾಟೆ ತರಬೇತಿಯನ್ನು ರಾಜ್ಯದ ಸರ್ಕಾರಿ ಮತ್ತು ಖಾಸಗಿ ಶಾಲಾ ಕಾಲೇಜುಗಳಲ್ಲಿ ಪಠ್ಯೇತರ ಚಟುವಟಿಕೆಗಳಲ್ಲಿ ಈಗಾಗಲೇ, ICSE, CBSE, STATE SYLLABUS, ಶಾಲೆಗಳಲ್ಲಿ ಕಡ್ಡಾಯ ಮಾಡಿದ್ದು ಸಂತೋಷದ ವಿಷಯ ಈ ಕರಾಟೆ ತರಬೇತಿಯು ವಿಶೇಷವಾಗಿ ಹೆಣ್ಣುಮಕ್ಕಳ ಆತ್ಮ ರಕ್ಷಣೆ ಜೊತೆ ದೈಹಿಕ ಮಾನಸಿಕವಾಗಿ ಸದೃಢರಾಗಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಸಹ ಪರೀಕ್ಷಕರಾಗಿ ಟ್ರೇಡಿಷನಲ್ ಶೊಟೊಕಾನ್ ಕರಾಟೆ ಅಕಾಡೆಮಿಯ ಕರಾಟೆ ತರಬೇತುದಾರರಾದ ನಾಣ್ಯ ನಾಯಕ್, ಆನಂದ್ , ರಿಜ್ವಾನಮೋಹಿನ್, ಮಾರೇಶ್, ನಾಗರಾಜ್, ಕುಮಾರಸ್ವಾಮಿ, ವಾಸೀಮ್ ಅಕ್ರಮ್, ಉದಯ ಕುಮಾರ್, ಪರೀಕ್ಷೆ ನೆಡೆಸಿಕೊಟ್ಟರು,

ಕಾರ್ಯಕ್ರಮದಲ್ಲಿ ಹಿರಿಯ ಕರಾಟೆ

ತರಬೇತುದಾರರು. ಜಡೇಶ್, ಹುಲುಗಣ್ಣ, ಪ್ರಸಾದ್, ಹನುಮಂತ, ನಾಗರಾಜ್, ಸಂತೋಷ್, ಸೋಮಶೇಖರ್, ಹರಿಪ್ರಸಾದ್, ಪ್ರಶಾಂತ, ದಿನೇಶ್ , ಆಶಾ, ನವೀನ್ ಮತ್ತು ಕಿರಿಯ ಬ್ಲಾಕ್ ಬೆಲ್ಟ್ ಪದವಿದರರು. ಹಾಗೂ ನಂದಿ ಶಾಲೆಯ ಕರಾಟೆ ತರಬೇತುದಾರರಾದ ಗಾದಿಲಿಂಗಪ್ಪ. ಹಾಗೂ ಪಾಲ ಪೋಷಕರು ಉಪಸ್ಥಿತರಿದ್ದರು.

ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನ ಪತ್ರಿಕೆ

ಮಂಗಳವಾರ 24.02.2026



# ತಾಂತ್ರಿಕ ಮತ್ತು ನೈತಿಕ ಸವಾಲುಗಳ ಬಗ್ಗೆ ಚರ್ಚೆಯಾಗಲಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್




ಕಾರ್ಯನಿರತ ಪತ್ರಕರ್ತರ 40ನೇ ಸಮ್ಮೇಳನದಲ್ಲಿ ತಾಂತ್ರಿಕ ಮತ್ತು ನೈತಿಕ ಸವಾಲುಗಳ ಬಗ್ಗೆ ಅರ್ಥಪೂರ್ಣ ಚರ್ಚೆಯಾಗಲಿ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪಿ ಕರೆ ನೀಡಿದರು.

ಜಿಲ್ಲಾ ಪತ್ರಕರ್ತರ ಸಂಘದ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ "ಸಮ್ಮೇಳನದ ವೆಬ್ ಸೈಟ್" ಉದ್ಘಾಟಿಸಿ ಮಾತನಾಡಿದರು.

ಇಂದು ಅಭಿವೃದ್ಧಿ ಪತ್ರಿಕೋದ್ಯಮ ಪಕ್ಕಕ್ಕೆ ಸರಿದು ಹೇಳಿಕೆ ಆಧಾರಿತ ಪತ್ರಿಕೋದ್ಯಮವೇ ಪ್ರಧಾನ ಆಗುತ್ತಿರುವುದು ಆರೋಗ್ಯಕರ ಸಂಗತಿ ಅಲ್ಲ. ಹೀಗಾಗಿ ಕಾರ್ಯನಿರತ ಪತ್ರಕರ್ತರ 40ನೇ ಸಮ್ಮೇಳನ ಮಾಧ್ಯಮ ಜಗತ್ತಿನ "ಮಂಥನ" ದ ವೇದಿಕೆಯಾಗಬೇಕು ಎಂದು ಕರೆ ನೀಡಿದರು.

ಕಾರ್ಯನಿರತ ಪತ್ರಕರ್ತರ ಸಮ್ಮೇಳನಗಳು ಒಂದು ಅರ್ಥದಲ್ಲಿ "ಪಿಟ್ ಸ್ಟಾಪ್ಸ್" ಎಂದು ಹೇಳಬಹುದು. ರೇಸಿಂಗ್ ಕಾರುಗಳು ತಮ್ಮ ಓಟದ ನಡುವೆ ಟೈರ್ ಗಳನ್ನು ಬದಲಾಯಿಸಲು, ಇಂಧನ ತುಂಬಿಸಿಕೊಳ್ಳಲು ಮಾರ್ಗಮಧ್ಯದಲ್ಲಿ ಇರುವ ನಿಲ್ದಾಣಗಳನ್ನು ಪಿಟ್ ಸ್ಟಾಪ್ಸ್ ಎಂದು ಕರೆಯುತ್ತಾ-ರೆ. ವೈರಲ್ ಸುದ್ದಿಗಳ ವೇಗದಲ್ಲಿ ಓಡುತ್ತಿರುವ ಉದ್ಯಮಕ್ಕೆ ಈಗ ಇಂಥಾ ಪಿಟ್ ಸ್ಟಾಪ್ಸ್ ಗಳ ಅಗತ್ಯ ತುಂಬ ಇದೆ ಎಂದು ವಿವರಿಸಿದರು.

ಈ ಸಮ್ಮೇಳನ ವೃತ್ತಿಪರರಿಗೆ ತಮ್ಮ ನೋಟಗಳನ್ನು, ಆಯ್ಕೆಗಳನ್ನು ಮತ್ತು ವೃತ್ತಿಪರತೆಯನ್ನು ತೀಕ್ಷ್ಣಗೊಳಿಸಿಕೊಳ್ಳಲು ಮತ್ತು ಅವರ ಆಂತರಿಕ ದಿಕ್ಸೂಚಿಯನ್ನು ಮರು ಚಿಂತನಗೆ ಒಳಪಡಿಸಿಕೊಳ್ಳಲು ವೇದಿಕೆಯನ್ನು ಒದಗಿಸುತ್ತದೆ ಎನ್ನುವ ಭರವಸೆ ಇದೆ ಎಂದು ಆಶಿಸಿದರು.

ಕೃತಕ ಬುದ್ಧಿಮತ್ತೆ ತಂತ್ರಜ್ಞಾನ-ಚಾಲಿತ ಯುಗದಲ್ಲಿ ನಮ್ಮ ಕೌಶಲ್ಯಗಳನ್ನು ನವೀಕರಣಗೊಳಿಸಿಕೊಳ್ಳುವುದರ ಜೊತೆಗೆ ಪತ್ರಿಕೋದ್ಯಮದ ಆದ್ಯತೆಗಳನ್ನೂ ಮರು ಪರಿಶೀಲನೆಗೆ ಚರ್ಚೆಗೆ ಒಳಪಡಿಸಬೇಕಿದೆ.

ಇವತ್ತಿನ ತಾಂತ್ರಿಕ ವೇಗ ಮತ್ತು ಹೊಸ ಹೊಸ ತಂತ್ರಜ್ಞಾನದ ವೇಗದಲ್ಲಿ ಬಹುತೇಕ ಪ್ರತಿ ಐದು ವರ್ಷಗಳಿಗೆ ಒಮ್ಮೆ ನಾವು ಕಲ್ಪಿಸಿಕೊಳ್ಳಲಾಗದ ತಂತ್ರಜ್ಞಾನ ಹೊರಗೆ ಬರುತ್ತಿವೆ. ಹೊಸದಾಗಿ ಬಂದಿರುವ ೦ಖ ತಂತ್ರಜ್ಞಾನದ ಸಾಧ್ಯತೆಗಳನ್ನು ಮತ್ತು ಅಪಾಯಗಳನ್ನು ನಾವು ಸರಿಯಾಗಿ ಗ್ರಹಿಸುವ ಮೊದಲೇ ಹೊಸ ತಂತ್ರಜ್ಞಾನ ಬಂದಿರುತ್ತದೆ. ಈಗಾಗಲೇ ೦ಖ ಕೂಡ ಹಳತಾಗಿ "Super AI" ಅಂತ ಬರುತ್ತಿದೆ ಎಂದು ಎಚ್ಚರಿಸಿದರು.


ಇವೆಲ್ಲವನ್ನೂ ಅರಿಯುವ ಮತ್ತು ಅಪಾಯಗಳನ್ನು ತಡೆಯುವ ಕಾರ್ಯಾಗಾರವಾಗಿ ಈ ಬಾರಿಯ ಸಮ್ಮೇಳನ ಯಶಸ್ವಿಯಾಗಲಿ ಎಂದು ಆಶಿಸುತ್ತೇನೆ ಎಂದರು. ಡೀಪ್‌ಫೇಕ್‌ಗಳನ್ನು ಹೇಗೆ ಗುರುತಿಸುವುದು ಮತ್ತು ಸಾಮಾಜಿಕ ಮಾಧ್ಯಮ ಲೀಡ್‌ಗಳನ್ನು ಪರಿಶೀಲಿಸುವುದು ಹೇಗೆ ಎಂಬುದನ್ನು News room ಗಳು ಕಲಿಸಬೇಕಾಗಿದೆ.

ಮಾಧ್ಯಮ ಲೋಕದ ಕಾರ್ಪೊರೇಟೀಕರಣದ ತಂದೊಡ್ಡಿರುವ ನೈತಿಕ ಸವಾಲುಗಳ ನಡುವೆಯೇ ಈಗ ೦ಖ ಮತ್ತು ಆಧುನಿಕ ತಂತ್ರಜ್ಞಾನವೂ ಹೊಸ ಹೊಸ ನೈತಿಕ ಸವಾಲುಗಳನ್ನು ಮುಂದಿಟ್ಟಿದೆ.

ಹೀಗಾಗಿ, ನೈತಿಕ ಮತ್ತು ತಾಂತ್ರಿಕ ಸವಾಲುಗಳ ಬಗ್ಗೆ ಅರ್ಥಪೂರ್ಣ ಚರ್ಚೆಗೆ ಸಮ್ಮೇಳನ ವೇದಿಕೆಯಾಗಲಿ ಎಂದು ನಾನು ಬಯಸುತ್ತೇನೆ ಎಂದರು.

**ಈ ಬಜೆಟ್‌ನಲ್ಲೂ ಬಂಪರ್:** ಪತ್ರಕರ್ತ ಸಮುದಾಯಕ್ಕೆ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೊದಲಿನಿಂದಲೂ ನೆರಳಾಗಿ ನಿಂತಿದ್ದಾರೆ. ಈ ಬಾರಿಯ ಬಜೆಟ್ ನಲ್ಲೂ ಶ್ರಮಿಕ ಪತ್ರಕರ್ತ ಸಮುದಾಯಕ್ಕೆ ಉತ್ತಮ ಅನುಕೂಲಗಳು ಆಗುವ ಭರವಸೆ ಇದೆ ಎಂದರು.

ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸಚಿವರಾದ ಈಶ್ವರ್ ಖಂಡ್ರೆ, ರಹೀಮ್ ಖಾನ್, ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು, ಉಪಾಧ್ಯಕ್ಷರಾದ ಮದನ್ ಗೌಡರು, ಜಿಲ್ಲಾಧ್ಯಕ್ಷರಾದ ಆನಂದ್ ದೇವಪ್ಪ ಸೇರಿ ರಾಜ್ಯ ಮತ್ತು ಜಿಲ್ಲಾ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.



ಮಾರ್ಚ್ 28ರಂದು ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಸಂಪುಟ ಸಹೋದ್ಯೋಗಿಗಳು ಹಾಗೂ ಇತರ ಗಣ್ಯ ಮಾನ್ಯರ ಉಪಸ್ಥಿತಿಯಲ್ಲಿ ಬೀದರ್‌ನಲ್ಲಿ ನಡೆಯಲಿರುವ ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ 40ನೇ ರಾಜ್ಯ ಸಮ್ಮೇಳನದ ಭವ್ಯ ಕಾರ್ಯಕ್ರಮದ ಪೂರ್ವಭಾವಿಯಾಗಿ, ಇಂದು ಬೀದರ ಪತ್ರಿಕಾ ಭವನದಲ್ಲಿ ಆಯೋಜಿಸಲಾಗಿದ್ದ ಸಮ್ಮೇಳನದ ಕಛೇರಿ, ಕಿರುಚಿತ್ರ ಮತ್ತು ವೆಬ್‌ಸೈಟ್ ಉದ್ಘಾಟನಾ ಸಮಾರಂಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಅವರು ಭಾಗವಹಿಸಿ ಸಮ್ಮೇಳನದ ಕಿರುಹೊತ್ತಿಗೆಯನ್ನು ಬಿಡುಗಡೆಗೊಳಿಸಿ ಮಾತನಾಡಿದರು.

## ಅಯ್ಯಪ್ಪ ಶಿವಾಚಾರ್ಯರ 56ನೇ ಪುಣ್ಯಸ್ಮರಣೋತ್ಸವದಲ್ಲಿ ಶ್ರೀಗಳಿಗೆ ಸನ್ಮಾನ



**ಚಿಟಗುಪ್ಪ:** ಲಿಂಗೈಕ್ಯ ಅಯ್ಯಪ್ಪ ಶಿವಾಚಾರ್ಯರರು ಬ್ರಹನ್ಮಠ ಚಾಂಗಲೇರಾ ಮತ್ತು ಚಿಟಗುಪ್ಪ ಇವರ 56ನೇ ಪುಣ್ಯ ಸ್ಮರಣೋತ್ಸವದ ಅಂಗವಾಗಿ ಆತ್ಮ ಜ್ಯೋತಿ ಕಾರ್ಯಕ್ರಮ ಅಂಗವಾಗಿ ಅರಣ್ಯ ಇಲಾಖೆಯ ಉಪ ವಲಯ ಅರಣ್ಯಾಧಿಕಾರಿ ವೀರಯ್ಯಾ ಪೂಜಾರಿ, ಪತ್ರಕರ್ತ ರಾಜಕುಮಾರ್ ಆರ್. ಹಡಪದ ಸೋಮವಾರ ಅಯ್ಯಪ್ಪ ಶಿವಾಚಾರ್ಯರ ಗದ್ದುಗೆಯ ದರ್ಶನ ಪಡೆದು ನಂತರ ಬ್ರಹನ್ಮಠ ಚಾಂಗಲೇರಾ ಮತ್ತು ಚಿಟಗುಪ್ಪ ಹಿರೇಮಠದ ಪೀಠಾಧಿಪತಿಗಳಾದ ಗುರುಲಿಂಗ ಶಿವಾಚಾರ್ಯರಿಗೆ ಮತ್ತು ಮರುಳಾರಾಧ್ಯ ಶಿವಾಚಾರ್ಯರಿಗೆ ಸಸಿ ನೀಡಿ ಸನ್ಮಾನಿಸಿ ಆಶೀರ್ವಾದ ಪಡೆದರು.

## ಸಂಘಟನೆಯೇ ಬದಲಾವಣೆಯ ಶಕ್ತಿ



**ಬೀದರ:** ಸಂಘಟನೆ ಎನ್ನುವುದು ಬಹಳ ಮುಖ್ಯ, ನೀವು ಎಲ್ಲರೂ ಮಹಿಳಾ ಸಂಘವನ್ನು ಕಟ್ಟಿಕೊಂಡು ರಾಜ್ಯವ್ಯಾಪಿ ಸಂಘಟನೆ ರೂಪಿಸುತ್ತಿರುವುದು ಶ್ಲಾಘನೀಯವಾಗಿದೆ ಎಂದು ವಿಧಾನ ಪರಿಷತ್ತಿನ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.


ಅವರು ಸೋಮವಾರ ಪೂಜ್ಯ ಚೆನ್ನಬಸವ ಪಟ್ಟದೇವರ ರಂಗಮಂದಿರದಲ್ಲಿ ಅಖಿಲ ಕರ್ನಾಟಕ ರಾಜ್ಯ ಸರಕಾರಿ ಮಹಿಳಾ ನೌಕರರ ಸಂಘ ಜಿಲ್ಲಾ ಘಟಕದ ವತಿಯಿಂದ ಹಮ್ಮಿಕೊಂಡಿದ್ದ ಜಿಲ್ಲಾ ಘಟಕದ ಉದ್ಘಾಟನೆ, ಮತ್ತು ಪದಗ್ರಹಣ ಕಾರ್ಯಕ್ರಮ ಹಾಗೂ ಸರಕಾರಾದ ಯೋಜನೆಗಳ ಅನುಷ್ಠಾನ ಮತ್ತು ಆಡಳಿತದಲ್ಲಿ ಮಹಿಳೆಯರ ಪಾತ್ರ ಕುರಿತು ಒಂದು ದಿನದ ಕಾರ್ಯಾಗಾರ ಕುರಿತು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಬೀದರ್‌ನಲ್ಲಿ ಇಷ್ಟೊಂದು ದೊಡ್ಡ ಮಟ್ಟದ ಕಾರ್ಯಕ್ರಮ ಆಯೋಜಿಸಿರುವುದು ನನಗೆ ಅಪಾರ ಸಂತೋಷ ತಂದಿದೆ ಎಂದ ಅವರು ಹೆಣ್ಣು ಮಕ್ಕಳು ಸಮಾಜದ ಎಲ್ಲಾ ರಂಗಗಳಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುತ್ತಾರೆ ಎಂದು ಪ್ರಶಂಸಿದರು, ಇನ್ನಷ್ಟು ಸಂಘಟಿತರಾಗಿ ಒಗ್ಗಟ್ಟು ಪ್ರದರ್ಶಿಸುವುದು ಅಗತ್ಯವೆಂದರು. ತಮ್ಮ ಹಕ್ಕುಗಳಿಗಾಗಿ ನಿರಂತರ ಹೋರಾಟ ಮಾಡುವುದು ತುಂಬಾ ಅವಶ್ಯಕ. ಹೋರಾಟದ ಮೂಲಕವೇ ಬದಲಾವಣೆ ಸಾಧ್ಯ ಎಂದು ಸಭಾಪತಿಗಳು ಅಭಿಪ್ರಾಯಪಟ್ಟರು.

## ಜೋಡು ಎತ್ತುಗಳಿಗೆ ಸಿಡಿಲು ಬಡಿತ



**ಯಲಬುರ್ಗಾ:** ತಾಲೂಕಿನ ಹುಲೇಗುಡ್ಡ ಗ್ರಾಮದ ರೈತ ಅಜ್ಜಪ್ಪ ಶರಣಪ್ಪ ಬಂಡ್ಲಿ ಅವರ ಬದುಕು ಬಾಳಿಗೆ ಆಸರೆಯಾದ ಎರಡು ಜೋಡೆತ್ತುಗಳಿಗೆ ಫೆ.23 ರಂದು ಮದ್ಯಾಹ್ನ 3.30ಕ್ಕೆ ರಬಸವಾಗಿ ಸಿಡಿಲು ಬಡಿದಿರುವ ಪರಿಣಾಮವಾಗಿ 62 ಸಾವಿರ ರೂಗಳ ಎತ್ತು ಸಾವನ್ನಪ್ಪಿದೆ. 72 ಸಾವಿರ ರೂ.ಗಳ ಎತ್ತು ಸಾವು ಬದುಕಿನಲ್ಲಿದೆ. ಇದರಿಂದ ರೈತನ ಬಾಳು ಕತ್ತಲಮಯವಾಗಿದೆ ಸಂಬಂಧಿಸಿದ ಅಧಿಕಾರಿಗಳು ಪರಿಶೀಲನೆ ಮಾಡಿ ಪರಿಹಾರ ಒದಗಿಸುವಲ್ಲಿ ಮುಂದಾಗಬೇಕು ಎಂದು ರೈತ ಕುಟಂಬದವರು ವಿನಂತಿಸಿದ್ದಾರೆ.

## ಕೇಂದ್ರ ಬಜೆಟ್ ಘೋಷಣೆ ನಂತರದ ಕೈಗಾರಿಕಾ ಸದಸ್ಯರೊಂದಿಗೆ ಸಂವಾದ ಸಭೆ



**ಪೀಣ್ಯ ದಾಸರಹಳ್ಳಿ:** ಜಗತ್ತಿಗೆ ಬೇಕಾದ ಬೇಡಿಕೆಯ ವಸ್ತುಗಳನ್ನು ದೊಡ್ಡ ಪ್ರಮಾಣದಲ್ಲಿ ಉತ್ಪಾದನೆ ಮಾಡಬೇಕು. ಕೌಶಲ್ಯ ಆಧಾರಿತ ಉದ್ಯೋಗ ಜಾಸ್ತಿಯಾಗಲಿದೆ. ನವೀಕರಿಸಬಹುದಾದ ಶಕ್ತಿ ಮತ್ತು ಎಐ ಟೆಕ್ನಾಲಜಿಯಲ್ಲಿ ಭಾರತ ಮೂರನೇ ಸ್ಥಾನದಲ್ಲಿದೆ' ಎಂದು ಗ್ರಾಹಕ ವ್ಯವಹಾರ, ಆಹಾರ ಮತ್ತು ಸಾರ್ವಜನಿಕ ವಿತರಣೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದರು. ಪಿಐಎ ಸಭಾಂಗಣದಲ್ಲಿ 2026 ರ ಕೇಂದ್ರ ಬಜೆಟ್ ಘೋಷಣೆ ನಂತರದ ಕೈಗಾರಿಕಾ ಸದಸ್ಯರೊಂದಿಗೆ ಸಂವಾದ ಸಭೆಯಲ್ಲಿ ಮಾತನಾಡಿದರು. 2047ಕ್ಕೆ ವಿಕಸಿತ ಭಾರತದ ಕಲ್ಪನೆ ಇಟ್ಟುಕೊಂಡು ಬಜೆಟ್ ನೀಡಲಾಗಿದೆ. ಏರ್ ಫೋರ್ಸ್, ಏರ್ ಕ್ರಾಫ್ಟ್ ಗೆ ಒತ್ತು ನೀಡಲಾಗಿದೆ. ದೇಶದ ಮೂರು ಕಡೆ ದೊಡ್ಡ ಕೆಮಿಕಲ್ ಪಾರ್ಕ್ ಮಾಡಲಾಗುತ್ತಿದೆ ಕೌಶಲ್ಯಕ್ಕೆ ಹೆಚ್ಚು ಆದ್ಯತೆ ನೀಡಿದೆ. ಎಲೆಕ್ಟ್ರಾನಿಕ್ಸ್ ಉತ್ಪಾದನೆಯಲ್ಲಿ ಆರು ಪಟ್ಟು ಜಾಸ್ತಿಯಾಗಿದೆ. ಹೆಚ್ಚು ಉತ್ಪಾದನೆ ದೇಶದಲ್ಲಿ ಆಗಬೇಕು. ಹೆಚ್ಚು ಹೆಚ್ಚು ರಫ್ತು ಆಗಬೇಕು. ಆತ್ಮ ನಿರ್ಭರತೆಯ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳಿಗೆ ಪ್ರೋತ್ಸಾಹ ನೀಡಲಾಗಿದೆ' ಎಂದರು.

## ಬಾಲಕಿ ಮೇಲೆ ಅತ್ಯಾಚಾರ ಯತ್ನ: ಶಿಕ್ಷಕ ಸೆರೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಜಿಲ್ಲೆಯ ಕಂಪ್ಲಿ ತಾಲೂಕಿನ ಒಂದು ಗ್ರಾಮದಲ್ಲಿ ಮನಕಲಕುವ ಘಟನೆ ಬೆಳಕಿಗೆ ಬಂದಿದೆ. ಸರ್ಕಾರಿ ಶಾಲೆಯಲ್ಲಿ ಓದುತ್ತಿರುವ 10 ವರ್ಷದ ಬಾಲಕಿ ಮೇಲೆ ಅಥಿತಿ ಶಿಕ್ಷಕನಿಂದ ಅತ್ಯಾಚಾರ ಯತ್ನ ನಡೆದಿದೆ ಎಂಬ ಆರೋಪ ಕೇಳಿಬಂದಿದೆ.

ಲಭ್ಯ ಮಾಹಿತಿಯ ಪ್ರಕಾರ, ಶಾಲೆಯಲ್ಲಿ ಕಸ ಹೊಡಿಸುವ ನೆಪದಲ್ಲಿ ಬಾಲಕಿಯನ್ನು ತನ್ನ ಮನೆಗೆ ಕ-ರೆದೊಯ್ದು ಶಿಕ್ಷಕನು ದುಷ್ಕೃತ್ಯಕ್ಕೆ ಯತ್ನಿಸಿದ್ದಾನೆ ಎನ್ನಲಾಗಿದೆ. ಈ ವಿಷಯವನ್ನು ಯಾರಿಗೂ ತಿಳಿಸದಂತೆ ಬಾಲಕಿಗೆ ಜೀವ ಬೆದರಿಕೆ ಹಾಕಲಾಗಿದೆ ಎಂಬ ಮಾಹಿತಿ ದೊರೆತಿದೆ. ಸುಮಾರು ಒಂದು ವಾರದ ಹಿಂದೆ ನಡೆದ ಈ ಘಟನೆ ತಡವಾಗಿ ಬೆಳಕಿಗೆ ಬಂದಿದೆ.

ಈ ಸಂಬಂಧ ಕಂಪ್ಲಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೋಕ್ಸೋ ಕಾಯ್ದೆಯಡಿಯಲ್ಲಿ ಆರೋಪಿಯನ್ನು ಬಂಧಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ಘಟನೆಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿರುವ ಗ್ರಾಮಸ್ಥರು ಇಂದು ಶಾಲೆಗೆ ಬೀಗ ಹಾಕಿ ಪ್ರತಿಭಟನೆ ನಡೆಸಿದರು. ಕಾಮುಕ ಶಿಕ್ಷಕನ ಮೇಲೆ ಕಠಿಣ ಕ್ರಮ ಕೈಗೊಳ್ಳುವಂತೆ ಅವರು ಆಗ್ರಹಿಸಿದ್ದಾರೆ. ಘಟನಾ ಸ್ಥಳಕ್ಕೆ ಡಿವೈಎಸ್ಪಿ, ಸಿಪಿಐ ಸೇರಿದಂತೆ ಕಂಪ್ಲಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪ್ರಕರಣದ ಸತ್ಯಾಸತ್ಯತೆ ಕುರಿತು ಪೊಲೀಸ್ ತನಿಖೆಯಿಂದ ಸ್ಪಷ್ಟ ಮಾಹಿತಿ ಹೊರಬರಬೇಕಿದೆ.

## ಬಸವಣ್ಣನ ತತ್ವವೇ ನಮ್ಮ ಸರ್ಕಾರದ ಆಧಾರ

• ಮಲ್ಲಮ್ಮ ನುಡಿ ವಾರ್ತೆ ಬೀದರ



ಒಳಮೀಸಲಾತಿ ಕುರಿತು ಉಂಟಾಗಿರುವ ಗೊಂದಲದ ಹಿನ್ನೆಲೆಯಲ್ಲಿ ಪ್ರತಿಭಟನೆಯಲ್ಲಿ ನಿರತರಾಗಿದ್ದವರನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಅವರು ಭೇಟಿ ಮಾಡಿ ಮನವಿ ಆಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, "12ನೇ ಶತಮಾನದಲ್ಲೇ ಇಡೀ ಜಗತ್ತಿಗೆ ಸಾಮಾಜಿಕ ನ್ಯಾಯದ ಪರಿಕಲ್ಪನೆಯನ್ನು ನೀಡಿದ ವಿಶ್ವಗುರು ಬಸವಣ್ಣನವರ ತತ್ವಗಳೇ ನಮ್ಮ ಸರ್ಕಾರದ ಆಧಾರ. ಸಮ ಸಮಾಜ ನಿರ್ಮಾಣ ಮತ್ತು ಎಲ್ಲ ವರ್ಗಗಳಿಗೆ ಸಾಮಾಜಿಕ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದಾರೆ. ಈ ಹೋರಾಟಕ್ಕೆ ನಮ್ಮ ಸಂಪೂರ್ಣ ಬೆಂಬಲವಿದೆ" ಎಂದು ತಿಳಿಸಿದರು.

ಒಳಮೀಸಲಾತಿ ವಿಷಯವನ್ನು ಮುಂದಿನ ಅಧಿವೇಶನದಲ್ಲಿ ಸಮಗ್ರವಾಗಿ ಚರ್ಚಿಸಿ, ಮಾನ್ಯ ಮುಖ್ಯಮಂತ್ರಿಗಳೊಂದಿಗೆ ಸಮಾಲೋಚನೆ ನಡೆಸಲಾಗುವುದು. ಯಾವುದೇ ಜಾತಿಗೆ ಅನ್ಯಾಯವಾಗದಂತೆ, ಎಲ್ಲ ವರ್ಗಗಳನ್ನು ಒಳಗೊಂಡು ಎಲ್ಲರಿಗೂ ನ್ಯಾಯ ಒದಗಿಸುವ ರೀತಿಯಲ್ಲಿ ಒಳಮೀಸಲಾತಿ ಜಾರಿಗೆ ತರಲು ಸರ್ಕಾರ ಬದ್ಧವಾಗಿದೆ ಎಂದು ಭರವಸೆ ನೀಡಿದರು.

ಸಮಾಜದಲ್ಲಿ ಶಾಂತಿ, ಸಮಾನತೆ ಹಾಗೂ ಸಾಮಾಜಿಕ ನ್ಯಾಯವನ್ನು ಕಾಪಾಡುವ ಉದ್ದೇಶದಿಂದ ಸರ್ಕಾರ ಜವಾಬ್ದಾರಿಯುತ ಮತ್ತು ನ್ಯಾಯಸಮ್ಮತ ನಿರ್ಧಾರ ಕೈಗೊಳ್ಳಲಿದೆ ಎಂದು ಸಚಿವರು ಹೇಳಿದರು.

## ಚನ್ನಬಸವೇಶ್ವರ ಗುರುಕುಲದಲ್ಲಿ 6ನೇ ತರಗತಿ ಪ್ರವೇಶ ಪರೀಕ್ಷೆ





ಕನ್ನಡ ಮಾಧ್ಯಮದ ಶಿಕ್ಷಣಕ್ಕೆ ಉತ್ತೇಜನ ನೀಡುವ ಸದಾಶಯದೊಂದಿಗೆ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರ ಮಾರ್ಗದರ್ಶನದಲ್ಲಿ ನಡೆದ ಸ್ಕಾಲರ್‌ಶಿಪ್ ಪ್ರವೇಶ ಪರೀಕ್ಷೆಗೆ ನಿರೀಕ್ಷೆಗೂ ಮೀರಿ ಉತ್ತಮ ಸ್ಪಂದನೆ ದೊರೆತಿದೆ. ಪರೀಕ್ಷೆಗೆ ಹಾಜರಾದ ಎಲ್ಲ ವಿದ್ಯಾರ್ಥಿಗಳಿಗೆ ಅಭಿನಂದನೆಗಳು.

–ಮೋಹನ ರೆಡ್ಡಿ, ಆಡಳಿತಾಧಿಕಾರಿಗಳು ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ಭಾಲ್ಕಿ

• ಪರಶುರಾಮ ಕರಣಂ, ಭಾಲ್ಕಿ

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದಲ್ಲಿ 2026-27ನೇ ಸಾಲಿನ 6ನೇ ತರಗತಿಯ ಕನ್ನಡ ಮಾಧ್ಯಮದ ಸ್ಕಾಲರ್‌ಶಿಪ್ ಪ್ರವೇಶಕ್ಕೆ ನಡೆದ ಎರಡು ಹಂತದ ಪರೀಕ್ಷೆಯಲ್ಲಿ ಒಟ್ಟು 4777 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ ಎಂದು ಪ್ರಾಚಾರ್ಯ ಬಸವರಾಜ ಮೊಳಕೀರೆ ತಿಳಿಸಿದ್ದಾರೆ.

ಭಾನುವಾರ ನಡೆದ ಎರಡನೇ ಹಂತದ ಪರೀಕ್ಷೆಯಲ್ಲಿ 2554 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ. ಇನ್ನೂ ಇದಕ್ಕೂ ಮುನ್ನ ಕಳೆದ ಭಾನುವಾರ ನಡೆದ ಪ್ರಥಮ ಹಂತದ ಪರೀಕ್ಷೆಯಲ್ಲಿ 2223 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು.

ಬೀದರ್ ಜಿಲ್ಲೆ ಅಲ್ಲದೇ ಕಲಬುರಗಿ, ಯಾದಗಿರಿ, ವಿಜಯಪುರ, ಬಾಗಲಕೋಟ, ಬೆಳಗಾವಿ ಸೇರಿ ಮುಂತಾದ ಜಿಲ್ಲೆಗಳಿಂದ ವಿದ್ಯಾರ್ಥಿಗಳು ಈ ಸ್ಕಾಲರ್‌ಶಿಪ್ ಪರೀಕ್ಷೆಗೆ ಹಾಜರಾಗಿದ್ದರು ಎಂದು ತಿಳಿಸಿದ್ದಾರೆ. ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ವತಿಯಿಂದ ಕನ್ನಡ ಮಾಧ್ಯಮದ ಶಿಕ್ಷಣಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ಸ್ಕಾಲರ್‌ಶಿಪ್ ಪರೀಕ್ಷೆ ಏರ್ಪಡಿಸಿ ಕ್ರಮವಾಗಿ ಹೆಚ್ಚು ಅಂಕ ಗಳಿಸುವ 30 ವಿದ್ಯಾರ್ಥಿಗಳಿಗೆ 5 ವರ್ಷ ಉಚಿತ ಶಿಕ್ಷಣ, ವಸತಿ, ಕೋಚಿಂಗ್ ಸೌಲಭ್ಯ ಸಿಗಲಿದೆ ಎಂದಿದ್ದಾರೆ.

## ರಂಜಾನ್–ಹೋಳಿ ಹಬ್ಬದ ವೇಳೆ ಅಹಿತಕರ ಘಟನೆ ನಡೆದರೆ ಕ್ರಮ



ಎಚ್ಚರ–ಜನಪರ


● ಡಾ.ಜಿ ಪರಮೇಶ್ವರ

ರಾಜ್ಯ ಗೃಹಸಚಿವ

ರಾಜ್ಯದಲ್ಲಿ ರಂಝಾನ್ ಮತ್ತು ಹೋಳಿ ಹಬ್ಬದ ಹಿನ್ನೆಲೆಯಲ್ಲಿ ಯಾವುದೇ ರೀತಿಯಲ್ಲಿ ಅಹಿತಕರ ಘಟನೆಗಳು ನಡೆಯದಂತೆ ಎಚ್ಚರಿಕೆ ವಹಿಸಲು ರಾಜ್ಯ ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳಿಗೆ ಗೃಹ ಸಚಿವ ಡಾ. ಜಿ ಪರಮೇಶ್ವರ್ ಮಹತ್ವದ ಸೂಚನೆಯನ್ನು ನೀಡಿದ್ದಾರೆ. ಈ ಕುರಿತಾಗಿ ಬೆಂಗಳೂರಿನಲ್ಲಿ ಸೋಮವಾರ ಮಾತನಾಡಿದ ಅವರು, ಯಾರೂ ಕಾನೂನು ಕೈಗೆತ್ತಿಕೊಳ್ಳದಂತೆ ಮನವಿ ಮಾಡಿಕೊಂಡರು.

**ರಾಜೀನಾಮೆ ಕೊಡಲು ಸಿದ್ಧ ಎಂದ ಪರಮೇಶ್ವರ್, ಸಂಚಲನ ಮೂಡಿಸಿದ ಹೋಮ್ ಮಿನಿಸ್ಟರ್ ಹೇಳಿಕೆ:** ರಂಜಾನ್ ಹಬ್ಬ ಹಾಗೂ ಹೋಳಿ ಹಬ್ಬ ಆಚರಣೆ ವೇಳೆ ಯಾರು ಕೂಡ ಕಾನೂನು ಕೈಗೆತ್ತಿಕೊಳ್ಳಲು ಅವಕಾಶ ಕೊಡಬಾರದು. ಸಂತೋಷದಿಂದ ಹಬ್ಬ ಆಚರಿಸಬೇಕು. ಅದನ್ನು ಬಿಟ್ಟು ಬೇರೆ ರೀತಿಯಲ್ಲಿ ನಡೆಸಲು ಅವಕಾಶವಿಲ್ಲ. ಅದ-ಕ್ಕೆ ಅವಕಾಶ ಕೊಡುವುದೂ ಇಲ್ಲ. ಈ ಬಗ್ಗೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ಬಾಗಲಕೋಟೆಯಲ್ಲಿ ಶಿವಾಜಿ ಜಯಂತಿ ಮೆರವಣಿಗೆಯ ಸಂದರ್ಭದಲ್ಲಿ ನಡೆದ ಅಹಿತಕರ ಘಟನೆ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆ ಎಚ್ಚೆತ್ತುಕೊಂಡಿದೆ. ಇದು ಬೇರೆ ಕಡೆಗಳಿಗೆ ಹರಡದಂತೆ ಎಚ್ಚರಿಕೆಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಈ ನಿಟ್ಟಿನಲ್ಲಿ ಇದೀಗ ಹೋಳಿ ಹಬ್ಬವೂ ಬರುತ್ತಿರುವ ಹಿನ್ನೆಲೆಯಲ್ಲಿ ಗೃಹ ಇಲಾಖೆ ಕಟ್ಟುನಟ್ಟಿನ ಕ್ರಮಗಳಿಗೆ ಮುಂದಾಗಿದೆ.




ದುಷ್ಕೃತ್ಯಕ್ಕೆ ಸಂಚು ರೂಪಿಸಿದ್ದ ಅಕ್ರಮ ಬಾಂಗ್ಲಾ ವಲಸಿಗರ ಬಂಧನ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಆಂತರಿಕ ಭದ್ರತಾ ವಿಭಾಗದವರು ಅಲರ್ಟ್ ಮಾಡಿದ್ದಾರೆ. ಕಳೆದ ಒಂದು ತಿಂಗಳಿಂದ ಪ್ರತಿ ಜಿಲ್ಲೆಯಲ್ಲಿ ಅಕ್ರಮ ಬಾಂಗ್ಲಾ ವಲಸಿಗರ ಪತ್ತೆಗೆ ಕಾರ್ಯಾಚರಣೆ ಕೈಗೊಳ್ಳಲಾಗುತ್ತಿದೆ. ಕಾಫಿ ತೋಟ, ಕಟ್ಟಡಗಳಲ್ಲಿ ಕೆಲಸ ಮಾಡುತ್ತಾರೆ ಎಂಬುದನ್ನು ಕೂಡ ವಿಪಕ್ಷದವರು ಹೇಳಿದ್ದರು. ಇದನ್ನು ಗಂಭೀರವಾಗಿ ಪರಿಗಣಿಸಿ, ಎಲ್ಲ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಸೂಚನೆ ಕೊಟ್ಟಿದ್ದೇವೆ. ಪ್ರತಿ ಪೊಲೀಸ್ ಠಾಣೆ ಹಂತದಲ್ಲಿ ಕ್ರಮ ತೆಗೆದುಕೊಳ್ಳಬೇಕು ಎಂದು ಸೂಚನೆ ನೀಡಲಾಗಿದೆ ಎಂದು ಹೇಳಿದರು.

**ಸಿದ್ದರಾಮಯ್ಯ ಸಾಮಾಜಿಕ ನ್ಯಾಯದ ಪರ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜಕೀಯದ ಅಡಿಪಾಯವೇ ಸಾಮಾಜಿಕ ನ್ಯಾಯ. ಆ ಸಿದ್ಧಾಂತದ ಮೇಲೆ ರಾಜಕೀಯ ಮಾಡಿಕೊಂಡು ಬಂದಿದ್ದಾರೆ. ಇದರಲ್ಲಿ ಹೊಸದೇನು ಇಲ್ಲ ಎಂದು ಡಾ. ಜಿ.ಪರಮೇಶ್ವರ ಅವರು ಹೇಳಿದರು. ಸಿದ್ದರಾಮಯ್ಯ ಅವರು ಸಾಮಾಜಿಕ ನ್ಯಾಯದ ಮೇಲೆ ಬದ್ಧರಾಗಿದ್ದಾರೆ. ಹಿಂದಿನಿಂದಲೂ ಕೂಡ ಸಾಮಾಜಿಕ ನ್ಯಾಯದ ಪರವಾಗಿದ್ದಾರೆ. ಅವರ ರಾಜಕೀಯದ ಅಡಿಪಾಯವೇ ಸಾಮಾಜಿಕ ನ್ಯಾಯ. ಹೊಸದಾಗಿ ಇವತ್ತು ಮಾಡುತ್ತಿಲ್ಲ ಎಂದರು.

**ಮೊಬೈಲ್ ಬ್ಯಾನ್ ಚಿಂತನೆ:** ಮೊಬೈಲ್ ಬ್ಯಾನ್ ವಿಚಾರದ ಕುರಿತು ಮಾತನಾಡಿ, ಶಾಲಾ-ಕಾಲೇಜುಗಳಲ್ಲಿ ಮೊಬೈಲ್ ಬ್ಯಾನ್ ಮಾಡುವ ಬಗ್ಗೆ ಚಿಂತನೆ ನಡೆದಿದೆ. 16 ವರ್ಷದೊಳಗಿನ ಮಕ್ಕಳಿಗೆ ಮೊಬೈಲ್ ಕೊಟ್ಟರೆ ವಿದ್ಯಾಭ್ಯಾಸದ ಮೇಲೆ ಬೇರೆ ರೀತಿಯ ಪರಿಣಾಮ ಬೀರುತ್ತಿದೆ. ಬಹಳಷ್ಟು ದೇಶಗಳಲ್ಲಿ ಅಧ್ಯಯನ ನಡೆಸಿ ಮೊಬೈಲ್ ಬ್ಯಾನ್ ಮಾಡಿದ್ದಾರೆ. ಈ ಬಗ್ಗೆ ಮುಖ್ಯಮಂತ್ರಿಗಳು ಕೂಡ ಚಿಂತನೆ ಹರಿಸಿದ್ದಾರೆ. ಇದರ ಸಾಧಕ ಬಾಧಕಗಳನ್ನು ಅಧ್ಯಯನ ನಡೆಸಿ ತೀರ್ಮಾನ ಮಾಡುತ್ತಾರೆ ಎಂದರು.

ದಲಿತ ಸಿಎಂ ಕೂಗು ವಿಚಾರದ ಕುರಿತು ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿ, ಇದೆಲ್ಲ ವಿರೋಧ ಪಕ್ಷದವರು ಮಾಡುತ್ತಿರುವ ಕೆಲಸ. ವಿರೋಧ ಪಕ್ಷದವರು ತಮ್ಮ ವಿಚಾರಗಳನ್ನು ಮುಚ್ಚಿಟ್ಟುಕೊಳ್ಳಲು ಸುಮ್ಮನೆ ಆರೋಪಗಳನ್ನು ಮಾಡುತ್ತಿದ್ದಾರೆ. ಮುಖ್ಯಮಂತ್ರಿಗಳು ಆಡಳಿತ ಮಾಡುತ್ತಿಲ್ಲವೇ? ಕಳೆದ ಹನ್ನೆರಡು ದಿನಗಳಿಂದ ಬಜೆಟ್ ಕುರಿತು ವಿವಿಧ ಇಲಾಖೆಯ ಸಚಿವರು ಮತ್ತು ಅಧಿಕಾರಿಗಳೊಂದಿಗೆ ಚರ್ಚೆ ಮಾಡುತ್ತಿದ್ದಾರೆ. ಮುಖ್ಯಮಂತ್ರಿ ಕೂಗು ವಿಚಾರವನ್ನು ವಿರೋಧ ಪಕ್ಷದವರು ಸುಮ್ಮನೆ ಹೊರಗೆ ತರುತ್ತಿದ್ದಾರೆ ಎಂದ ಅವರು, ದಲಿತ ಸಿಎಂ ಕಾಂಗ್ರೆಸ್ ಪಕ್ಷದವರೆ ಮಾಡಬೇಕಲ್ಲ.? ಇನ್ಯಾರು ಮಾಡುತ್ತಾರೆ. ಸಂದರ್ಭ ಬಂದಾಗ ಹೈಕಮಾಂಡ್ ಅವರು ತೀರ್ಮಾನ ಮಾಡುತ್ತಾರೆ ಎಂದು ಹೇಳಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)